ಮೇಲ್ಕಂಡ ಆರೋಪದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತು ಪ್ರಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರು, ರಾಮನಗರ, ಇವರು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ: 21–03–09ರ ಆದೇಶದಲ್ಲಿ ಅರ್ಜಿದಾರರ ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷ ಕಾಲ ಮುಂದಿನ ವಾರ್ಷಿಕ ವೇತನ ಬಡ್ತಿಗಳಿಗೆ ದಕ್ಕೆಯಾಗದಂತೆ ಮುಂದೂಡುವ ದಂಡನೆಯನ್ನು ವಿಧಿಸಿದ್ದಾರೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಪೊಲೀಸ್ ಮಹಾ ನಿರೀಕ್ಷಕರು, ಕೇಂದ್ರ ವಲಯ, ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: 08–09–2009ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನೂ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ನಿರ್ಲಕ್ಷತೆ, ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವೆಂದು ಪರಿಗಣಿಸುತ್ತಾ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂ.: ಒಇ 217 ಪೊಸಿಅ 2009, ಬೆಂಗಳೂರು, ದಿನಾಂಕ: 19–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಶ್ರೀಕಂಠಾಚಾರಿ, ಎಚ್.ಸಿ.–678, ತಲಘಟ್ಟಪುರ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 1641

ಟಿ.ಎನ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಶಿಕ್ಷಣ ಸಚಿವಾಲಯ

ವಿಷಯ : 2010-11ರ ಆರ್ಥಿಕ ವರ್ಷಕ್ಕೆ ಕರ್ನಾಟಕ ಪಠ್ಯಪುಸ್ತಕ ಸಂಘದ ಸಿಬ್ಬಂದಿ ವೇತನ ಭತ್ಯೆ ಇತರೇ ವೆಚ್ಚ ಹಾಗೂ ಪಠ್ಯಪುಸ್ತಕಗಳ ಮುದ್ರಣ ವೆಚ್ಚಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರುರವರ ಪತ್ರ ಸಂಖ್ಯೆ: ಕಪಪುಸಂ;ಲೆಶಾ1:01:10-11 ದಿನಾಂಕ: 29-04-2010.

ಪ್ರಸ್ತಾವನೆ:

1. ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇವರು ಲೆಕ್ಕ ಶೀರ್ಷಿಕೆ: 2058-00-103-0-09-101 (ಯೋಜನೇತರ)ರಡಿಯಲ್ಲಿ ರೂ. 3423.15 ಲಕ್ಷಗಳನ್ನು ಕರ್ನಾಟಕ ಪಠ್ಯಪುಸ್ತಕ, ಸಂಘಕ್ಕೆ ಅನುದಾನ ಹಂಚಿಕೆ ಮಾಡಲಾಗಿದ್ದು. ಸದರಿ ಅನುದಾನದಲ್ಲಿ ದಿನಾಂಕ: 01-04-2010 ರಿಂದ 31-07-2010ರವರೆಗಿನ ಸಿಬ್ಬಂದಿ ವೇತನ ಭತ್ಯೆ ಇತರೇ ವೆಚ್ಚ ಹಾಗೂ ಪಠ್ಯಪುಸ್ತಕ ಮುದ್ರಣ ವೆಚ್ಚಕ್ಕಾಗಿ ರೂ. 1100.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.
2. ಸದರಿ ಪ್ರಸ್ತಾವನೆ ಬಗ್ಗೆ ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಇಡಿ: 134 ಯೋಯೋಕ 2010 ಬೆಂಗಳೂರು, ದಿನಾಂಕ: 11-06-2010
[ಇಡಿ:73: ಸ್ಟೀಮರ(ಯುನಿಕ್) 2010, ದಿನಾಂಕ: 11-06-2010]

3. 2010-11ನೇ ಸಾಲಿಗೆ ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇದರ ಸಿಬ್ಬಂದಿ ವೇತನ ಭತ್ಯೆ ಇತರೇ ವೆಚ್ಚ ಹಾಗೂ ಪಠ್ಯಪುಸ್ತಕ ಮುದ್ರಣ ವೆಚ್ಚಕ್ಕಾಗಿ ಲೆಕ್ಕಶೀರ್ಷಿಕೆ 2058-00-103-0-09-101 (ಯೋಜನೇತರ) ಅಡಿಯಲ್ಲಿ ಮೊದಲ ಕಂತು ಶೇ. 25ರಷ್ಟು ಎಂದರೆ ರೂ. 855.78 (ಎಂಟು ನೂರಐವತ್ತೈದು ಲಕ್ಷ ಎಪ್ಪತ್ತೆಂಟು ಸಾವಿರ ರೂಪಾಯಿಗಳು ಮಾತ್ರ) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲಾಗಿದೆ. ಸದರಿ ಮೊತ್ತವನ್ನು ಪಾವತಿಸುವ ಸಲುವಾಗಿ ಖಜಾನೆಯಲ್ಲಿ ಅಪ್‌ಲೋಡ್ ಮಾಡಿಸಲು ನಿರ್ದೇಶಕರು, ಮುದ್ರಣ ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಿದೆ ಮತ್ತು ಸದರಿ ಮೊತ್ತವನ್ನು ರಾಜ್ಯ ಹುಜೂರು ಖಜಾನೆಯಿಂದ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇವರು ಡ್ರಾ ಮಾಡಲು ಅನುಕೂಲವಾಗುವಂತೆ ಅವರು ಸಲ್ಲಿಸುವ ಬಿಲ್ಲುಗಳಿಗೆ ಮೇಲು ಸಹಿಮಾಡುವ ಅಧಿಕಾರವನ್ನು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಲಾಗಿದೆ.
4. ಸದರಿ ಆದೇಶವನ್ನು ಶಿಕ್ಷಣ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಅನಧಿಕೃತ ಟಿಪ್ಪಣಿ ಸಂಖ್ಯೆ: ಶಿಇ:982ಐಎಸ್(ಬಿಮತ್ತುಎ)2010. ದಿನಾಂಕ: 22-05-2010ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 1642

ಐ.ಎಫ್. ಮಾಗಿ
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ)

ಶಿಕ್ಷಣ ಸಚಿವಾಲಯ

ವಿಷಯ : ಹಾಸನ ತಾಲ್ಲೂಕಿನ ಕೋರಹೊಂಗಲ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೆ ಸೇರಿದ 14.37 ಎಕರೆಯಲ್ಲಿ 32 ಗುಂಟೆ ಜಮೀನನ್ನು ಸಾರ್ವಜನಿಕ ರಸ್ತೆಗೆ ಬಿಟ್ಟುಕೊಡುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರುರವರ ಪತ್ರ ಸಂಖ್ಯೆ: ಯೋ 7 ಸರ್ಕಾರಿ ಶಾಲಾ ಜಮೀನನ್ನು 64/2009-10 ದಿನಾಂಕ: 31-03-2010.

ಪ್ರಸ್ತಾವನೆ:

1) ಮೇಲೆ ಓದಲಾದ ಪತ್ರದಲ್ಲಿ ಸರ್ಕಾರಿ ಪ್ರೌಢ ಶಾಲೆ, ಕೋರಹೊಂಗಲ ಗ್ರಾಮ, ಹಾಸನ ತಾಲ್ಲೂಕು ಇಲ್ಲಿಗೆ ಸೇರಿದ 14.37 ಎಕರೆಯಲ್ಲಿ 32 ಗುಂಟೆ ಜಮೀನನ್ನು ಸಾರ್ವಜನಿಕ ರಸ್ತೆಗೆ ಬಿಟ್ಟುಕೊಡಬಹುದೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಶಿಫಾರಸ್ಸು ಮಾಡಿದ್ದು, ಅದರಂತೆ ಜಮೀನು ಹಸ್ತಾಂತರದ ಬಗ್ಗೆ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

2) ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 343 ಯೋಸಕ 2009, ಬೆಂಗಳೂರು, ದಿನಾಂಕ: 15–06–2010.
[ಇಡಿ 74 ಸ್ಕೀಮರ (ಯುನಿಕ್) 2010, ದಿನಾಂಕ: 15–06–2010]

ಹಾಸನ ತಾಲ್ಲೂಕಿನ ಕೋರಹೊಂಗಲ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೆ ಸೇರಿದ 14.37 ಎಕರೆಯಲ್ಲಿ 32 ಗುಂಟೆ ಜಮೀನನ್ನು ನಿಯಮಾನುಸಾರ ಪರಿಹಾರದ ಹಣವನ್ನು ಪಡೆದು ಶಾಲಾ ಮೇಲುಸ್ತುವಾರಿ ಮತ್ತು ಅಭಿವೃದ್ಧಿ ಸಮಿತಿಯ ಖಾತೆಗೆ ಜಮಾ ಮಾಡುವ ಷರತ್ತನ್ನು ವಿಧಿಸಿ ಸಾರ್ವಜನಿಕ ರಸ್ತೆ ನಿರ್ಮಿಸಲು ಸಂಬಂಧಿಸಿದ ಇಲಾಖೆಗೆ ಬಿಟ್ಟುಕೊಡಲು ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುರವರಿಗೆ ಅನುಮತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 1643

ಐ.ಎಫ್. ಮಾಗಿ
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ)

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ವಿಷಯ : ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಯನ್ನು ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿಗೆ ಸ್ಥಳಾಂತರಿಸುವ ಬಗ್ಗೆ.

ಓದಲಾಗಿದೆ: ಕೈಗಾರಿಕಾಭಿವೃದ್ಧಿ ಆಯುಕ್ತರ ಪತ್ರ ಸಂಖ್ಯೆ: ಆಡಳಿತ/ಸಿಬ್ಬಂದಿ/ಇ2/156/2009–10, ದಿನಾಂಕ: 29–12–2009 ಹಾಗೂ 23–02–2010.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ಸರ್ಕಾರಿ ಆದೇಶ ಸಂಖ್ಯೆ: ವಾಕೈ 210 ಕೈಸೇವಿ 2007, ದಿ: 01–01–2009 ರೀತ್ಯಾ ಇಲಾಖೆಯ ಸಿಬ್ಬಂದಿಯನ್ನು ಶೇ. 5 ರಷ್ಟು ಕಡಿತಗೊಳಿಸುವ ಪ್ರಕ್ರಿಯೆಯಲ್ಲಿ ಪಾವಗಡ ತಾಲ್ಲೂಕಿನಲ್ಲಿ ಖಾಲಿ ಇದ್ದ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಯನ್ನು ಹಿಂದೆ ರದ್ದುಗೊಳಿಸಲಾಗಿರುವ ಬಗ್ಗೆ ಸರ್ಕಾರದ ಗಮನವನ್ನು ಸೆಳೆಯಲಾಗಿದೆ. ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕು ತುಂಬಾ ಹಿಂದುಳಿದ ತಾಲ್ಲೂಕಾಗಿದ್ದು, ಕೈಗಾರಿಕೆಗಳಿಗೆ ಯಾವುದೇ ಉಪಯುಕ್ತ ಮಾಹಿತಿಗಳನ್ನು ಒದಗಿಸಲು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಕ್ಷೇತ್ರಾಧಿಕಾರಿಗಳು ಇಲ್ಲದೆ ತಾಲ್ಲೂಕಿನ ಕೈಗಾರಿಕಾಭಿವೃದ್ಧಿ ಕುಂಠಿತವಾಗಿರುವ ಬಗ್ಗೆ ಪ್ರಸ್ತಾಪಿಸಿ ಹಾಸನ ಜಿಲ್ಲೆಯ ಆಲೂರು ತಾಲ್ಲೂಕು ಅತೀ ಸಣ್ಣ ತಾಲ್ಲೂಕು ಇದ್ದು, ಸದರಿ ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆ ಸಹ ಖಾಲಿ ಇರುವುದರಿಂದ ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳ ಹುದ್ದೆಯನ್ನು ಪಾವಗಡ ತಾಲ್ಲೂಕಿಗೆ ಸ್ಥಳಾಂತರಿಸಲು ಕೋರಲಾಗಿರುತ್ತದೆ. ಈ ಕ್ರಮದಿಂದಾಗಿ ಯಾವದೇ ಬಂಡವಾಳ ವೆಚ್ಚ (non recurring) ಅಗುವುದಿಲ್ಲವೆಂದು ಸಹ ಸ್ಪಷ್ಟಪಡಿಸಲಾಗಿರುತ್ತದೆ. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ವಾಕೈ 03 ಕೈಸೇವಿ 2010, ಬೆಂಗಳೂರು, ದಿನಾಂಕ: 17–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಯನ್ನು ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿಗೆ ಕೂಡಲೇ ಜಾರಿಗೆ ಬರುವಂತೆ ಖಾಯಂ ಆಗಿ ಸ್ಥಳಾಂತರಿಸಿ ಆದೇಶಿಸಿದೆ. ಈ ಬದಲಾವಣೆಯಿಂದಾಗಿ ಆಲೂರು ತಾಲ್ಲೂಕಿನಲ್ಲಿ ಕೈಗಾರಿಕಾ ವಿಸ್ತರಣಾಧಿಕಾರಿಗಳು ನಿರ್ವಹಿಸುತ್ತಿದ್ದ ಕರ್ತವ್ಯಗಳನ್ನು ನಿರ್ವಹಿಸಲು ಪರ್ಯಾಯ ವ್ಯವಸ್ಥೆಯನ್ನು ಕೈಗಾರಿಕಾ ನಿರ್ದೇಶನಾಲಯವು ಮಾಡತಕ್ಕದ್ದೆಂದು ನಿರ್ದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 1644

ಬಿ.ಸಿ. ಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸೇವೆಗಳು)

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ವಿಷಯ : ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿರುವ ರಸ್ತೆ ಅಭಿವೃದ್ಧಿಗಳ ಕಾಮಗಾರಿ ಅನುಷ್ಠಾನಕ್ಕಾಗಿ 2010–11ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :
1) ಆಯುಕ್ತರು ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರ ಪತ್ರ ಸಂಖ್ಯೆ: ಡಿಎಸ್‌ಕೆ/ರಕರ/ಅನುದಾನ/3/2010–11 ದಿನಾಂಕ: 26–05–2010.
2) ಆಯುಕ್ತರು ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರವರ ಪತ್ರ ಸಂಖ್ಯೆ: ಡಿಎಸ್‌ಕೆ/ರಕರ/ಐಸಿಎಲ್/11/2009–10 ದಿನಾಂಕ: 09–06–2010.
3) ಸರ್ಕಾರದ ಆದೇಶ ಸಂಖ್ಯೆ: ವಾಕೈ 52 ಆಂಆಸ (1) 2010 ದಿನಾಂಕ: 01–04–2010.

ಪ್ರಸ್ತಾವನೆ:

ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನಕ್ಕಾಗಿ 2010-11ನೇ ಸಾಲಿನಲ್ಲಿ ಒದಗಿಸಲಾಗಿರುವ ರೂ. 250/- ಲಕ್ಷಗಳಲ್ಲಿ ಮೊದಲನೇ ತ್ರೈಮಾಸಿಕದ ಮೊತ್ತ ರೂ. 62.50 ಲಕ್ಷಗಳನ್ನು ಈ ಕೆಳಕಂಡ 4 ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಗೊಳಿಸಲು ಸಕ್ಕರೆ ನಿರ್ದೇಶಕರು ಮೇಲೆ ಓದಲಾದ (1) ಮತ್ತು (2)ರಲ್ಲಿರುವ ದಿನಾಂಕ 26-05-2010 ಮತ್ತು 09-06-2010ರ ಪತ್ರಗಳಲ್ಲಿ ಪ್ರಸ್ತಾಪಿಸಿದ್ದಾರೆ.

(ರೂ. ಲಕ್ಷಗಳಲ್ಲಿ)

ಕ್ರ.ಸಂ.	ಕಾರ್ಖಾನೆಯ ಹೆಸರು	ವರ್ಷ	ಬಿಡುಗಡೆ ಮಾಡಲು ಕೋರಿರುವ ಮೊತ್ತ
1	ಶ್ಯಾಮನೂರು ಶುಗರ್ಸ್, ದುಗ್ಗಾವತಿ, ದಾವಣಗೆರೆ	1999-2000	15.00
2	ಹಿರಣ್ಯಕೇಶಿ ಸ.ಸ.ಕಾ, ಸಂಕೇಶ್ವರ, ಬೆಳಗಾಂ	2000-2001	15.00
3	ಬನ್ನಾರಿ ಅಮ್ಮನ್ ಶುಗರ್ಸ್ ಲಿ., ನಂಜನಗೂಡು, ಮೈಸೂರು	2005-2006	30.00
4	ಕೋರಮಂಡಲ್ ಶುಗರ್ಸ್ (ಲಿ) ಮಾಕವಳ್ಳಿ, ಕೆ.ಆರ್.ಪೇಟೆ, ತಾ. ಮಂಡ್ಯ ಜಿಲ್ಲೆ (ಐ.ಸಿ.ಎಲ್. ಸಕ್ಕರೆ ಕಾರ್ಖಾನೆ)	2005-2006	2.50
			62.50

ಮೇಲೆ ಓದಲಾದ (3)ರಲ್ಲಿರುವ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2008 ದಿನಾಂಕ: 16-05-2008ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದಡಿಯಲ್ಲಿ ರೆವಿನ್ಯೂ ಲೆಕ್ಕದಲ್ಲಿ ಪ್ರತಿ ಪ್ರಕರಣದಲ್ಲಿ ಹಂಚಿಕೆಯಾದ ಆಯವ್ಯಯದಲ್ಲಿ ಶೇ. 25 ರಷ್ಟು ಬಿಡುಗಡೆಗೆ ಮಾತ್ರ ಅವಕಾಶ ಇರುವುದರಿಂದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನದಲ್ಲಿ ಒದಗಿಸಲಾಗಿರುವ 250.00 ಲಕ್ಷ ರೂ.ಗಳಲ್ಲಿ ಶೇ. 25 ರಷ್ಟು ಅಂದರೆ 62.50 ಲಕ್ಷ ರೂ.ಗಳನ್ನು ಮಾತ್ರ ಬಿಡುಗಡೆ ಮಾಡಬಹುದಾಗಿದ್ದು, ಆಯುಕ್ತರು ಕಬ್ಬು ಅಭಿವೃದ್ಧಿರವರ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂ.: ಸಿಐ 87 ಎಸ್‌ಜಿಎಫ್ 2010, ಬೆಂಗಳೂರು, ದಿನಾಂಕ: 16-06-2010.

ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಪ್ರಸ್ತಾವನೆಯಲ್ಲಿ ಕೋರಿರುವಂತೆ ರಾಜ್ಯದ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಬರುವ ರಸ್ತೆಗಳನ್ನು ಅಭಿವೃದ್ಧಿ ಪಡಿಸುವ ಕ್ರಿಯಾ ಯೋಜನೆಯನ್ನು ಕಾರ್ಯಗತಗೊಳಿಸಲು 2010-11ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 4860-04-800-0-01-ರಸ್ತೆಗಳು 172 (ಯೋಜನೆ) ಅಡಿಯಲ್ಲಿ ಒದಗಿಸಲಾಗಿರುವ ರೂ. 250.00 ಲಕ್ಷಗಳಲ್ಲಿ ಮೊದಲನೆ ತ್ರೈಮಾಸಿಕಕ್ಕೆ ಶೇ. 25 ಭಾಗ ಅಂದರೆ ರೂ. 62.50 ಲಕ್ಷಗಳನ್ನು (ಅರವತ್ತೆರೆಡು ಲಕ್ಷದ ಐವತ್ತು ಸಾವಿರ ರೂ.ಗಳು ಮಾತ್ರ) ಪ್ರಸ್ತಾವನೆಯಲ್ಲಿ ನಮೂದಿಸಿರುವ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡುವ ಸಲುವಾಗಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರುರವರಿಗೆ ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ.

ಈ ಆದೇಶವನ್ನು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆರವರ ಟಿಪ್ಪಣಿ ಸಂಖ್ಯೆ ವಾಕೈ 124 ಅಂಆಸ(1) 2010 ದಿನಾಂಕ 05-06-2010ರಲ್ಲಿ ನೀಡಲಾದ ಸಹಮತಿಯಂತೆ ಹಾಗೂ ಸರ್ಕಾರದ ಆಡಳಿತ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 1645

ಪಿ. ಆನಂದ್‌ಕುಮಾರ್

ಪೀಠಾಧಿಕಾರಿ (ಸಕ್ಕರೆ)

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಕಂದಾಯ ಸಚಿವಾಲಯ

ವಿಷಯ : ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ಇವರಿಗೆ ಮಂಜೂರು ಮಾಡಿರುವ ಬೆಂಗಳೂರು ಉತ್ತರ ತಾಲ್ಲೂಕು, ಕಾಚರಕನಹಳ್ಳಿ ಗ್ರಾಮದ ಸ.ನಂ.153 ರಲ್ಲಿನ 57 ಎಕರೆ 26 ಗುಂಟೆ ಜಮೀನನ್ನು ಹಿಂದಕ್ಕೆ ಪಡೆದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ :

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಮಾಕೋಮಾನಿನಿ/ಕಾಹ/ಜಮೀನು/ 09– 10/133, ದಿ: 29.05.2009.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ನಅಇ 57 ಬೆಂಆಸೇ 2009, ದಿ:15.05.2009.
3. ವಿಶೇಷ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ಸಂಖ್ಯೆ: ಎಲ್‌ಎನ್‌ಡಿ (ಎಸ್) ಸಿಆರ್ 10/02–03,ದಿ:09.06.2009.
4. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಬೆಂಅಪ್ರಾ/ಆಯುಕ್ತರು/ ಃಂಈಅಔ/ 139/2009–10, ದಿ:16.02.2010

ಪ್ರಸ್ತಾವನೆ:

ಮಾನ್ಯ ಅಬಕಾರಿ, ವಾರ್ತಾ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ಬೆಂಗಳೂರು ಜಲ ಮಂಡಳಿ ಸಚಿವರ ಅಧ್ಯಕ್ಷತೆಯಲ್ಲಿ ದಿ: 07.05.2009ರಂದು ನಡೆದ ಸಭೆಯಲ್ಲಿ ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿ, ಕಾಚರಕನಹಳ್ಳಿ ಗ್ರಾಮದ ಸ.ನಂ.153ರಲ್ಲಿ 57 ಎಕರೆ 26 ಗುಂಟೆ ಜಮೀನನ್ನು ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತಕ್ಕೆ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಿರುವುದನ್ನು ಹಿಂತೆಗೆದುಕೊಂಡು ಈ ಕೆಳಕಂಡ ಸಾರ್ವಜನಿಕ ಕಾರ್ಯಗಳಿಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲು ನಿರ್ಣಯ ಕೈಗೊಳ್ಳಲಾಗಿದೆ.

1.	ಆಸ್ಪತ್ರೆ ಕಟ್ಟಡಕ್ಕಾಗಿ	10 ಎಕರೆ
2.	ಕಾಲೇಜು ಕಟ್ಟಡ	5 ಎಕರೆ 20 ಗುಂಟೆ
3.	ಆಟದ ಮೈದಾನ	6 ಎಕರೆ
4.	ಮಾರುಕಟ್ಟೆ	2 ಎಕರೆ 25 ಗುಂಟೆ
5.	ದೇವಸ್ಥಾನದ ಕಟ್ಟಡಕ್ಕಾಗಿ	4 ಎಕರೆ 6 ಗುಂಟೆ
6.	ರಂಗ ಮಂದಿರಕ್ಕಾಗಿ	2 ಎಕರೆ 10 ಗುಂಟೆ
7.	ರಸ್ತೆ ಹಾಗೂ ಪಾರ್ಕ್‌ಗಳಿಗಾಗಿ	6 ಎಕರೆ 5 ಗುಂಟೆ
8.	Land to Land Basis	20 ಎಕರೆ
9.	ಡೋಭಿ ಘಾಟ್	1 ಎಕರೆ
	ಒಟ್ಟು	**57 ಎಕರೆ 26 ಗುಂಟೆ**

ಅಲ್ಲದೇ ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿ:25.05.2009ರಂದು ನಡೆದ ಸಭೆಯಲ್ಲಿ ಕಾಚರಕನಹಳ್ಳಿ ಕ್ಯಾಂಪ್ಕೋಗೆ (ಹಿಂದಿನ ಬ್ಯಾಫ್ಕೋ) ಸಂಬಂಧಿಸಿದ ಜಮೀನಿನಲ್ಲಿ 10.00 ಎಕರೆ ಜಮೀನನ್ನು ಆಸ್ಪತ್ರೆಗಾಗಿ ಉಪಯೋಗಿಸಿಕೊಳ್ಳಲು ತೀರ್ಮಾನಿಸಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿ; 29.05.2009ರ ಪತ್ರದಲ್ಲಿ ಕಾಚರಕನಹಳ್ಳಿ ಗ್ರಾಮದ ಸ.ನಂ.153ರಲ್ಲಿ 57.26 ಎಕರೆ ಜಮೀನನ್ನು ಸರ್ಕಾರವು ಗುತ್ತಿಗೆ ಆಧಾರದ ಮೇಲೆ ಆ ನಿಗಮಕ್ಕೆ ಮಂಜೂರು ಮಾಡಿದ್ದು, ಈ ಜಮೀನನ್ನು ನಿಗಮವು ವಿವಿಧ ಕಾರಣಗಳಿಂದ ಉಪಯೋಗಿಸಿಕೊಂಡಿಲ್ಲವಾದ್ದರಿಂದ, ಗುತ್ತಿಗೆ ಆಧಾರದ ಮೇಲೆ ನೀಡಿರುವುದನ್ನು ಹಿಂದಕ್ಕೆ ಪಡೆಯುವಂತೆ ಕೋರಿರುತ್ತಾರೆ. ಈ ಬಗ್ಗೆ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ದಿ: 15.05.2009ರ ಅರೆ ಸರ್ಕಾರಿ ಪತ್ರದಲ್ಲಿ ಸದರಿ ಜಮೀನನ್ನು ಕ್ಯಾಂಪ್ಕೋ (ಹಿಂದಿನ ಬ್ಯಾಫ್ಕೋ) ಸಂಸ್ಥೆಯಿಂದ ಹಿಂದಕ್ಕೆ ಪಡೆದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲು ಕೋರಿರುತ್ತಾರೆ.

ವಿಶೇಷ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿ: 09.06.2009ರ ಪತ್ರದಲ್ಲಿ ಸಲ್ಲಿಸಿದ ವರದಿಯನ್ವಯ ಕಾಚರಕನಹಳ್ಳಿ ಗ್ರಾಮದ ಸ.ನಂ.153ರಲ್ಲಿ ಒಟ್ಟು 57.26 ಎಕರೆ ಜಮೀನಿದ್ದು, ಕೆರೆ ಅಂಗಳ ಜಮೀನಾಗಿರುತ್ತದೆ. ಈ ಹಿಂದೆ ಈ ಜಮೀನನ್ನು ಸಣ್ಣ ನೀರಾವರಿ ಇಲಾಖೆಗೆ ಹಸ್ತಾಂತರಿಸಿತ್ತು. ನಂತರ ಸಣ್ಣ ನೀರಾವರಿ ಇಲಾಖೆಯ ವಶದಿಂದ ಹಿಂಪಡೆದು ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 196 ಎಲ್‌ಜಿಬಿ 86, ದಿ: 23.09.86ರನ್ವಯ ಪ್ರಾಣಿ ಮತ್ತು ಆಹಾರ ನಿಗಮಕ್ಕೆ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಲಾಗಿರುತ್ತದೆ. ಸದರಿ ಜಮೀನನ್ನು ಈ ನಿಗಮವು ಉಪಯೋಗಿಸಿಕೊಂಡಿರುವುದಿಲ್ಲ.

ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿ:16.02.2010ರ ಪತ್ರದಲ್ಲಿ ಕಾನ್ಸೆಪ್ಟ್ ಪ್ಲಾನ್‌ನನ್ನು ಈ ಕೆಳಕಂಡಂತೆ ಸಿದ್ಧಪಡಿಸಿ ಮಾನ್ಯ ಮುಖ್ಯ ಕಾರ್ಯದರ್ಶಿಯವರನ್ನೊಳಗೊಂಡ ಸಮಿತಿಯ ಮುಂದೆ ಇಡಲು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಿರುತ್ತಾರೆ.

1.	ಆಸ್ಪತ್ರೆ ಕಟ್ಟಡಕ್ಕಾಗಿ	10 ಎಕರೆ
2.	ಕಾಲೇಜು ಕಟ್ಟಡ ಮತ್ತು ಶಾಲೆ	5 ಎಕರೆ 20 ಗುಂಟೆ
3.	ಆಟದ ಮೈದಾನ	6 ಎಕರೆ
4.	ಮಾರುಕಟ್ಟೆ	2 ಎಕರೆ 25 ಗುಂಟೆ
5.	ದೇವಸ್ಥಾನದ ಕಟ್ಟಡಕ್ಕಾಗಿ	4 ಎಕರೆ 6 ಗುಂಟೆ
6.	ರಂಗ ಮಂದಿರಕ್ಕಾಗಿ	2 ಎಕರೆ 10 ಗುಂಟೆ
7.	ರಸ್ತೆ ಹಾಗೂ ಪಾರ್ಕ್‌ಗಳಿಗಾಗಿ	5 ಎಕರೆ 13 ಗುಂಟೆ
8.	ಡೋಬಿ ಘಾಟ್	1 ಎಕರೆ
9.	ಈಗಾಗಲೇ ಪ್ರಾಧಿಕಾರದಿಂದ ಬಡಾವಣೆ ರಚಿಸಿ, ನಿವೇಶನಗಳನ್ನು ರಚಿಸಿ ಹಂಚಿಕೆ ಆಗಿರುವ ಪ್ರದೇಶ	20 ಎಕರೆ 32 ಗುಂಟೆ
	ಒಟ್ಟು	**57 ಎಕರೆ 26 ಗುಂಟೆ**

ಈ ಬಗ್ಗೆ ನಗರಾಭಿವೃದ್ಧಿ ಇಲಾಖೆಯು ದಿ: 23.04.2010ರ ಅನಧಿಕೃತ ಟಿಪ್ಪಣಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸಿದ್ಧಪಡಿಸಿರುವ ಕಾನ್ಸೆಪ್ಟ್ ಪ್ಲಾನನ್ನು ಒದಗಿಸಿ ಪ್ರಶ್ನಿತ ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾಯಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಆರ್ ಡಿ 360 ಎಲ್‌ಜಿಬಿ 2009, ಬೆಂಗಳೂರು, ದಿನಾಂಕ: 17-06-2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿ, ಕಾಚರಕನಹಳ್ಳಿ ಗ್ರಾಮದ ಸ.ನಂ. 153ರಲ್ಲಿನ 57 ಎಕರೆ 26 ಗುಂಟೆ ಜಮೀನನ್ನು ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮಕ್ಕೆ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಿರುವುದನ್ನು ಹಿಂತೆಗೆದುಕೊಂಡು, ಸದರಿ 57 ಎಕರೆ 26 ಗುಂಟೆ ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸಲ್ಲಿಸಿರುವ ಕಾನ್ಸೆಪ್ಟ್‌ಪ್ಲಾನ್‌ನಂತೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರ ನಿಯಮ 20(1)(ಎ)ರನ್ವಯ ಶೇಕಡ 50ರಷ್ಟು ಪ್ರಸಕ್ತ ಮಾರುಕಟ್ಟೆ ದರ ವಿಧಿಸಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಮಂಜೂರು ಮಾಡಲು ಸರ್ಕಾರವು ಆದೇಶಿಸಿದೆ.

ಸದರಿ ಸರ್ಕಾರಿ ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕಾನ್ಸೆಪ್ಟ್ ಪ್ಲಾನಿನಂತೆಯೇ ಉಪಯೋಗಿಸಿಕೊಳ್ಳತಕ್ಕದ್ದು ಮತ್ತ್ಯಾವುದೇ ರೀತಿಯ ಭೂ ಬಳಕೆಗೆ ಅವಕಾಶ ನೀಡಬಾರದೆಂದು ಷರತ್ತು ವಿಧಿಸಲಾಗಿದೆ. ಷರತ್ತು ಉಲ್ಲಂಘಿಸಿದಲ್ಲಿ ಸದರಿ ಸರ್ಕಾರಿ ಜಮೀನನ್ನು ಕಂದಾಯ ಇಲಾಖೆಗೆ ಹಿಂಪಡೆಯಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

PR. No 1646

ಇ. ಈಶ್ವರ ನಾಯಕ್
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ.(ಭೂ.ಮಂ).

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಕರ್ನಾಟಕ ರಾಜ್ಯ ಡ್ರಗ್ ಲಾಜಿಸ್ಟಿಕ್ ಮತ್ತು ವೇರ್ ಹೌಸಿಂಗ್ ಸೊಸೈಟಿಯಲ್ಲಿ ಉಪಕರಣ ಖರೀದಿ ಮತ್ತು ನಿರ್ವಹಣೆ ಕಾರ್ಯವನ್ನು ನಿರ್ವಹಿಸಲು ಸಂಗ್ರಹಣಾ ಸಲಹೆಗಾರರನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ: ಆಕುಕ 90 ಎಚ್‌ಪಿಸಿ 2006, ದಿ:20.04.2006.
2. ದಿನಾಂಕ: 03.11.2009ರಂದು ನಡೆದ ಯೋಜನೆಯ ಕಾರ್ಯಕ್ರಮ ಚಾಲನಾ ಸಮಿತಿಯ 11ನೇ ಸಭೆಯ ನಡವಳಿಗಳು.

ಪ್ರಸ್ತಾವನೆ:

ಕರ್ನಾಟಕ ಆರೋಗ್ಯ ವ್ಯವಸ್ಥೆ ಅಭಿವೃದ್ಧಿ ಮತ್ತು ಸುಧಾರಣಾ ಯೋಜನೆಯು, ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸೇವೆಯನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ, ವಿಶ್ವಬ್ಯಾಂಕ್ ನೆರವಿನೊಂದಿಗೆ ಹಲವಾರು ಆರೋಗ್ಯ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮತ್ತು ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಯೋಜನೆಯಾಗಿರುತ್ತದೆ.

ಇಲಾಖೆಯಲ್ಲಿರುವ ಎಲ್ಲಾ ಯೋಜನೆಗಳಿಗೆ (ವಿಶ್ವ ಬ್ಯಾಂಕ್ ನೆರವಿನ ಹಾಗೂ ಬಾಹ್ಯ ನೆರವಿನ ಯೋಜನೆಗಳನ್ನು ಒಳಗೊಂಡಂತೆ) ಮತ್ತು ಔಷಧ ನಿಯಂತ್ರಣ ಇಲಾಖೆಗೆ ಸಂಬಂಧಿಸಿದಂತೆ ಔಷಧ ಮತ್ತು ರಾಸಾಯನಿಕಗಳು, ಉಪಕರಣಗಳು, ಸಾಧನ–ಸಲಕರಣೆಗಳು ಇತ್ಯಾದಿಗಳ ಖರೀದಿಯನ್ನು ಕೇಂದ್ರೀಕರಿಸುವ ಸಲುವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದಲ್ಲಿದ್ದ ಆರೋಗ್ಯ ಸಲಕರಣಾ ವಿಭಾಗವನ್ನು ಕರ್ನಾಟಕ ರಾಜ್ಯ ಡ್ರಗ್ ಲಾಜಿಸ್ಟಿಕ್ ಮತ್ತು ವೇರ್ ಹೌಸಿಂಗ್ ಸೊಸೈಟಿ, ಬೆಂಗಳೂರು ಇಲ್ಲಿಗೆ ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದನ್ವಯ ಸ್ಥಳಾಂತರಿಸಲಾಗಿದೆ.

ಕೆಎಚ್ಎಸ್‌ಡಿಆರ್‌ಪಿ ವತಿಯಿಂದ ಸೊಸೈಟಿಯನ್ನು ಬಲಪಡಿಸುವ ಬಗ್ಗೆ, ಯೋಜನೆಯ Project Appraisal Document ನಲ್ಲಿ ಪ್ರಸ್ತಾಪಿಸಲಾಗಿದೆ ಈ ಸಂಬಂಧದಲ್ಲಿ ವೈದ್ಯಕೀಯ ಸಾಧನ ಸಲಕರಣೆಗಳ ಬೇಡಿಕೆಗಳ ಕ್ರೋಢೀಕರಣ ಮತ್ತು ವೈಶಿಷ್ಟತೆಗಳ ಪರಿಶೀಲನೆ ಹಾಗೂ ಟೆಂಡರ್ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಡ್ರಗ್ ಲಾಜಿಸ್ಟಿಕ್ ಮತ್ತು ವೇರ್‌ಹೌಸಿಂಗ್ ಸೊಸೈಟಿಗೆ ಒಬ್ಬ ಸಂಗ್ರಹಣಾ ಸಲಹೆಗಾರರ ಸೇವೆಯು ಪೂರ್ಣಾವಧಿಗೆ ಅವಶ್ಯಕವಿದ್ದು, ಸದರಿ ವಿಷಯದ ಬಗ್ಗೆ ವಿಶ್ವ ಬ್ಯಾಂಕ್ ದಿನಾಂಕ 28.11.2008ರಂದು ಇ–ಮೇಲ್ ಸಂದೇಶದ ಮೂಲಕ ಸಹಮತಿ ನೀಡಿರುತ್ತದೆ. ಮೇಲೆ (2) ರಲ್ಲಿ ಓದಲಾದ ನಡವಳಿಗಳನ್ವಯ ಆಸಕ್ತಿ ಹೊಂದಿದವರಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ ಯೋಜನೆಯ ಕಾರ್ಯಕ್ರಮ ಚಾಲನಾ ಸಮಿತಿಯು ಅನುಮೋದನೆ ನೀಡಿತ್ತು. ಅದರಂತೆ ಸಂಗ್ರಹಣಾ ಸಲಹೆಗಾರರ ಹುದ್ದೆಯ ಕಾರ್ಯನಿರ್ವಹಿಸಲು ಅರ್ಹತೆ ಮತ್ತು ಆಸಕ್ತಿ ಹೊಂದಿದವರಿಂದ ರಾಜ್ಯಾದ್ಯಂತ ಪ್ರಸಾರವಿರುವ ಎರಡು ಪ್ರಮುಖ ದಿನಪತ್ರಿಕೆಗಳಲ್ಲಿ ದಿನಾಂಕ 06.04.2010 ರಂದು ಯೋಜನಾ ಕಛೇರಿಯಿಂದ ಪ್ರಕಟಿಸಲಾಗಿತ್ತು. ಈ ಸಂಬಂಧವಾಗಿ ಸಂಗ್ರಹಣಾ ಸಲಹೆಗಾರರ ಹುದ್ದೆಗೆ 4 ಅರ್ಜಿಗಳು ಸ್ವೀಕೃತವಾಗಿದ್ದು, ಸದರಿ ಅರ್ಜಿಗಳನ್ನು ಯೋಜನಾ ಕಛೇರಿಯಲ್ಲಿ ರಚಿಸಲಾದ ಸಮಿತಿಯು ಪರಿಶೀಲಿಸಿದ ನಂತರ, ದಿನಾಂಕ:29.05.2010 ರಂದು ಇಬ್ಬರು ಅಭ್ಯರ್ಥಿಗಳಿಗೆ ಸಂದರ್ಶನ ನಡೆಸಿ ನಂತರ ಶ್ರೀ ಚಂದ್ರಶೇಖರ ಸಿ. ಜಾಕಾ ಇವರನ್ನು ಸಂಗ್ರಹಣಾ ಸಲಹೆಗಾರರ ಹುದ್ದೆಗೆ ಮಾಸಿಕ ಸಂಭಾವನೆ ರೂ.35,000/– ಗಳನ್ನು ನಿಗದಿಪಡಿಸಿ ಆಯ್ಕೆ ಮಾಡುವಂತೆ ಸಮಿತಿಯು ಶಿಫಾರಸ್ಸು ಮಾಡಿದೆ. ಸದರಿ ಶಿಫಾರಸ್ಸನ್ನು ಪರಿಶೀಲಿಸಲಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಕೆಎಸ್‌ಡಿ /ಹೆಚ್‌ಇಪಿ/07/08/09 ಬೆಂಗಳೂರು, ದಿನಾಂಕ: 17–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು, ಕರ್ನಾಟಕ ರಾಜ್ಯ ಡ್ರಗ್ ಲಾಜಿಸ್ಟಿಕ್ ಮತ್ತು ವೇರ್ ಹೌಸಿಂಗ್ ಸೊಸೈಟಿಗೆ ಗುತ್ತಿಗೆ ಆಧಾರದ ಮೇಲೆ ಶ್ರೀ ಚಂದ್ರಶೇಖರ ಸಿ ಜಾಕಾ ಇವರನ್ನು ಸಂಗ್ರಹಣಾ ಸಲಹೆಗಾರರಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಎರಡು ವರ್ಷಗಳ ಅವಧಿಗೆ ನೇಮಿಸಿದೆ. ಸದರಿಯವರಿಗೆ ಮಾಸಿಕ ಸಂಭಾವನೆ ರೂ.35,000/– (ರೂಪಾಯಿ ಮುವತ್ತೈದು ಸಾವಿರ ಮಾತ್ರ) ಗಳನ್ನು ನಿಗಧಿಪಡಿಸಿದೆ. ಸದರಿಯವರು ಕರ್ನಾಟಕ ಆರೋಗ್ಯ ವ್ಯವಸ್ಥೆ ಅಭಿವೃದ್ಧಿ ಮತ್ತು ಸುಧಾರಣಾ ಯೋಜನೆಯೊಂದಿಗೆ ಗುತ್ತಿಗೆ ನೇಮಕದ ಷರತ್ತು ಮತ್ತು ನಿಬಂಧನೆಗಳನ್ನೊಳಗೊಂಡ (Terms of Reference-ToR) ಕರಾರು ಒಪ್ಪಂದವನ್ನು ಮಾಡಿಕೊಳ್ಳತಕ್ಕದ್ದು.

ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ "2210–06–800–0–84–051 (ಸಾಮಾನ್ಯ ವೆಚ್ಚ) ಯೋಜನಾ ನಿರ್ವಹಣೆ ಮತ್ತು ಮೌಲ್ಯಮಾಪನ" ದಡಿ ಸಂಬಂಧಪಟ್ಟ ಆರ್ಥಿಕ ವರ್ಷದಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಂ. ಶಶಿಧರ್

ಸರ್ಕಾರದ ಉಪ ಕಾರ್ಯದರ್ಶಿ

ಕೆಹೆಚ್‌ಎಸ್‌ಡಿಆರ್‌ಪಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

PR. No 1647

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಡಾ: ಶಿವು ಎನ್.ಎಸ್., ಗುತ್ತಿಗೆ ಉಪನ್ಯಾಸಕರು, ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬಳ್ಳಾರಿ ಇವರ ಸೇವೆಯನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 99 ಪಿಟಿಡಿ 2009, ದಿನಾಂಕ: 07–12–2009
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಆಕುಕ 43 ಪಿಟಿಡಿ 2010, ದಿನಾಂಕ: 03–03–2010
3. ಮುಖ್ಯ ಆಡಳಿತಾಧಿಕಾರಿಗಳು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ; ಆಯುಷ್/79/ಸಿಬ್ಬಂದಿ(1)/2008–09,ದಿನಾಂಕ: 21–05–2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರದ ಅಧಿಸೂಚನೆಯಲ್ಲಿ, ಡಾ:ಶಿವು ಎನ್.ಎಸ್. ಇವರನ್ನು ನಿಬಂಧನೆ ಮತ್ತು ಷರತ್ತಿಗೊಳಪಡಿಸಿ ತಾರಾನಾಥ ಸರ್ಕಾರಿ ಆಯರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬಳ್ಳಾರಿ ಇಲ್ಲಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಸರ್ಕಾರದ ತಿದ್ದುಪಡಿ ಆದೇಶದಲ್ಲಿ, ಡಾ: ಶಿವು ಎನ್.ಎಸ್.ರವರ ಗುತ್ತಿಗೆ ಆಧಾರದ ನೇಮಕಾತಿಯು ಅವರು ಕೆಲಸಕ್ಕೆ ಸೇರಿದ ದಿನಾಂಕದಿಂದ ಅಂದರೆ, ದಿನಾಂಕ:11–12–2009 ರಿಂದ 06 ತಿಂಗಳುಗಳ ಕಾಲ ಜಾರಿಯಲ್ಲಿರುತ್ತದೆ. ಎಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ: (3) ರ ಮುಖ್ಯ ಆಡಳಿತಾಧಿಕಾರಿ, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರದಲ್ಲಿ, ಡಾ: ಶಿವು ಎನ್.ಎಸ್.ರವರ ಗುತ್ತಿಗೆ ಅವಧಿಯು ದಿನಾಂಕ: 10–06–2010 ರಂದು ಮುಕ್ತಾಯವಾಗುವುದರಿಂದ ಹಾಗೂ ಈ ಗುತ್ತಿಗೆ ಉಪನ್ಯಾಸಕರು ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞತೆಯನ್ನು ಹೊಂದಿದ್ದು, ಇತರೆ ಯಾರೂ ಈ ಸಂಸ್ಥೆಯಲ್ಲಿ ತಜ್ಞತೆಯನ್ನು ಹೊಂದದೇ ಇರುವುದರಿಂದ, ಇವರ ಸೇವೆಯನ್ನು ಎರಡು ದಿನಗಳ ಕಾಲ ಮೊಟಕುಗೊಳಿಸಿ ಪುನ: 11 ತಿಂಗಳ ಅವಧಿಗೆ ಹಿಂದೆ ನಿಗದಿಪಡಿಸಿರುವ ಷರತ್ತು ಮತ್ತು ನಿಬಂಧನೆಗೊಳಪಡಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 43 ಪಿಟಿಡಿ 2010, ಬೆಂಗಳೂರು, ದಿನಾಂಕ: 18–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬಳ್ಳಾರಿಯ ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ: ಶಿವು.ಎನ್.ಎಸ್. ಇವರು 06 ತಿಂಗಳ ಸೇವೆಯನ್ನು ಪೂರ್ಣಗೊಳಿಸಿದ ನಂತರ, ಎರಡು ದಿನ ಮೊಟಕುಗೊಳಿಸುವ ಷರತ್ತಿಗೆ ಒಳಪಟ್ಟು (ಹಿಂಬರಹ ನೀಡುವುದು) ಅವರ ಸೇವೆಯನ್ನು ಪುನ: 11 ತಿಂಗಳ ಅವಧಿಗೆ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಭರ್ತಿ ಮಾಡುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ; ಆಕುಕ 99 ಪಿಟಿಡಿ 2009, ದಿನಾಂಕ; 07–12–2009 ರಲ್ಲಿ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗೊಳಪಟ್ಟು ಹಾಗೂ 2010–11 ನೇ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಿಕೊಳ್ಳುವ ಷರತ್ತಿಗೊಳಪಟ್ಟು ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಆರ್.ಎಸ್. ಇಟಗಿ
ಸರ್ಕಾರದ ಅಧೀನ ಕಾಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)

PR. No 1648

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ : ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ Master Control Centre ಸ್ಥಾಪನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ :
1. ನಿರ್ದೇಶಕರು ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ರವರ ಪತ್ರ ಸಂಖ್ಯೆ: ಏಖಓಆಒಅ/ಖಉಖಊಅಐ/110/2009–10 ದಿನಾಂಕ: 26–12–2009
2. ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಸಂಬಂಧಿಸಿದಂತೆ 2010–11ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 159.
3. ದಿನಾಂಕ;31–03–2010 ರಂದು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ
4. ದಿನಾಂಕ: 24–05–2010ರಂದು ನಡೆದ ಸಚಿವ ಸಂಪುಟದ ಸಭೆಯ ನಿರ್ಣಯ (ಪ್ರಕರಣ ಸಂಖ್ಯೆ;ಸಿ:215/2010)

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ರಾಜ್ಯದಲ್ಲಿ ನೈಸರ್ಗಿಕ ವಿಕೋಪಗಳ ನಿರ್ವಹಣೆಯಲ್ಲಿ ಪೂರ್ವಸಿದ್ಧತೆ ಮತ್ತು ಮುನ್ಸೂಚನೆ ಪ್ರಮುಖವಾಗಿದ್ದು ರಾಜ್ಯಾದ್ಯಂತ ಸ್ಥಾಪಿಸಿರುವ ಹಾಗೂ ಸ್ಥಾಪಿಸಲಾಗುವ ವಿವಿಧ ನೈಸರ್ಗಿಕ ವಿಪತ್ತು ಮಾಪಕಗಳಿಂದ ಸೂಕ್ತ ಸಮಯದಲ್ಲಿ ವೈಜ್ಞಾನಿಕ ಮಾಹಿತಿಗಳನ್ನು ಪಡೆದು ಅದನ್ನು ವಿಶ್ಲೇಷಿಸಿ ಅತ್ಯಲ್ಪ ಸಮಯದಲ್ಲಿ ಸಮುದಾಯ ಮತ್ತು ಸರ್ಕಾರಕ್ಕೆ ಮಾಹಿತಿ ಒದಗಿಸಿ ಸಂಭವನೀಯ ದುರಂತಗಳನ್ನು ಸಮಯೋಚಿತವಾಗಿ ನಿರ್ವಹಿಸಲು ಅನುವಾಗುವಂತೆ ಒಂದು Master Control Centre ಮುಖ್ಯ ನಿಯಂತ್ರಕ ಘಟಕವನ್ನು ಸ್ಥಾಪಿಸಲಾಗುತ್ತದೆ. ಇದು ವರ್ಷದ 365 ದಿನಗಳಲ್ಲಿ 24 ಘಂಟೆಗಳು ಕಾರ್ಯನಿರ್ವಹಿಸುತ್ತದೆ. ರಾಜ್ಯದಲ್ಲಿ ಹವಾಮಾನಾಧಾರಿತ ಬೆಳೆ ವಿಮೆ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ಬೆಳೆ ವಿಮೆ ಸಮನ್ವಯ ಸಮಿತಿಯು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ

ಕೇಂದ್ರವನ್ನು ನೋಡಲ್ ಕೇಂದ್ರವನ್ನಾಗಿ ಗುರುತಿಸಿದೆ, ಆದ್ದರಿಂದ ಈ ಜವಾಬ್ದಾರಿಯನ್ನು ನಿರ್ವಹಿಸಲು ಹೋಬಳಿ ಮಟ್ಟದಲ್ಲಿ ಹಾಲಿ ಇರುವ ಟೆಲಿಮೆಟ್ರಿಕ್ ಮಳೆ ಮಾಪನ ಕೇಂದ್ರಗಳಲ್ಲಿ ಮಳೆ ಮಾಪನ ಉಪಕರಣದ ಜೊತೆಗೆ ಇನ್ನಿತರೆ ಹವಾಮಾನ ಉಪಕರಣಗಳನ್ನಳವಡಿಸಿ, ರಾಜ್ಯದಲ್ಲಿನ ನೈಸರ್ಗಿಕ ವಿಕೋಪ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸಲು ಬೆಂಗಳೂರಿನಲ್ಲಿ ಒಂದು ಮುಖ್ಯ ನಿಯಂತ್ರಕ ಘಟಕವನ್ನು ಸ್ಥಾಪಿಸಿ ನಿರ್ವಹಿಸುವ ಅಗತ್ಯತೆಯಿದೆ, ಎಂದು ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕರು ತಿಳಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ 2010–11ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 159 ರಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು **"ನೈಸರ್ಗಿಕ ವಿಪತ್ತುಗಳ ಮುನ್ಸೂಚನೆ ನೀಡುವ ಮಾಸ್ಟರ್ ಕಂಟ್ರೋಲ್ ಕೇಂದ್ರವನ್ನು ಸ್ಥಾಪಿಸಲು ರೂ.1.00 ಕೋಟಿ ನೀಡಲಾಗುವುದು"** ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ:31–03–2010 ರಂದು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ಸದರಿ ಪ್ರಸ್ತಾವನೆಗೆ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ.

1. " To approve the proposal of establishment of Master Control Centre at KSNDMC which is estimated as Rs.6.725 Crores by Rajiv Gandhi Rural housing Development Corporation-a Government of Karnataka Undertaking who will be taking up the Construction".
2. " To recommend the proposal for the approval of the Cabinet as the establishment of Master Control Centre of KSNDMC is estimated the cost more than 5.00 crores."

ಮೇಲೆ ಓದಲಾದ ಕ್ರಮ ಸಂಖ್ಯೆ: (4)ರಲ್ಲಿ ದಿನಾಂಕ: 24–05–2010 ರಂದು ನಡೆದ ಸಚಿವ ಸಂಪುಟದ 2010ನೇ ಸಾಲಿನ ಸಭೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಒಳಪಡುವ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪಗಳ ಉಸ್ತುವಾರಿ ಕೇಂದ್ರದ ವತಿಯಿಂದ ರೂ. 872.50 ಲಕ್ಷಗಳಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ಕರ್ನಾಟಕ ನೈಸರ್ಗಿಕ ವಿಕೋಪಗಳ ಉಸ್ತುವಾರಿ ಕೇಂದ್ರದ Master Control Facility ಸ್ಥಾಪನೆಗೆ ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ತನ್ನ ಸ್ವಂತ ಉಳಿತಾಯದಿಂದ ರೂ. 2.00 ಕೋಟಿಗಳನ್ನು Master Control Facility ಸ್ಥಾಪಿಸುವುದಕ್ಕಾಗಿ ನೀಡಲು ಮುಂದೆ ಬಂದಿರುವ ಅಂಶವನ್ನು ಗಣನೆಗೆ ತೆಗೆದುಕೊಂಡು ರೂ. 8.725 ಕೋಟಿಗಳ ಅಂದಾಜಿನಲ್ಲಿ ಮುಖ್ಯ ನಿಯಂತ್ರಕ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತದೆ.

ಸಚಿವ ಸಂಪುಟದ ನಿರ್ಣಯದನ್ವಯ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪಗಳ ಉಸ್ತುವಾರಿ ಕೇಂದ್ರದ ವತಿಯಿಂದ ಒಟ್ಟು ರೂ. 872.50 ಲಕ್ಷಗಳಲ್ಲಿ ಸ್ಥಾಪಿಸಲಾಗುತ್ತಿರುವ Master Control Facility ಸ್ಥಾಪನೆಗೆ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ವಿಯಇ 10 ಬಉಕೋ 2009, ಬೆಂಗಳೂರು, ದಿನಾಂಕ: 04–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಒಳಪಡುವ ಸಂಸ್ಥೆಯಾದ ಕರ್ನಾಟಕ ನೈಸರ್ಗಿಕ ವಿಕೋಪಗಳ ಉಸ್ತುವಾರಿ ಕೇಂದ್ರದ ವತಿಯಿಂದ ಅನುಬಂಧ–1 ರಲ್ಲಿ ನಮೂದಿಸಿರುವಂತೆ ಕಟ್ಟಡ ನಿರ್ಮಾಣ, ಯಂತ್ರೋಪಕರಣ ಮುಂತಾದುವುಗಳಿಗೆ ಅಂದಾಜು ರೂ. 872.50 ಲಕ್ಷಗಳ ವೆಚ್ಚದಲ್ಲಿ (ಎಂಟುನೂರಾ ಎಪ್ಪತ್ತೆರಡು ಲಕ್ಷಗಳು ಮತ್ತು ಐವತ್ತು ಸಾವಿರ ರೂಪಾಯಿಗಳು ಮಾತ್ರ) Master Control Facility ಸ್ಥಾಪನೆಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಈ ಕೇಂದ್ರವನ್ನು ಬೆಂಗಳೂರು ಉತ್ತರ ತಾಲ್ಲೂಕ್ ಬೆಟ್ಟಹಳ್ಳಿ ಪ್ಲಾಂಟೇಷನ್‌ನ ಸರ್ವೆ ಸಂಖ್ಯೆ:1ರಲ್ಲಿ (GKVK Campus) ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವಶದಲ್ಲಿರುವ 10 ಎಕರೆ ಜಮೀನಿನಲ್ಲಿ ಸ್ಥಾಪಿಸುವುದು.

ರೂ. 872.50 ಲಕ್ಷಗಳಲ್ಲಿ ಕಟ್ಟಡ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ತನ್ನ ಸ್ವಂತ ಉಳಿತಾಯದಿಂದ ರೂ. 2.00 ಕೋಟಿಗಳ ಹಣವನ್ನು ಬಳಸತಕ್ಕದ್ದು.

ಈ ಆದೇಶವನ್ನು ದಿನಾಂಕ; 24–05–2010 ರಂದು ನಡೆದ ಸಚಿವ ಸಂಪುಟ ಸಭೆಯ ತೀರ್ಮಾನದನ್ವಯ ಹೊರಡಿಸಲಾಗಿದೆ(ಪ್ರಕರಣ ಸಂಖ್ಯೆ:ಸಿ:215/2010)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಕೆ.ಬೋರಲಿಂಗಯ್ಯ
ಸರ್ಕಾರದ ಅಧೀನ ಕಾರ್ಯದರ್ಶಿ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

ಅನುಬಂಧ–1

ಸರ್ಕಾರಿ ಆದೇಶ ಸಂಖ್ಯೆ ವಿಯೆಇ 10 ಬಉಕೊ/2009 ದಿನಾಂಕ: 4.6.2010

ESTIMATE FOR CONSTRUCTION OF MASTER CONTROL, OFFICE BUILDING & RESIDENTIAL BLOCKS FOR THE SCIENTIFIC PERSONNEL OF KARNATAKA STATE NATURAL DISASTER MONITORING CENTRE

Sl No.	Item	Estimated Cost Rs.Lakhs
A.	**Civil Works,Construction of Building, Basic infrastructure**	
1	Office Building(27,707 sq ft) 2575 sq m	264.30
2	Office Building for the Residential Scientific Personnel managing Master Control Centre on 24x7 basis	97.00
3	Compound wall work	13.62
4	Electricity supply works	25.33
5	Water Supply and Sanitary works	26.00
6	Sump and Over head tank works	38.00
7	Roads & Services	60.00
8	Landscaping works	12.00
9	Rainwater harvesting and Solar lighting works	12.00
10	Bore well-construction, pump & pipelines-Installation and Commissioning	5.00
11	Interior Works(1900 sq m @ Rs.3250 / sq m)	61.75
12	Double insulation curtain glazing with ACP	25.00
13	Miscellaneous	32.50
	Total of A-Civil works, Building Construction for the Master Control Facility	**672.50**
B	**Computers, software, Peripherals, Office equipments**	
1	Work Stations, Desktop computers, Laptop computers,Printers, LAN, AC	100.00
2	Database server, Application Server, Firewall, SAN Storage,LAN Switch, Dedicated line	70.00
3	UPS & Diesel Generator	30.00
	Total of B- Computers, Software, Peripherals, Office Equipments	**200.00**
	Total A+B	**872.50**

ಕೆ.ಬೋರಲಿಂಗಯ್ಯ
ಸರ್ಕಾರದ ಅಧೀನ ಕಾರ್ಯದರ್ಶಿ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ

PR. No 1649

Information Technology, Biotechnology & Science and Technology Secretariat

Sub : Approval of the project proposal of M/s Just Dial Pvt. Limited, # 29, SRT Street, Cunningham Road, Bangalore – 560032, to establish an "IT / ITES-BPO & Software project at IT / ITES Industrial Area, Devanahalli Taluk, Bangalore Rural District.

READ : Proceedings of the 21st State High Level Clearance Committee (SHLCC) Meeting held on 29-3-2010.

PREAMBLE:

M/s Just Dial Pvt. Limited has proposed to establish IT / ITES-BPO & Software project at IT /ITES Industrial Area, Devanahalli Taluk, Bangalore Rural District in 15 acres of KIADB land at a cost of Rs. 445.08 Crores.

In the proposal submitted for the 21st State High Level Clearance Committee (SHLCC) meeting held on29-3-2010, the Company had requested to approve the project. The project proposes to provide employment to about 20,991 persons.

The State High Level Clearance Committee, after detailed discussion, approved the proposal of M/s just Dial Pvt. Limited and recommended to grant infrastructure facilities and extend incentives and concessions.

Hence the following Order:

GOVERNMENT ORDER NO ITD 21 MDA 2010, BANGALORE DATED 22-06-2010

In the circumstances explained in the Preamble, Government are pleased to accord approval to, establish IT / ITES-BPO & Software project by the company at KIADB IT / ITES Industrial Area, Devanahalli Tq, Bangalore Rural District in 15 acres of land, with an investment of Rs.445.08 Crores and extended the following infrastructure facilities, incentives and concessions:-

INFRASTRUCTURE FACILITIES:

LAND: The Company is permitted to establish the project in 15 acres of land at KIADB IT / ITES Industrial Area, Devanahalli Taluk, Bangalore Rural District

POWER: 8000 KVA to be supplied from BESCOM

WATER: 0.15 MLD to be supplied by KIADB.

INCENTIVES & CONCESSIONS : As per millennium IT Policy / BPO Policy of the State.

Pollution Control Clearance: The Promoters to obtain CFE from KSPCB & Environmental Clearance from MOEF, GOI

Employment: The Company Shall provide employment in the industry as per the Dr Sarojini Mahishi report.

Statutory clearance: The Company to take necessary Statutory clearances

Others: The Promoter shall submit milestones / progress in implementation of the project regularly, which will be monitored by the Departments concerned

By Order and in the name of the Governor of Karnataka

P.R.NO.1650

J.R. Annapurna

Under Secretary to Government [I/C]

Information Technology, Biotechnology & Science and Technology Department

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಈ. ಗಣಪತಿ, ಪ್ರೊ, ಪಿ.ಎಸ್.ಐ. (ಸಿವಿಲ್), ಬೆಳಗಾವಿ ಜಿಲ್ಲೆ, ರವರ ಖಾಯಂಪೂರ್ವ ಅವಧಿ ವಿಸ್ತರಿಸುವ ಕುರಿತು.

ಓದಲಾಗಿದೆ :

1. ಡಿಜಿ ಮತ್ತು ಐಜಿಪಿ ರವರ ಪತ್ರ ಸಂಖ್ಯೆ : 15/ಸಿಬ್ಬಂದಿ–1/2008–09, ದಿನಾಂಕ 03.07.2008, 17–09–2009 ಮತ್ತು 15–05–2010.
2. ಆರಕ್ಷಕ ಮಹಾ ನಿರೀಕ್ಷಕರು, ಉತ್ತರ ವಲಯ, ಬೆಳಗಾವಿ ರವರ ಆದೇಶ ಸಂಖ್ಯೆ : ಸಿಬ್ಬಂದಿ–1/798/ಉವ/2007–08, ದಿನಾಂಕ 27–04–2010.

ಪ್ರಸ್ತಾವನೆ :

ಮೇಲೆ ಓದಲಾದ (1)ರ ಪತ್ರದಲ್ಲಿ ಶ್ರೀ ಈ. ಗಣಪತಿ, ಪ್ರೊ, ಪಿ.ಎಸ್.ಐ. (ಸಿವಿಲ್), ಬೆಳಗಾವಿ ಜಿಲ್ಲೆ ರವರು ದಿನಾಂಕ 31–12–2001 ರಂದು ಸೇವಾ ನಿರತ ಪಿಎಸ್ಐ ಹುದ್ದೆಗೆ ನೇಮಕಾತಿ ಹೊಂದಿರುತ್ತಾರೆ. ಸದರಿಯವರು 2½ ವರ್ಷಗಳ ಖಾಯಂ ಪೂರ್ವ ಅವಧಿಯಲ್ಲಿದ್ದು, ಇಲಾಖಾ ಪರೀಕ್ಷೆಯಾದ ಅಕೌಂಟ್ಸ್ ಹೈಯರ್ ಪರೀಕ್ಷೆಯಲ್ಲಿ ಉತ್ತೀರ್ಣರಾಗದೆ ಇದ್ದುದರಿಂದ ಸದರಿಯವರ ಖಾಯಂಪೂರ್ವ ಅವಧಿಯನ್ನು ಪೊಲೀಸ್ ಅಧೀಕ್ಷಕರು, ಬೆಳಗಾವಿ ರವರು ದಿನಾಂಕ 01–06–2005 ರಿಂದ 6 ತಿಂಗಳವರೆಗೆ ವಿಸ್ತರಿಸಿರುತ್ತಾರೆ. ಸದರಿ ಆದೇಶದಲ್ಲಿ ದಿನಾಂಕಗಳು ತಪ್ಪಾಗಿದ್ದುದರಿಂದ ನ್ಯೂನತೆಯನ್ನು ಸರಿಪಡಿಸಿ ಐಜಿಪಿ, ಉತ್ತರ ವಲಯ, ಬೆಳಗಾವಿ ರವರು ಮೇಲೆ ಓದಲಾದ (2)ರ ಆದೇಶದಲ್ಲಿ ದಿನಾಂಕ 01.07.2004 ರಿಂದ 30.09.2005 ರವರೆಗೆ ಕೆ.ಸಿ.ಎಸ್. (ಪ್ರೊಬೇಷನರಿ) ನಿಯಮಾವಳಿ, 1977ರ ನಿಯಮ 4(1)(ii) ರನ್ವಯ ವಿಸ್ತರಿಸಿರುತ್ತಾರೆ. ಆದುದರಿಂದ ಸದರಿಯವರ ಖಾಯಂಪೂರ್ವ ಅವಧಿಯನ್ನು ದಿನಾಂಕ 01–10–2005 ರಿಂದ 09.06.2007 (ಇಲಾಖಾ ಪರೀಕ್ಷೆ ತೇರ್ಗಡೆ ಹೊಂದಿದ ದಿನಾಂಕ) ರವರೆಗೆ ಕೆ.ಸಿ.ಎಸ್. (ಪ್ರೊಬೇಷನರಿ) ನಿಯಮಾವಳಿ, 1977ರ ನಿಯಮ 4(1)(i) ರನ್ವಯ ವಿಸ್ತರಿಸುವಂತೆ ಡಿಜಿ ಮತ್ತು ಐಜಿಪಿ ರವರು ಕೋರಿರುತ್ತಾರೆ.

ಸರ್ಕಾರದ ಆದೇಶ ಸಂ : ಒಇ 161 ಪೊಸಇ 2008, ಬೆಂಗಳೂರು, ದಿನಾಂಕ : 19-06-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನರಿ) ನಿಯಮಗಳು, 1977ರ ನಿಯಮ 4(1)(i) ರನ್ವಯ ಶ್ರೀ ಈ. ಗಣಪತಿ, ಪ್ರೊ, ಪಿ.ಎಸ್.ಐ. (ಸಿವಿಲ್), ಇವರ ಖಾಯಂ ಪೂರ್ವ ಅವಧಿಯನ್ನು ದಿನಾಂಕ 01-10-2005 ರಿಂದ 09-06-2007 ರವರೆಗೆ (ಇಲಾಖಾ ಪರೀಕ್ಷೆ ತೇರ್ಗಡೆ ಹೊಂದಿದ ದಿನಾಂಕದವರೆಗೆ) ವಿಸ್ತರಿಸಿ ಆದೇಶಿಸಿದೆ.

ವಿಸ್ತರಿಸಿದ ಪರಿವೀಕ್ಷಣಾ ಅವಧಿಗೆ ಕ.ನಾ.ಸೇ (ಪರಿವೀಕ್ಷಣೆ) ನಿಯಮಗಳು 1977ರ ನಿಯಮ 10ರ ಪ್ರಕಾರ ವಾರ್ಷಿಕ ವೇತನ ಬಡ್ತಿಗಳನ್ನು ನೀಡುವಂತಿಲ್ಲ. ಕಾಲ್ಪನಿಕವಾಗಿ ವಾರ್ಷಿಕ ವೇತನ ಬಡ್ತಿಗಳನ್ನು ಪರಿಗಣಿಸಿ ವೇತನವನ್ನು ನಿಗದಿಪಡಿಸುವುದು. ಹೀಗೆ ನಿಗದಿಪಡಿಸಿದ ವೇತನದ ಬಾಕಿಯನ್ನು ನೀಡಲು ಅವಕಾಶವಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ರವಿಪ್ರಕಾಶ್,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1676 ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು).

ENERGY SECRETARIAT

Sub :- Nomination of Officers to visit Jakarta to discuss with the Coal Contractors regarding Issues related to Coal Contracts of Udupi Power Corporation Limited (UPCL).

Read :- 1. Letter No. UPCL/BO1/2010/2057 dated 09-06-2010 of UPCL addressed to the Chief Secretary, Govt. of Karnataka.

1. Government Order No. EN 45 PPC 2010, dated 01.06.2010.

***

Preamble:

(1) M/s Udupi Power Corporation Limited (UPCL) in the letter read at (1) above has informed that Unit No.1 (600 MW) was synchronized with 220 KV KPTCL Grid on 03-06-2010, with 75 MW load sharing. The unit was shutdown for carrying out repairs, checks on water conductor system, to fine tune coal firing system and to carry out tests for initial parameter set out under commissioning protocol by OEM/EPC Contractors. The unit will be re-synchronized shortly to put in to operation.

(2) Further M/s. UPCL has stated that they have about 2.5 lakhs tones of live coal stock. After Unit No. 1 achieves full load (600 MW), the coal consumption per day is expected to be 5000 tonnes. Unit No. 2 (600 MW) is expected to be commissioned by October 2010. With the existing live stock of 2.5 lakhs Tonnes, it would be possible to operate 1st Unit for about 45 to 50 days. To ensure continuity of coal supplies, M/s. UPCL is trying to organize discussions with all the 3 existing Coal Contractors i.e., M/s. PT Adaro Indonesia, M/s. PT Indominco Mandiri and M/s. Glencore within 1 to 2 weeks time on very urgent basis. Based on the Government Order read at (2) above, M/s. UPCL had sent communication to the 3 coal contractors to attent the negotiations meeting at Bangalore on 9/10.06.2010. The coal suppliers have expressed their inability to attend the meeting at Bangalore and in turn called M/s. UPCL to visit their respective offices at Jakarta after 17th June 2010.

(3) Considering the extreme urgency to arrange coal supplies for continuous operation of Unit No. 1, M/s. UPCL requested Government to nominate Senior Officials to Jakarta to take part in the negotiations and conclude the same on top most priority. It would require at least a months time to organize the shipments after concluding negotiations. Since, the re-negotiated price proposal has to be forwarded to Government of Indonesia for concurrence which takes at least 1 to 2 weeks. It is intimated that with the above for re-negotiations and allowing period of about 1 to 2 weeks to the coal contractors M/s. PT Adaro Indonesia, M/s PT Indominco Mandiri to seek approval from the Directorate General of Mineral, Coal & Geothermal, Government of Indonesia.

(4) M/s UPCL has requested the Government to issue directions to Power Company of Karnataka Limited and Electricity Supply Companies (ESCOMs) negotiating team to attend discussions with Coal Contractors in 3rd or 4th week of June 2010 at Jakarta.

(5)The request of M/s. UPCL has been examined in detail and issued following order :

Government Order No. EN 45 PPC 2010, Bangalore, dated : 22-06-2010

a) In the circumstances explained above, Government accords approval for the following officers to participate in the discussions to conclude the negotiations with Coal Contractors at Jakarta in respect of M/s. Udupi Power Corporation Limited.

(i) Smt. Latha Krishna Rao, IAS,
Managing Director,
Karnataka Power Transmission Corporation Limited,
Bangalore.

(ii) Sri Tushar Girinath, IAS,
Managing Director,
Bangalore Electricity Supply Company,
Bangalore.

(iii) Sri M. Naveen Kumar, IA & AS
Managing Director,
Power Company of Karnataka Limited,
Bangalore.

(b) The expenditure for the above visit by the officers will be borne by their respective companies.

By Order and in the name of the Governor of Karnataka
S.J. SAMPATH KUMAR,
Under Secretary to Government,
Energy Department.

P.R. 1677

ಇಂಧನ ಸಚಿವಾಲಯ

ವಿಷಯ : ಜಸ್ಟೀಸ್ ವಿ.ಪಿ. ಮೋಹನ್ ಕುಮಾರ್, ವಿಚಾರಣಾಧಿಕಾರಿಯವರ ಕಾರ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ವೇತನವನ್ನು ನಿಗದಿಪಡಿಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 125 ಪಿಪಿಸಿ 2009, ದಿನಾಂಕ 13–10–2009, 03.02.2010 ಮತ್ತು 14–06–2010.

2. ಸರ್ಕಾರಿ ಆದೇಶ ಸಂಖ್ಯೆ : ಇಎನ್ 125 ಪಿಪಿಸಿ 2009, ದಿನಾಂಕ 04–12–2009.

3. ಜಸ್ಟೀಸ್ ವಿ.ಪಿ. ಮೋಹನ್ ಕುಮಾರ್‌ರವರ ಕಾರ್ಯದರ್ಶಿಯವರ ಪತ್ರ ದಿನಾಂಕ : 14.05.2010.

ಪ್ರಸ್ತಾವನೆ :

ಮೇಲೆ ಓದಲಾದ ಸರ್ಕಾರಿ ಆದೇಶ (1)ರಲ್ಲಿ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಜಸ್ಟೀಸ್ ವಿ.ಪಿ. ಮೋಹನ್ ಕುಮಾರ್‌ರವರನ್ನು ಕರ್ನಾಟಕ ವಿದ್ಯುತ್ ನಿಗಮ ನಿಯಮಿತದಲ್ಲಿ ಕಲ್ಲಿದ್ದಲನ್ನು ಖರೀದಿಸುವಲ್ಲಿ ಹಾಗೂ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ಪವರ್ ಟ್ರಾನ್ಸ್‌ಫಾರ್ಮರ್ ಖರೀದಿಸುವಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದೆ ಮತ್ತು ಸರ್ಕಾರಿ ಆದೇಶ ಸಂಖ್ಯೆ : ಇಎನ್ 125 ಪಿಪಿಸಿ 2009 ದಿನಾಂಕ 03–02–2010 ರಲ್ಲಿ ವಿಚಾರಣೆಯ ಕಾಲಾವಧಿಯನ್ನು ದಿನಾಂಕ 13–01–2010 ರಿಂದ ಮುಂದಿನ 6 ತಿಂಗಳವರೆಗೆ ವಿಸ್ತರಿಸಲಾಗಿತ್ತು. ತದನಂತರ ಸರ್ಕಾರಿ ಆದೇಶ ದಿನಾಂಕ 14–06–2010 ರಲ್ಲಿ ವಿಚಾರಣೆಯ ಕಾಲಾವಧಿಯನ್ನು ದಿನಾಂಕ 31–12–2010 ರವರೆಗೆ ವಿಸ್ತರಿಸಲಾಗಿದೆ.

ಮೇಲೆ ಓದಲಾದ ಸರ್ಕಾರಿ ಆದೇಶ (2) ರಲ್ಲಿ ನ್ಯಾಯಮೂರ್ತಿ ಶ್ರೀ ವಿ.ಪಿ. ಮೋಹನ್ ಕುಮಾರ್, ವಿಚಾರಣಾಧಿಕಾರಿಯವರ ಕಾರ್ಯಾಲಯಕ್ಕೆ ಕಾರ್ಯದರ್ಶಿ ಹಾಗೂ ಇತರೆ ಸಿಬ್ಬಂದಿ ವರ್ಗದ ಹುದ್ದೆಗಳನ್ನು ನೇಮಿಸಿಕೊಳ್ಳಲು ಅನುಮೋದನೆಯನ್ನು ನೀಡಲಾಗಿತ್ತು.

ಮೇಲೆ ಓದಲಾದ ಪತ್ರ (3) ರಲ್ಲಿ ಜಸ್ಟೀಸ್ ಶ್ರೀ ವಿ.ಪಿ. ಮೋಹನ್ ಕುಮಾರ್‌ರವರ ಕಾರ್ಯದರ್ಶಿ ಇವರು ಈ ಕೆಳಕಂಡ ಸಿಬ್ಬಂದಿ ವರ್ಗದವರ ವೇತನವನ್ನು ನಿಗದಿಪಡಿಸುವಂತೆ ಕೋರಿರುತ್ತಾರೆ.

ಕ್ರಮ ಸಂಖ್ಯೆ	ಹೆಸರು ಮತ್ತು ಪದನಾಮ	ನೇಮಿಸಿಕೊಳ್ಳಲಾದ ದಿನಾಂಕ
1.	ಶ್ರೀ ಎಸ್. ರಂಗಯ್ಯ, ಕೋರ್ಟ್ ಆಫೀಸರ್.	01–05–2010
2.	ಶ್ರೀ ಜೆ. ನೀಲಪ್ಪ, ಶೀಘ್ರಲಿಪಿಗಾರ	11–05–2010
3.	ಶ್ರೀಮತಿ ಬಿ. ವಿಮಲ, ಪ್ರಥಮ ದರ್ಜೆ ಸಹಾಯಕಿ	03–05–2010

ಮೇಲೆ ನಮೂದಿಸಿರುವ ಸಿಬ್ಬಂದಿ ವರ್ಗದವರು ಉಚ್ಚ ನ್ಯಾಯಾಲಯದಲ್ಲಿ ಕಾರ್ಯನಿರ್ವಹಿಸಿ ನಿವೃತ್ತಿ ಹೊಂದಿರುತ್ತಾರೆ. ಇವರ ಮರು ನೇಮಕಾತಿ ವೇತನವನ್ನು ನಿಗದಿಪಡಿಸುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ :-

ಸರ್ಕಾರದ ಆದೇಶ ಸಂ : ಇಎನ್ 125 ಪಿಪಿಸಿ 2009, ಬೆಂಗಳೂರು, ದಿನಾಂಕ : 24-06-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಎಸ್. ರಂಗಯ್ಯ, ಕೋರ್ಟ್ ಆಫೀಸರ್ ಇವರ ಮರು ನೇಮಕಾತಿಗೆ ಸಂಚಿತ ವೇತನವನ್ನು ರೂ.11,400/- (ಹನ್ನೊಂದು ಸಾವಿರದ ನಾಲ್ಕು ನೂರು ರೂಪಾಯಿಗಳು ಮಾತ್ರ) ಗಳಿಗೆ ದಿನಾಂಕ : 01-05-2010 ರಿಂದ ನಿಗದಿಪಡಿಸಿದೆ. ಈ ಸಂಚಿತವೇತನದ ಮೇಲೆ ಯಾವುದೇ ಭತ್ಯೆಯನ್ನು ಪಡೆಯುವಂತಿಲ್ಲ. ನಿವೃತ್ತಿ ನಂತರದ ಸೇವೆಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವಂತಿಲ್ಲ. ಶ್ರೀಯುತರ ನೇಮಕಾತಿಯು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ 1 ರಲ್ಲಿರುವಂತೆ ಷರತ್ತು ಮತ್ತು ನಿಬಂಧನೆಗೊಳಪಟ್ಟಿರುತ್ತದೆ.

ಶ್ರೀ ಜೆ. ನೀಲಪ್ಪ, ಶೀಘ್ರಲಿಪಿಗಾರ ಇವರ ಮರು ನೇಮಕಾತಿಗೆ ಸಂಚಿತ ವೇತನವನ್ನು ರೂ.8,000/- (ಎಂಟು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ ದಿನಾಂಕ : 11-05-2010 ರಿಂದ ನಿಗದಿಪಡಿಸಿದೆ. ಈ ಸಂಚಿತವೇತನದ ಮೇಲೆ ಯಾವುದೇ ಭತ್ಯೆಯನ್ನು ಪಡೆಯುವಂತಿಲ್ಲ. ನಿವೃತ್ತಿ ನಂತರದ ಸೇವೆಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವಂತಿಲ್ಲ. ಶ್ರೀಯುತರ ನೇಮಕಾತಿಯು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ 2 ರಲ್ಲಿರುವಂತೆ ಷರತ್ತು ಮತ್ತು ನಿಬಂಧನೆಗೊಳಪಟ್ಟಿರುತ್ತದೆ.

ಶ್ರೀಮತಿ ಬಿ. ವಿಮಲ, ಪ್ರಥಮ ದರ್ಜೆ ಸಹಾಯಕಿ ಇವರ ಮರು ನೇಮಕಾತಿಗೆ ಸಂಚಿತ ವೇತನವನ್ನು ರೂ.8,000/- (ಎಂಟು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ ದಿನಾಂಕ : 03-05-2010 ರಿಂದ ನಿಗದಿಪಡಿಸಿದೆ. ಈ ಸಂಚಿತವೇತನದ ಮೇಲೆ ಯಾವುದೇ ಭತ್ಯೆಯನ್ನು ಪಡೆಯುವಂತಿಲ್ಲ. ನಿವೃತ್ತಿ ನಂತರದ ಸೇವೆಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವಂತಿಲ್ಲ. ಶ್ರೀಯುತರ ನೇಮಕಾತಿಯು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ 3 ರಲ್ಲಿರುವಂತೆ ಷರತ್ತು ಮತ್ತು ನಿಬಂಧನೆಗೊಳಪಟ್ಟಿರುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 981 ವೆಚ್ಚ-1/2010 ದಿನಾಂಕ : 18-06-2010 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಸರ್ಕಾರದ ಆದೇಶ ಸಂ : ಇಎನ್ 125 ಪಿಪಿಸಿ 2009, ದಿನಾಂಕ : 24-06-2010 ಕ್ಕೆ ಅನುಬಂಧ-1

ಗುತ್ತಿಗೆ ಆಧಾರದ ಮರು ನೇಮಕಾತಿಯ ಬಗ್ಗೆ ಷರತ್ತು ಮತ್ತು ನಿಬಂಧನೆಗಳು

1. ಶ್ರೀ ಎಸ್. ರಂಗಯ್ಯ ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ 01-05-2010 ರಿಂದ 31-12-2010 ರ ಅವಧಿಯವರೆಗೆ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ, ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು, ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.
2. ಶ್ರೀ ಎಸ್. ರಂಗಯ್ಯ ಇವರು ಪಡೆಯುತ್ತಿರುವ ನಿವೃತ್ತಿ ವೇತನದೊಂದಿಗೆ **ರೂ.11,400/-** ಮರು ನೇಮಕಾತಿಯ ಸಂಚಿತ ವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ. ಈ ವೇತನದ ಜೊತೆಗೆ ಅವರು ನಿವೃತ್ತಿ ಹೊಂದುವಾಗಿ ಪಡೆಯುತ್ತಿದ್ದ ನಿವೃತ್ತಿ ವೇತನದ ಮೇಲೆ ತುಟ್ಟಿಭತ್ಯೆಯನ್ನು ಮಾತ್ರ ಪಡೆಯಲು ಅರ್ಹರಿರುತ್ತಾರೆ.
3. ಸದರಿ ಗುತ್ತಿಗೆ ನೌಕರರು ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಯಾಣ ಮಾಡಲೇ ಬೇಕಾದಲ್ಲಿ ಮಾತ್ರ ಅವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಸದರಿ ಗುತ್ತಿಗೆ ನೌಕರರುಗಳು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆ ಮತ್ತು ಕೆ.ಸಿ.ಎಸ್.ಆರ್. ನಿಯಮ 150ರ ಪ್ರಕಾರ ಗಳಿಕೆ ರಜೆ ಪಡೆಯಲು ಅರ್ಹರಾಗಿರುತ್ತಾರೆ.
5. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.
6. ಸದರಿ ನೌಕರರು ದುವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಬಂಧಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.

7. ಸದರಿ ಮರು ನೇಮಕಾತಿ ಅವಧಿಯ ಸೇವೆಯನ್ನು ನಿವೃತ್ತಿ ವೇತನ ಹಾಗೂ ಇತ್ಯಾದಿ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವುದಿಲ್ಲ.
8. ಅವರ ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ಅವರು ನೆರವೇರಿಸುವುದು.
9. ಅವರು ಕರ್ತವ್ಯಗಳನ್ನು ಪಾಲಿಸುತ್ತಿರುವ ಅಥವಾ ನೆರವೇರಿಸುತ್ತಿರುವಾಗ ಅವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.
10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.
11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
12. ಅವರ ದುರ್ನಡತೆಯಿಂದಾಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲೀ ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಉಂಟುಮಾಡಿದ್ದಲ್ಲಿ, ಅದನ್ನು ಸರ್ಕಾರಕ್ಕೆ ತುಂಬಿಕೊಡಲು ಅವರು ಹೊಣೆಯಾಗಿರುತ್ತಾರೆ.
13. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ.50.00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಸರ್ಕಾರದ ಆದೇಶ ಸಂ : ಇಎನ್ 125 ಪಿಪಿಸಿ 2009, ದಿನಾಂಕ : 24–06–2010 ಕ್ಕೆ ಅನುಬಂಧ–2
ಗುತ್ತಿಗೆ ಆಧಾರದ ಮರು ನೇಮಕಾತಿಯ ಬಗ್ಗೆ ಷರತ್ತು ಮತ್ತು ನಿಬಂಧನೆಗಳು

1. ಶ್ರೀ ಜೆ. ನೀಲಪ್ಪ ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ 11–05–2010 ರಿಂದ 31–12–2010 ರ ಅವಧಿಯವರೆಗೆ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ, ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು, ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.
2. ಶ್ರೀ ಜೆ. ನೀಲಪ್ಪ ಇವರು ಪಡೆಯುತ್ತಿರುವ ನಿವೃತ್ತಿ ವೇತನದೊಂದಿಗೆ **ರೂ.8,000/–** ಮರು ನೇಮಕಾತಿಯ ಸಂಚಿತ ವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ. ಈ ವೇತನದ ಜೊತೆಗೆ ಅವರು ನಿವೃತ್ತಿ ಹೊಂದುವಾಗ ಪಡೆಯುತ್ತಿದ್ದ ನಿವೃತ್ತಿ ವೇತನದ ಮೇಲೆ ತುಟ್ಟಿಭತ್ಯೆಯನ್ನು ಮಾತ್ರ ಪಡೆಯಲು ಅರ್ಹರಿರುತ್ತಾರೆ.
3. ಸದರಿ ಗುತ್ತಿಗೆ ನೌಕರರು ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಯಾಣ ಮಾಡಲೇ ಬೇಕಾದಲ್ಲಿ ಮಾತ್ರ ಅವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಸದರಿ ಗುತ್ತಿಗೆ ನೌಕರರುಗಳು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆ ಮತ್ತು ಕೆ.ಸಿ.ಎಸ್.ಆರ್. ನಿಯಮ 150ರ ಪ್ರಕಾರ ಗಳಿಕೆ ರಜೆ ಪಡೆಯಲು ಅರ್ಹರಾಗಿರುತ್ತಾರೆ.
5. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.
6. ಸದರಿ ನೌಕರರು ದುವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಬಂಧಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.
7. ಸದರಿ ಮರು ನೇಮಕಾತಿ ಅವಧಿಯ ಸೇವೆಯನ್ನು ನಿವೃತ್ತಿ ವೇತನ ಹಾಗೂ ಇತ್ಯಾದಿ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವುದಿಲ್ಲ.
8. ಅವರ ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ಅವರು ನೆರವೇರಿಸುವುದು.
9. ಅವರು ಕರ್ತವ್ಯಗಳನ್ನು ಪಾಲಿಸುತ್ತಿರುವ ಅಥವಾ ನೆರವೇರಿಸುತ್ತಿರುವಾಗ ಅವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.

10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.
11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
12. ಅವರ ದುರ್ನಡತೆಯಿಂದಾಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲೀ ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಉಂಟುಮಾಡಿದ್ದಲ್ಲಿ, ಅದನ್ನು ಸರ್ಕಾರಕ್ಕೆ ತುಂಬಿಕೊಡಲು ಅವರು ಹೊಣೆಯಾಗಿರುತ್ತಾರೆ.
13. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ.50.00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಸರ್ಕಾರದ ಆದೇಶ ಸಂ : ಇಎನ್ 125 ಪಿಪಿಸಿ 2009, ದಿನಾಂಕ : 24–06–2010 ಕ್ಕೆ ಅನುಬಂಧ–3

ಗುತ್ತಿಗೆ ಆಧಾರದ ಮರು ನೇಮಕಾತಿಯ ಬಗ್ಗೆ ಷರತ್ತು ಮತ್ತು ನಿಬಂಧನೆಗಳು

1. ಶ್ರೀಮತಿ ಬಿ. ವಿಮಲ ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ 03–05–2010 ರಿಂದ 31–12–2010 ರ ಅವಧಿಯವರೆಗೆ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ, ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು, ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.
2. ಶ್ರೀಮತಿ ಬಿ. ವಿಮಲ ಇವರು ಪಡೆಯುತ್ತಿರುವ ನಿವೃತ್ತಿ ವೇತನದೊಂದಿಗೆ **ರೂ.8,000/–** ಮರು ನೇಮಕಾತಿಯ ಸಂಚಿತ ವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ. ಈ ವೇತನದ ಜೊತೆಗೆ ಅವರು ನಿವೃತ್ತಿ ಹೊಂದುವಾಗ ಪಡೆಯುತ್ತಿದ್ದ ನಿವೃತ್ತಿ ವೇತನದ ಮೇಲೆ ತುಟ್ಟಿಭತ್ಯೆಯನ್ನು ಮಾತ್ರ ಪಡೆಯಲು ಅರ್ಹರಿರುತ್ತಾರೆ.
3. ಸದರಿ ಗುತ್ತಿಗೆ ನೌಕರರು ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಯಾಣ ಮಾಡಲೇ ಬೇಕಾದಲ್ಲಿ ಮಾತ್ರ ಅವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಸದರಿ ಗುತ್ತಿಗೆ ನೌಕರರುಗಳು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆ ಮತ್ತು ಕೆ.ಸಿ.ಎಸ್.ಆರ್. ನಿಯಮ 150ರ ಪ್ರಕಾರ ಗಳಿಕೆ ರಜೆ ಪಡೆಯಲು ಅರ್ಹರಾಗಿರುತ್ತಾರೆ.
5. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.
6. ಸದರಿ ನೌಕರರು ದುವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಬಂಧಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.
7. ಸದರಿ ಮರು ನೇಮಕಾತಿ ಅವಧಿಯ ಸೇವೆಯನ್ನು ನಿವೃತ್ತಿ ವೇತನ ಹಾಗೂ ಇತ್ಯಾದಿ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವುದಿಲ್ಲ.
8. ಅವರ ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ಅವರು ನೆರವೇರಿಸುವುದು.
9. ಅವರು ಕರ್ತವ್ಯಗಳನ್ನು ಪಾಲಿಸುತ್ತಿರುವ ಅಥವಾ ನೆರವೇರಿಸುತ್ತಿರುವಾಗ ಅವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.
10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.
11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
12. ಅವರ ದುರ್ನಡತೆಯಿಂದಾಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲೀ ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಉಂಟುಮಾಡಿದ್ದಲ್ಲಿ, ಅದನ್ನು ಸರ್ಕಾರಕ್ಕೆ ತುಂಬಿಕೊಡಲು ಅವರು ಹೊಣೆಯಾಗಿರುತ್ತಾರೆ.

13. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ.50.00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಪಿ.ಆರ್. 1678

ಇಂಧನ ಸಚಿವಾಲಯ

ವಿಷಯ : ಮೆ॥ ಜಸ್ಪರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ : ಇಂಇ 243 ಎನ್‌ಸಿಇ 2003, ದಿನಾಂಕ 26–02–2004.

2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ 17.04.2010.

3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 200 ಎನ್‌ಸಿಇ 2010 ದಿನಾಂಕ 26.04.2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ॥ ಜಸ್ಪರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಗುಟ್ಟಹಳ್ಳಿ ಗ್ರಾಮದ ದಿನ್ನಿಕೆರೆ ಹಳ್ಳಕ್ಕೆ ಅಡ್ಡಲಾಗಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ಜಸ್ಪರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ಜಸ್ಪರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟೀಸು "No such Person" ಎಂದು ಹಿಂದಕ್ಕೆ ಬಂದಿರುತ್ತದೆ. ಕ್ರೆಡಲ್ ಸಂಸ್ಥೆಯಲ್ಲಿಯೂ ಸಹ ಪರಿಶೀಲಿಸಲಾಯಿತು. ವಿಳಾಸ ಬದಲಾವಣೆ ಬಗ್ಗೆ ಮಾಹಿತಿ ನೀಡಿಲ್ಲವೆಂಬುದನ್ನು ಕ್ರೆಡಲ್ ಸಂಸ್ಥೆಯಿಂದ ದೃಢೀಕರಿಸಿಕೊಳ್ಳಲಾಯಿತು.

ಯೋಜನೆಯು ಹಂಚಿಕೆಯಾಗಿ 6 ವರ್ಷ ಕಳೆದರೂ ಮೆ॥ ಜಸ್ಪರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರು ಯೋಜನೆ ಅನುಷ್ಠಾನ ಮಾಡಿರುವುದಿಲ್ಲ. ಆದ್ದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :

ಸರ್ಕಾರದ ಆದೇಶ ಸಂ : ಇಎನ್ 200 ಎನ್‌ಸಿಇ 2010, ಬೆಂಗಳೂರು, ದಿನಾಂಕ : 21–06–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಂಇ 243 ಎನ್‌ಸಿಇ 2003, ದಿನಾಂಕ 26–2–2004 ರಲ್ಲಿ ಮೆ॥ ಜಸ್ಪರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಗುಟ್ಟಹಳ್ಳಿ ಗ್ರಾಮದ ದಿನ್ನಿಕೆರೆ ಹಳ್ಳಕ್ಕೆ ಅಡ್ಡಲಾಗಿ ಹಂಚಿಕೆಯಾಗಿದ್ದ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜೆ. ಸಂಪತ್ ಕುಮಾರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಪಿ.ಆರ್. 1679

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : ಜೀತವಿಮುಕ್ತರ ಪುನರ್ವಸತಿ ಸಹಾಯಧನ ಯೋಜನೆಯಡಿ ಗದಗ್ ಜಿಲ್ಲೆಯ ಏಳು ಜನ ಜೀತವಿಮುಕ್ತರಿಗೆ 2010-11 ನೇ ಸಾಲಿನಲ್ಲಿ ಸಹಾಯಧನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 15 ಆರ್‌ಬಿಎಲ್ 2004, ದಿನಾಂಕ 21-01-2006.
2. ಉಪ ವಿಭಾಗಾಧಿಕಾರಿ ಗದಗ್ ಉಪ ವಿಭಾಗ, ಗದಗ್ ಇವರ ಪತ್ರ ಸಂಖ್ಯೆ ಆಡಳಿತ ವಹ 01/10-11/32, ದಿನಾಂಕ 03-04-2010.
3. ಗದಗ್ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪತ್ರ ಸಂಖ್ಯೆ : ಜಿಪಂಗ : ಸಿ 3 : ಇತರೆ 2010-11, ದಿನಾಂಕ 19-5-2010.

ಪ್ರಸ್ತಾವನೆ :

ಜೀತಕಾರ್ಮಿಕರನ್ನು ಜೀತಪದ್ಧತಿಯಿಂದ ಬಿಡುಗಡೆಗೊಳಿಸಿದ ನಂತರ, ಅವರುಗಳಿಗೆ ಕನಿಷ್ಠ ಆರ್ಥಿಕ ಸವಲತ್ತನ್ನು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಜೀತವಿಮುಕ್ತರ ಪುನರ್ವಸತಿ ಸಹಾಯಧನ ಎಂಬ ಹೊಸ ಯೋಜನೆಯನ್ನು ರೂಪಿಸಿದ್ದು, ದಿನಾಂಕ 21-1-2006 ರಿಂದ ಈ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೆ ತರಲಾಗಿದೆ. ಈ ಯೋಜನೆಯಡಿ ರೂಪಿಸಿರುವ ನಿರ್ದೇಶನದಂತೆ, ದಿನಾಂಕ 21-1-2006 ರ ತರುವಾಯ ಜೀತಪದ್ಧತಿಯಿಂದ ಬಿಡುಗಡೆಗೊಳಿಸುವ ರಾಜ್ಯದ ಪ್ರತಿ ಜೀತ ಕಾರ್ಮಿಕ / ಬಾಲ ಜೀತ ಕಾರ್ಮಿಕರಿಗೆ ಮಾಹೆಯಾನ ರೂ. 300.00 ರಂತೆ ಸಹಾಯಧನವನ್ನು ಜೀತಪದ್ಧತಿಯಿಂದ ಬಿಡುಗಡೆಗೊಳಿಸಿದ ದಿನದಿಂದ ಮೊದಲ 24 ತಿಂಗಳುಗಳ ಅವಧಿಗೆ ಪಾವತಿಸಬೇಕಾಗುತ್ತದೆ.

2. ಮೇಲೆ ಓದಲಾದ ಕ್ರ.ಸಂ. (2)ರ ಪತ್ರದಲ್ಲಿ ಗದಗ್ ಜಿಲ್ಲೆಯ, ರೋಣ ತಾಲ್ಲೂಕಿನ ಏಳು ಜನ ಜೀತ ವಿಮುಕ್ತರು ಬೆಂಗಳೂರು (ನಗರ) ಜಿಲ್ಲೆಯ ಆನೇಕಲ್ ತಾಲ್ಲೂಕು, ಕಸಬ ಹೋಬಳಿ, ಮುತ್ತುಗಟ್ಟ ಗ್ರಾಮದಲ್ಲಿನ ಎಸ್.ಬಿ.ಐ. ಇಟ್ಟಿಗೆ ಕಾರ್ಖಾನೆಯ ಮಾಲೀಕರಾದ ಶ್ರೀ ಶಶಿಕುಮಾರ್ ಬಿನ್ ವೆಂಕಟಸ್ವಾಮಿ ರೆಡ್ಡಿ ಇವರಡಿ ಒತ್ತೆಯಾಳುಗಳಾಗಿರುವುದನ್ನು ಪತ್ತೆ ಹಚ್ಚಿ, ಜೀತದಾಳು ವಿಮೋಚನಾ ಕಾಯಿದೆ 1976 ರಡಿ ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸಿಕೊಂಡು, ದಿನಾಂಕ 25-6-08 ರಂದು ಜೀತಪದ್ಧತಿಯಿಂದ ವಿಮುಕ್ತಿಗೊಳಿಸಿ, ಬೆಂಗಳೂರು ದಕ್ಷಿಣ ಉಪ ವಿಭಾಗದ ಉಪ ವಿಭಾಗೀಯ ದಂಡಾಧಿಕಾರಿರವರು ಜೀತವಿಮುಕ್ತ ಪ್ರಮಾಣಪತ್ರವನ್ನು ಹೊರಡಿಸಿರುವುದರಿಂದ, ಸದರಿಯವರಿಗೆ ಪುನರ್ ವಸತಿ ಕಲ್ಪಿಸಲು ಗದಗ್ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಉಲ್ಲೇಖ (3)ರ ಪತ್ರದಲ್ಲಿ ಕೋರಿರುತ್ತಾರೆ. ಆದ್ದರಿಂದ ಗದಗ್ ಜಿಲ್ಲೆಯ ಮೇಲ್ಕಂಡ ಏಳು ಜನ ಜೀತದಾಳುಗಳಿಗೆ ಈ ಯೋಜನೆಯಡಿ ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ 2230-01-198-6-01-300 ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ, 2010 ಏಪ್ರಿಲ್ ಮಾಹೆಯಿಂದ 2011 ಮಾರ್ಚಿ ಮಾಹೆಯವರೆಗಿನ ಒಟ್ಟು 12 ತಿಂಗಳ ಅವಧಿಗೆ ಮಾಹೆಯಾನ ರೂ. 300/- ರಂತೆ ಸಹಾಯಧನಕ್ಕಾಗಿ ತಗಲುವ ರೂ. 25,200/-ಗಳ ಅನುದಾನವನ್ನು ಗದಗ್ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

ಸರ್ಕಾರದ ಆದೇಶ ಸಂ : ಗ್ರಾಅಪ 1 ಆರ್‌ಬಿಎಲ್ 2010, ಬೆಂಗಳೂರು, ದಿನಾಂಕ : 14-06-2010

ಜೀತ ವಿಮುಕ್ತರ ಪುನರ್ವಸತಿ ಸಹಾಯಧನ ಯೋಜನೆ ಅಡಿ ಗದಗ್ ಜಿಲ್ಲೆಯ ರೋಣ ತಾಲ್ಲೂಕಿನ ಏಳು ಜನ ಜೀತ ವಿಮುಕ್ತರಿಗೆ 2010-11ನೇ ಸಾಲಿನ 12 ತಿಂಗಳ (2010 ಏಪ್ರಿಲ್ ಇಂದ 2011ರ ಮಾರ್ಚಿವರೆಗೆ) ಮಾಹೆಯಾನ ರೂ.300/- ರಂತೆ ಸಹಾಯಧನ ಪಾವತಿಸಲು ಒಟ್ಟು ರೂ. 25,200/- (ಇಪ್ಪತ್ತೈದು ಸಾವಿರದ ಇನ್ನೂರು ರೂಪಾಯಿಗಳು ಮಾತ್ರ) ಗಳನ್ನು ಗದಗ್ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ. ಮಿಕ್ಕ 12 ತಿಂಗಳ ಅವಧಿಗೆ ಒಟ್ಟು ರೂ. 25,200ಗಳ ಸಹಾಯಧನವನ್ನು ಏಳು ಜನ ಜೀತ ವಿಮುಕ್ತರಿಗೆ ಮುಂದಿನ ಸಾಲಿನಲ್ಲಿ ಬಿಡುಗಡೆಗೊಳಿಸಲಾಗುವುದು.

2. ಈ ಕಾರ್ಯಕ್ಕಾಗಿ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2230-ಕಾರ್ಮಿಕ ಮತ್ತು ಉದ್ಯೋಗ-01 – ಕಾರ್ಮಿಕ-198 – ಗ್ರಾಮ ಪಂಚಾಯತಿಗೆ ಸಹಾಯ – 6 – ಗ್ರಾಮ ಪಂಚಾಯತಿಗಳು – ಕೇಂದ್ರ ಪುರಸ್ಕೃತ ಯೋಜನೆ (ಜೀತದಾಳುಗಳ ಪುನರ್ವಸತಿ) 01-ಬ್ಲಾಕ್ ಅನುದಾನ – 300- ಒಟ್ಟು ಜಿಲ್ಲಾ ಪಂಚಾಯತಿ (ಯೋಜನೆ) ಗೆ ಜಮಾ ಮಾಡತಕ್ಕದ್ದು.

3. ಸರ್ಕಾರದ ಆದೇಶ ಸಂ. ಗ್ರಾಅಪ. 15. ಆರ್‌ಬಿಎಲ್ 2004, ದಿನಾಂಕ 21-1-2006 ರಲ್ಲಿನ ಎಲ್ಲಾ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸತಕ್ಕದ್ದು.

4. ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂ. ಗ್ರಾಅಪ. 136 ಪಿಬಿಎಸ್ 2010 ದಿನಾಂಕ 11-06-2010 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎನ್.ಎಸ್. ಪ್ರಸನ್ನ ಕುಮಾರ್,
ನಿರ್ದೇಶಕರು
ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪಿ.ಆರ್. 1680

ಸಮಾಜ ಕಲ್ಯಾಣ ಸಚಿವಾಲಯ

ಸುತ್ತೋಲೆ

ಸಂಖ್ಯೆ: ಸಕಇ 50 ಎಸ್‌ಎಡಿ 2008, ಬೆಂಗಳೂರು ದಿನಾಂಕ 19–06–2010

ವಿಷಯ : ಡಾ: ಚಿದಾನಂದ ದುಂಡಪ್ಪಾ ಸರಿಕಾರ, ಇವರನ್ನು ವಿಶೇಷ ನ್ಯಾಯವಾದಿಯಾಗಿ ನೇಮಿಸುವ ಬಗ್ಗೆ.

ಉಲ್ಲೇಖ : 1) ಸರ್ಕಾರಿ ಆದೇಶ ಸಂಖ್ಯೆ: ಸಕಇ 50 ಎಸ್‌ಎಡಿ 2008. ದಿನಾಂಕ 12–05–2010.

2) ಡಾ: ಚಿದಾನಂದ ದುಂಡಪ್ಪಾ ಸರಿಕಾರ, ಇವರ ಪತ್ರ ದಿನಾಂಕ 10–06–2010.

ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದಿರುವವರ ವಿರುದ್ಧ ರಾಜ್ಯದ ಉಚ್ಚನ್ಯಾಯಾಲಯ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಹೂಡಲಾದ ಕ್ರಿಮಿನಲ್ ಪ್ರಕರಣಗಳಲ್ಲಿ ಸರ್ಕಾರದ ಪರವಾಗಿ ಕಾರ್ಯನಿರ್ವಹಿಸಲು ಡಾ: ಚಿದಾನಂದ ದುಂಡಪ್ಪಾ ಸರಿಕಾರ, ವಕೀಲರು (ನಂ. 272/4, ಚೇತನ್ ಟಾಕೀಸ್ ಹತ್ತಿರ ನಾಗವಾರಪಾಳ್ಯ ಸಿ.ವಿ. ರಾಮನ್ ನಗರ ಬೆಂಗಳೂರು) ಇವರನ್ನು ವಿಶೇಷ ನ್ಯಾಯವಾದಿಯಾಗಿ (Special Counsel) ಉಲ್ಲೇಖ (1) ರಲ್ಲಿ ನಮೂದಿಸಲಾದ ಸರ್ಕಾರಿ ಆದೇಶದಲ್ಲಿ ನೇಮಿಸಲಾಗಿದೆ.

ಡಾ: ಚಿದಾನಂದ ದುಂಡಪ್ಪಾ ಸರಿಕಾರ, ವಕೀಲರು ಇವರು ಮೇಲೆ (2) ರಲ್ಲಿ ಓದಲಾದ ಪತ್ರ ಬರೆಯುತ್ತಾ, ಸುಳ್ಳು ಜಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ವಿವಿಧ ಪ್ರಾಧಿಕಾರ ಹಾಗೂ ನ್ಯಾಯಾಲಯಗಳ ಮುಂದೆ ಹಾಜರಾಗಲು ಅನುಕೂಲವಾಗುವಂತೆ ಇಲಾಖಾ ಮುಖ್ಯಸ್ಥರುಗಳು ಹಾಗೂ ಇತರರಿಗೆ ಸೂಕ್ತ ಸೂಚನೆಗಳನ್ನು ನೀಡುವಂತೆ ಕೋರಿರುತ್ತಾರೆ.

ರಾಜ್ಯದ ಉಚ್ಚನ್ಯಾಯಾಲಯ, ಕರ್ನಾಟಕ ಆಡಳಿತ ನ್ಯಾಯ ಮಂಡಳಿಗಳಲ್ಲದೆ ವಿವಿಧ ಮೇಲ್ಮನವಿ ಪ್ರಾಧಿಕಾರ ಹಾಗೂ ನ್ಯಾಯಧೀಕರಣದಲ್ಲಿ ದಾಖಲಾಗುವ ಸುಳ್ಳು ಜಾತಿ ಪ್ರಮಾಣ ಪತ್ರಗಳಿಗೆ ಸಂಬಂಧಪಟ್ಟ ಮೊಕದ್ದಮೆಗಳಲ್ಲಿ ಸರ್ಕಾರದ ಪರವಾಗಿ ವಾದಿಸಲು ಹಾಗೂ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಧಿನಿಯಮ (1989) ಅಡಿ ಅಂತಹ ಜಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಮೇಲ್ಮನವಿ ಪ್ರಾಧಿಕಾರಿಗಳಾದ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಹಾಗೂ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಂದೆ ಸಲ್ಲಿಸಲಾಗುವ ಸುಳ್ಳು ಜಾತಿ ಪ್ರಮಾಣ ಪತ್ರಗಳ ಮೇಲ್ಮನವಿಗಳಲ್ಲಿ ಸಂಬಂಧಪಟ್ಟ ಜಿಲ್ಲಾ ಜಾತಿ ಪರಿಶೀಲನಾ ಸಮಿತಿ, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ಪರವಾಗಿ ಡಾ: ಚಿದಾನಂದ ದುಂಡಪ್ಪಾ ಸರಿಕಾರ, ವಕೀಲರು ಇವರು ವಾದಿಸಲಿದ್ದು, ಇಲಾಖಾ ಮುಖ್ಯಸ್ಥರುಗಳು ಅವರ ಇಲಾಖೆಗಳ ನೌಕರರಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಇಲಾಖಾ ವತಿಯಿಂದ ನೇಮಿಸಲ್ಪಟ್ಟ ವ್ಯಾಜ್ಯ ನಿರ್ವಹಣಾ ಅಧಿಕಾರಿ ಇವರು ಉಲ್ಲೇಖಿತ ವಿಶೇಷ ನ್ಯಾಯವಾದಿಯವರನ್ನು ಸಂಪರ್ಕಿಸಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯವಾದ ಆಕ್ಷೇಪಣಾ ಹೇಳಿಕೆ ಇತ್ಯಾದಿ ತಯಾರಿಸಿ ಸಲ್ಲಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ.

ಎಸ್. ಲೋಕನಾಥರಾವ್

ಸರ್ಕಾರದ ಅಧೀನ ಕಾರ್ಯದರ್ಶಿ–2

ಸಮಾಜ ಕಲ್ಯಾಣ ಇಲಾಖೆ

ಪಿ.ಆರ್. 1696

INFORMATION TECHNOLOGY, BIO TECHNOLOGY AND SCIENCE AND TECHNOLOGY SECRETARIAT

Sub : Sanction of new scheme – under Semi Conductor Policy - 2010.

Read : Government Order No. ITD 10 PRM 2008 dated 25-02-2010.

Preamble :

Government have announced the Semi Conductor Policy for Karnataka State 2010 vide Government Order dated 25-02-2010 read above with the approval of Cabinet. In the 2010-11 Budget, under the Head of Account 3451-00-090-2-25 Semi Conductor Policy – 059 Other Expenses an amount of Rs. 1000 lakhs have been provided for implementation of the said Policy.

It is considered necessary to accord sanction for the above new scheme. Hence the Order.

GOVERNMENT ORDER NO. : ITD 12 PRM 2010, BANGALORE, DATED : 30-06-2010

In the circumstances explained in the preamble, Government are pleased to accord approval for implementation of the new scheme under Semi Conductor Policy 2010 and to utilize the amount of Rs. 10 crores under the Head of Account "3451-00-090-2-25 Semi Conductor Policy – 059 Other Expenses" as follows:-

1.	Karnataka Fund for Semi conductor excellence	Rs. 100.00 lakhs
2.	KITVEN Fund to assist companies	Rs. 500.00 lakhs

3.	Augmenting Orchid Tech Space in STPI to Characterization Lab	Rs. 200.00 lakhs
4.	To establish Semi conductor focused school under IIITB	Rs. 100.00 lakhs
5.	Various subsidies / incentives / concessions under Industrial Policy 2009-14	Rs. 100.00 lakhs

This order issues with the concurrence of Finance Department vide their U.O. Note No. FD 189 Exp-2/10, dated 05-06-2010 and Planning Department vide their U.O. Note No. PD 3 FRO 2009, dated 27-05-2010.

By Order and in the name of the Governor of Karnataka
M.V. Krishnamurthy
Under Secretary to Government,
Department of Information Technology,
Bio Technology and Science and Technology

P.R. 1697

INFORMATION TECHNOLOGY, BIO TECHNOLOGY AND SCIENCE AND TECHNOLOGY SECRETARIAT

Sub : Sanction for implementation of new scheme under Millennium Bio Technology Policy II.
Read : Government Order No. ITD 58 MDA 2008 dated 18-07-2009.

Preamble :

Government have announced the Millennium Biotech Policy II in the Government Order dated 18-07-2009 read above with the approval of the Cabinet. In the Budget for the year 2010-11 under the Head of Account 3451-00-090-2-24 Bio Technology Policy 059 Other Expenses an amount of Rs. 1000 lakhs have been provided for implementation of the said Policy.

It is considered necessary to accord approval for implementation of the above new scheme. Hence the Order.

GOVERNMENT ORDER NO. : ITD 67 ADM 2010, BANGALORE, DATED : 30-06-2010

In the circumstances explained in the preamble, Government are pleased to accord approval for implementation of the new scheme as per Millennium Biotech Policy II and to utilize the provision of Rs. 10 crores under the Head of Account "3451-00-090-2-24 Bio Technology Policy 059 Other Expenses" as follows:-

1.	Venture Capital Fund [Bio Venture Fund]	Rs. 500.00 lakhs
2.	Corpus Fund	Rs. 200.00 lakhs
3.	Patents, Registration and Product Registration	Rs. 100.00 lakhs
4.	Standardization Certification	Rs. 100.00 lakhs
5.	Other incentives under Biotech Policy II	Rs. 100.00 lakhs

This order issues with the concurrence of Finance Department vide their U.O. Note No. FD 188 Exp-2/10, dated 04-06-2010 and Planning Department vide their U.O. Note No. PD 14 FRO 2010, dated 08-06-2010.

By Order and in the name of the Governor of Karnataka
M.V. Krishnamurthy
Under Secretary to Government,
Department of Information Technology,
Bio Technology and Science and Technology

P.R. 1698

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ವಿಷಯ : ಜೀತವಿಮುಕ್ತರ ಪುನರ್ವಸತಿ ಸಹಾಯಧನ ಯೋಜನೆಯಡಿ ಗದಗ್ ಜಿಲ್ಲೆಯ ಏಳು ಜನ ಜೀತವಿಮುಕ್ತರಿಗೆ 2010–11ನೇ ಸಾಲಿನಲ್ಲಿ ಸಹಾಯಧನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ. 15 ಆರ್‌ಬಿಎಲ್ 2004 ದಿನಾಂಕ 21–01–2006.
2. ಉಪವಿಭಾಗಾಧಿಕಾರಿ ಗದಗ್ ಉಪವಿಭಾಗ, ಗದಗ್ ಇವರ ಪತ್ರ ಸಂಖ್ಯೆ ಆಡಳಿತ ವಹಿ 01/10– 11/32. ದಿನಾಂಕ 03–04–2010.
3. ಗದಗ್ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯ ಪತ್ರ ಸಂಖ್ಯೆ: ಜಿಪಂಗ/ಸಿ3/ಇತರೆ 2010–11 ದಿನಾಂಕ 19–05–2010.

ಪ್ರಸ್ತಾವನೆ :

ಜೀತಕಾರ್ಮಿಕರನ್ನು ಜೀತಪದ್ಧತಿಯಿಂದ ಬಿಡುಗಡೆಗೊಳಿಸಿದ ನಂತರ, ಅವರುಗಳಿಗೆ ಕನಿಷ್ಠ ಆರ್ಥಿಕ ಸವಲತ್ತನ್ನು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಜೀತವಿಮುಕ್ತರ ಪುನರ್ವಸತಿ ಸಹಾಯಧನ ಎಂಬ ಹೊಸ ಯೋಜನೆಯನ್ನು ರೂಪಿಸಿದ್ದು, ದಿನಾಂಕ 21–01–2006 ರಿಂದ ಈ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೆ ತರಲಾಗಿದೆ. ಈ ಯೋಜನೆಯಡಿ ರೂಪಿಸಿರುವ ನಿರ್ದೇಶನದಂತೆ, ದಿನಾಂಕ 21–01–2006ರ ತರುವಾಯ ಜೀತಪದ್ಧತಿಯಿಂದ ಬಿಡುಗಡೆಗೊಳಿಸುವ ರಾಜ್ಯದ ಪ್ರತಿ ಜೀತ ಕಾರ್ಮಿಕ/ಬಾಲ ಜೀತಕಾರ್ಮಿಕರಿಗೆ ಮಾಹೆಯಾನ ರೂ.300.00 ರಂತೆ ಸಹಾಯಧನವನ್ನು ಜೀತಪದ್ಧತಿಯಿಂದ ಬಿಡುಗಡೆಗೊಳಿಸಿದ ದಿನದಿಂದ ಮೊದಲ 24 ತಿಂಗಳುಗಳ ಅವಧಿಗೆ ಪಾವತಿಸಬೇಕಾಗುತ್ತದೆ.

2. ಮೇಲೆ ಓದಲಾದ ಕ್ರ.ಸಂ. (2)ರ ಪತ್ರದಲ್ಲಿ ಗದಗ್ ಜಿಲ್ಲೆಯ, ರೋಣ ತಾಲ್ಲೂಕಿನ ಏಳು ಜನ ಜೀತ ವಿಮುಕ್ತರು ಬೆಂಗಳೂರು (ನಗರ) ಜಿಲ್ಲೆಯ ಆನೇಕಲ್ ತಾಲ್ಲೂಕು, ಕಸಬ ಹೋಬಳಿ, ಮುತ್ತುಗಟ್ಟಿ ಗ್ರಾಮದಲ್ಲಿನ ಎಸ್.ಬಿ.ಐ. ಇಟ್ಟಿಗೆ ಕಾರ್ಖಾನೆಯ ಮಾಲಿಕರಾದ ಶ್ರೀ ಶಶಿಕುಮಾರ್ ಬಿನ್ ವೆಂಕಟಸ್ವಾಮಿ ರೆಡ್ಡಿ ಇವರಡಿ ಒತ್ತೆಯಾಳುಗಾಳಾಗಿರುವುದನ್ನು ಪತ್ತೆ ಹಚ್ಚಿ, ಜೀತದಾಳು ವಿಮೋಚನಾ ಕಾಯಿದೆ 1976ರಡಿ ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸಿಕೊಂಡು, ದಿನಾಂಕ 25–06–2008 ರಂದು ಜೀತಪದ್ಧತಿಯಿಂದ ವಿಮುಕ್ತಿಗೊಳಿಸಿ, ಬೆಂಗಳೂರು ದಕ್ಷಿಣ ಉಪವಿಭಾಗದ ಉಪ ವಿಭಾಗೀಯ ದಂಡಾಧಿಕಾರಿರವರು ಜೀತವಿಮುಕ್ತ ಪ್ರಮಾಣಪತ್ರವನ್ನು ಹೊರಡಿಸಿರುವುದರಿಂದ, ಸದರಿಯವರಿಗೆ ಪುನರ್ ವಸತಿ ಕಲ್ಪಿಸಲು ಗದಗ್ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಯಕ ಅಧಿಕಾರಿಯು ಉಲ್ಲೇಖ (3)ರ ಪತ್ರದಲ್ಲಿ ಕೋರಿರುತ್ತಾರೆ. ಆದ್ದರಿಂದ, ಗದಗ್ ಜಿಲ್ಲೆಯ ಮೇಲ್ಕಂಡ ಏಳು ಜನ ಜೀತದಾಳುಗಳಿಗೆ ಈ ಯೋಜನೆಯಡಿ ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ 2230–01–198–6–01–300 ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ, 2010 ಏಪ್ರಿಲ್ ಮಾಹೆಯಿಂದ 2011 ಮಾರ್ಚಿ ಮಾಹೆಯವರೆಗಿನ ಒಟ್ಟು 12 ತಿಂಗಳ ಅವಧಿಗೆ ಮಾಹೆಯಾನ ರೂ. 300/– ರಂತೆ ಸಹಾಯಧನಕ್ಕಾಗಿ ತಗಲುವ ರೂ. 25,200/– ಗಳ ಅನುದಾನವನ್ನು ಗದಗ್ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ. 1 ಆರ್‌ಬಿಎಲ್ 2010 ಬೆಂಗಳೂರು, ದಿನಾಂಕ : 14–06–2010

ಜೀತವಿಮುಕ್ತರ ಪುನರ್ವಸತಿ ಸಹಾಯಧನ ಯೋಜನೆ ಅಡಿ ಗದಗ್ ಜಿಲ್ಲೆಯ ರೋಣ ತಾಲ್ಲೂಕಿನ ಏಳು ಜನ ಜೀತವಿಮುಕ್ತರಿಗೆ 2010–11ನೇ ಸಾಲಿನ 12 ತಿಂಗಳ (2010 ಏಪ್ರಿಲ್ ಇಂದ 2011ರ ಮಾರ್ಚಿವರೆಗೆ) ಮಾಹೆಯಾನ ರೂ.300.00 ರಂತೆ ಸಹಾಯಧನ ಪಾವತಿಸಲು ಒಟ್ಟು ರೂ. 25,200.00 (ಇಪ್ಪತ್ತೈದು ಸಾವಿರದ ಇನ್ನೂರು ರೂಪಾಯಿಗಳು ಮಾತ್ರ) ಗಳನ್ನು ಗದಗ್ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ. ಮಿಕ್ಕ 12 ತಿಂಗಳ ಅವಧಿಗೆ ಒಟ್ಟು ರೂ. 25,200/– ಗಳ ಸಹಾಯ ಧನವನ್ನು ಏಳು ಜನ ಜೀವವಿಮುಕ್ತರಿಗೆ ಮುಂದಿನ ಸಾಲಿನಲ್ಲಿ ಬಿಡುಗಡೆಗೊಳಿಸಲಾಗುವುದು.

2. ಈ ಕಾರ್ಯಕ್ಕಾಗಿ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2230–ಕಾರ್ಮಿಕ ಮತ್ತು ಉದ್ಯೋಗ–01–ಕಾರ್ಮಿಕ–198–ಗ್ರಾಮ ಪಂಚಾಯತಿಗಳಿಗೆ ಸಹಾಯ–6–ಗ್ರಾಮ ಪಂಚಾಯತಿಗಳು–ಕೇಂದ್ರ ಪುರಸ್ಕೃತ ಯೋಜನೆ (ಜೀತದಾಳುಗಳ ಪುನರ್ವಸತಿ)–01–ಬ್ಲಾಕ್ ಅನುದಾನ–300–ಒಟ್ಟು ಜಿಲ್ಲಾ ಪಂಚಾಯತಿ (ಯೋಜನೆ) ಗೆ ಜಮಾ ಮಾಡತಕ್ಕದ್ದು.

3. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ. 15 ಆರ್‌ಬಿಎಲ್. 2004 ದಿನಾಂಕ 21–01–2006 ರಲ್ಲಿನ ಎಲ್ಲಾ ಮಾರ್ಗ ಸೂಚಿಗಳನ್ನು ತಪ್ಪದೇ ಪಾಲಿಸತಕ್ಕದ್ದು.

4. ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ. ಗ್ರಾಅಪ. 136 ಪಿಬಿಎಸ್. 2010 ದಿನಾಂಕ 11–06–2010 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಎನ್.ಎಸ್. ಪ್ರಸನ್ನಕುಮಾರ್

ನಿರ್ದೇಶಕರು

ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ

ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪಿ. ಆರ್. 1699

ಇಂಧನ ಸಚಿವಾಲಯ

ವಿಷಯ : ಮೆ: ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಗೆ ಕಾಲಾವಕಾಶ ವಿಸ್ತರಣೆ ಮಾಡುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಡಿಇ 28 ಎನ್‌ಸಿಇ 1996 (15) ದಿನಾಂಕ 24-07-1996.
2. ಸರ್ಕಾರಿ ಆದೇಶ ಸಂಖ್ಯೆ: ಡಿಇ 46 ಎನ್‌ಸಿಇ 1997 ದಿನಾಂಕ 24-06-1999.
3. ಸರ್ಕಾರಿ ಆದೇಶ ಸಂಖ್ಯೆ: ಡಿಇ 3 ಎನ್‌ಸಿಇ 2002 ದಿನಾಂಕ 01-04-2002.
4. ಸರ್ಕಾರಿ ಆದೇಶ ಸಂಖ್ಯೆ: ಡಿಇ 248 ಎನ್‌ಸಿಇ 2004 ದಿನಾಂಕ 26-08-2004.
5. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿಎಲ್/06-2008/1731 ದಿನಾಂಕ 1/17-10-2008.
6. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿಎಲ್/06/ಎಸ್‌ಹೆಚ್‌ಪಿ/08/2029 ದಿನಾಂಕ 2/03-12-2008.
7. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 520 ಎನ್‌ಸಿಇ 2008 ದಿನಾಂಕ 27-12-2008.
8. ಮೆ: ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರ ಪತ್ರ ದಿನಾಂಕ 05-01-2009.
9. ಸರ್ಕಾರದ ಪತ್ರ ಸಂಖ್ಯೆ: ಇಎನ್ 520 ಎನ್‌ಸಿಇ 2008 ದಿನಾಂಕ 01-04-2009.
10. ಮೆ: ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರ ಪತ್ರ ದಿನಾಂಕ 12-01-2010 ಮತ್ತು 22-01-2010.
11. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಕಟ್ಟೆಪುರ ಕಿ.ಜ.ವಿ./2010/616 ದಿನಾಂಕ 26-02-2010/ 04-03-2010.
12. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ 17-04-2010.
13. ದಿನಾಂಕ 19-04-2010 ರಂದು ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
14. ಸರ್ಕಾರದ ಪತ್ರ ಸಂಖೆ ಇಎನ್ 520 ಎನ್‌ಸಿಇ 2008 ದಿನಾಂಕ 03-05-2010.
15. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಕಟ್ಟೆಪುರ ಕಿ.ಜ.ವಿ/2010/1423 ದಿನಾಂಕ 26-05-2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ: ಪೇಪರ್ ಪ್ಯಾಕಿಂಗ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಕಟ್ಟೆಪುರದಲ್ಲಿ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಮೆ: ಪೇಪರ್ ಪ್ಯಾಕಿಂಗ್ ಪ್ರೈವೇಟ್ ಲಿಮಿಟೆಡ್ ಎಂಬ ಕಂಪನಿಯ ಹೆಸರನ್ನು ಮೆ: ಬ್ರೈಟ್ ವಿದ್ಯುತ್ ಕಂಪನಿ ಪ್ರೈವೇಟ್ ಲಿಮಿಟೆಡ್ ಎಂದು ಬದಲಾಯಿಸಿ 5.00 ಸಾಮಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ಮೆ: ಬ್ರೈಟ್ ವಿದ್ಯುತ್ ಕಂಪನಿ ಪ್ರೈವೇಟ್ ಲಿಮಿಟೆಡ್ ಎಂಬ ಕಂಪನಿಯ ಹೆಸರನ್ನು ಮೆ: ಕಾವೇರಿ ಹೈಡ್ರೊ ಎನರ್ಜಿ ಲಿಮಿಟೆಡ್ ಎಂದು ಬದಲಾಯಿಸಿ 5.00 ಸಾಮಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ಮೇಲ್ಕಂಡ ಯೋಜನೆಯನ್ನು ಮೆ: ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ರವರಿಗೆ ವರ್ಗಾಯಿಸಿ ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಇವರಿಗೆ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಟ್ಟೆಪುರ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನ ಮಾಡಲು ಮುಂದಿನ 3 ವರ್ಷಗಳಿಗೆ ಕಾಲಾವಕಾಶ ವಿಸ್ತರಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ಸಾಯಿ ನಿರೀಹಾ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆ

ಹಂಚಿಕೆಯಾಗಿ 12 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಗಣನೀಯ ಪ್ರಗತಿ ಸಾಧಿಸಿರುವುದಿಲ್ಲವೆಂದು ಯೋಜನೆಯ ಹಂಚಿಕೆ ಆದೇಶವನ್ನು ರದ್ದುಪಡಿಸುವಂತೆ ಕೋರಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (7)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯು ಹಂಚಿಕೆಯಾಗಿ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಕ್ರಮ ಕೈಗೊಳ್ಳದಿರುವುದರಿಂದ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 7 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (8)ರ ಪತ್ರದಲ್ಲಿ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರು ಕಾರಣ ಕೇಳುವ ನೋಟೀಸಿಗೆ ಉತ್ತರ ನೀಡುತ್ತಾ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಸಾಧಿಸಿದ ಪ್ರಗತಿಯ ವಿವರಗಳನ್ನು ನೀಡಿ, ಯೋಜನೆಯ ಅನುಷ್ಠಾನಕ್ಕೆ ಕಾಲಾವಕಾಶ ವಿಸ್ತರಣೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (9)ರ ಪತ್ರದಲ್ಲಿ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರು ನೀಡಿರುವ ಉತ್ತರವನ್ನು ಕ್ರೆಡಲ್‌ನ ವ್ಯವಸ್ಥಾಪಕ ನಿರ್ದೇಶಕರಿಗೆ ಕಳುಹಿಸಿ ಅಭಿಪ್ರಾಯದೊಂದಿಗೆ ವರದಿಯನ್ನು ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (10)ರ ಪತ್ರಗಳಲ್ಲಿ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರು ಸಾಧಿಸಿರುವ ಪ್ರಗತಿಯ ವಿವರಗಳನ್ನು ನೀಡಿ ಕಾಲಾವಕಾಶವನ್ನು ವಿಸ್ತರಿಸುವಂತೆ ಮತ್ತೊಮ್ಮೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (11)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರು ಯೋಜನೆ ಅನುಷ್ಠಾನದ ನಿಟ್ಟಿನಲ್ಲಿ ವಿವಿಧ ಇಲಾಖೆಗಳಿಂದ ಅನುಮೋದನೆ ಪಡೆದಿರುವುದರಿಂದ ಕಾಲಾವಕಾಶವನ್ನು ದಿನಾಂಕ 01–10–2009 ರಿಂದ ಮುಂದಿನ 2 ವರ್ಷಗಳ ಅವಧಿಗೆ ವಿಸ್ತರಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (12)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನಲೆಯಲ್ಲಿ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿದ್ದರು.

ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ (13) ರಲ್ಲಿನ ದಿನಾಂಕ 19–04–2010 ರಂದು ನಡೆದ "review meeting of the RE Projects (Wind/Small Hydro) for restoration/time extension" ರ ಸಭೆಯಲ್ಲಿ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ರವರ ಕಾಲಾವಕಾಶ ವಿಸ್ತರಣೆ ಕುರಿತ ಪ್ರಸ್ತಾವನೆ ಬಗ್ಗೆ ಆಗಿರುವ ನಿರ್ಣಯದ ಉದ್ಧೃತ ಭಾಗವು ಈ ಕೆಳಕಂಡಂತಿರುತ್ತದೆ :–

"3. M/s Sai Nireeha Power Projects (P) Limited, 5 MW capacity, Kattepura MHS, across Kattepura Anicut, Cauvery River, near Kattepura Village, Arkalgodu Taluk, Hassan District.

The proposal of M/s Sai Nireeha Power Projects (P) Limited, for time extension was discussed in the meeting based on the facts presented by the developer. The members present in the meeting observed that there has been an inordinate delay in implementation of the project by the developer. However, based on all the statutory clearances obtained and progress made at the project location, the members decided to permit the time extension for implementation and commissioning the project. During the course of discussion, MD, KREDL brought to the notice of the members that the proposed project location by the developer is surrounded by elephant habitation and the area needs to be verified and accordingly it was decided that KREDL to submit a report to the Government by visiting the spot and examining with reference to the elephant habitation in the area, so that a final decision would be taken to fix up the time extension period for commissioning of the project".

ಸಭೆಯ ನಿರ್ಣಯದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (14)ರ ಪತ್ರದಲ್ಲಿ ಕ್ರೆಡಲ್‌ನ ವ್ಯವಸ್ಥಾಪಕ ನಿರ್ದೇಶಕರನ್ನು ಸದರಿ ಯೋಜನೆಯ ಸ್ಥಳ ಪರಿವೀಕ್ಷಣೆ ಮಾಡಿ ವರದಿಯನ್ನು ನೀಡುವಂತೆ ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (15)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಈ ವಿಷಯಕ್ಕೆ ಸಂಬಂಧಪಟ್ಟಂತೆ ಸದರಿ ಅಭಿವೃದ್ಧಿದಾರರೊಂದಿಗೆ ಚರ್ಚಿಸಲಾಗಿದೆ. ಇದಕ್ಕೆ ಸಂಬಂಧಪಟ್ಟ ಟೋಪೊಶೀಟ್‌ಗಳನ್ನು ಸಹ ಕೂಲಂಕುಷವಾಗಿ ಪರಿಶೀಲಿಸಲಾಗಿದೆ. ಈ ಪರಿಶೀಲನೆಯಲ್ಲಿ ಕಂಡುಬರುವ

ಅಂಶವೆಂದರೆ ಈ ಯೋಜನೆಯು ಕಾವೇರಿ ನದಿಯ ಕಟ್ಟೆಪುರ ಅಣೆಕಟ್ಟೆಗೆ ಅಡ್ಡಲಾಗಿ ಕಟ್ಟೆಪುರ ಗ್ರಾಮ, ಅರಕಲಗೋಡು ತಾಲ್ಲೂಕು, ಹಾಸನ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿದ್ದು, ಈ ಯೋಜನೆಯ ಪ್ರದೇಶದಲ್ಲಿ ಯಾವುದೇ ಅರಣ್ಯ ಭೂಮಿ ಇರುವುದಿಲ್ಲ ಹಾಗೂ ಈ ಪ್ರದೇಶದಲ್ಲಿ ಆನೆಗಳ ವಾಸ ಸ್ಥಾನವು ಇರುವುದಿಲ್ಲ ಎಂದು ವರದಿ ನೀಡಿ, ಕೊಡಗು ಜಿಲ್ಲೆಗೆ ಸೇರಿದ ಕಟ್ಟೆಪುರದಲ್ಲಿ ಸಂರಕ್ಷಿತ ಅರಣ್ಯವಿದ್ದು, ಈ ಯೋಜನಾ ಪ್ರದೇಶದ ಕಟ್ಟೆಪುರಕ್ಕೂ ಕೊಡಗು ಜಿಲ್ಲಾಯ ಸಂರಕ್ಷಿತ ಅರಣ್ಯವನ್ನು ಹೊಂದಿರುವ ಕಟ್ಟೆಪುರಕ್ಕೂ ಯಾವುದೇ ಸಂಬಂಧವಿರುವುದಿಲ್ಲವೆಂದು ತಿಳಿಸುತ್ತ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆ ಅನುಷ್ಠಾನಕ್ಕಾಗಿ ಕಾಲಾವಕಾಶವನ್ನು ದಿನಾಂಕ 01-10-2009 ರಿಂದ ಮುಂದಿನ 2 ವರ್ಷಗಳ ಅವಧಿಗೆ ವಿಸ್ತರಿಸಲು ಶಿಫಾರಸ್ಸು ಮಾಡಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ರವರು ಆನೆಗಳ ಹಾವಳಿ ಇರುವ ಕೊಡಗು ಜಿಲ್ಲೆಯ ಕಟ್ಟೆಪುರಕ್ಕೂ ಪ್ರಸ್ತುತ ಪ್ರಸ್ತಾವನೆಯ ಹಾಸನ ಜಿಲ್ಲೆಯ ಕಟ್ಟೆಪುರಕ್ಕೂ ಯಾವುದೇ ಸಂಬಂಧವಿರುವುದಿಲ್ಲವೆಂದು ಸ್ಪಷ್ಟಪಡಿಸಿ ಅವಧಿ ವಿಸ್ತರಣೆಗೆ ಶಿಫಾರಸ್ಸು ಮಾಡಿರುವುದರಿಂದ ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ರವರಿಗೆ ಯೋಜನೆಯ ಅನುಷ್ಠಾನಕ್ಕಾಗಿ ಕಾಲಾವಧಿ ವಿಸ್ತರಿಸುವ ಕುರಿತು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರಿ ಆದೇಶ ಸಂಖ್ಯೆ : ಇಎನ್ 520 ಎನ್‌ಸಿಇ 2008 ಬೆಂಗಳೂರು, ದಿನಾಂಕ : 29-06-2010

ಮೆ: ಸಾಯಿ ನಿರೀಹಾ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಕಟ್ಟೆಪುರ ಎಂಬಲ್ಲಿ ಹಂಚಿಕೆಯಾಗಿದ್ದ 5.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಲಾವಕಾಶವನ್ನು ದಿನಾಂಕ 01-10-2009 ರಿಂದ ಮುಂದಿನ 2 ವರ್ಷಗಳ ಅವಧಿಗೆ ವಿಸ್ತರಿಸಲಾಗಿದೆ.

ಈ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಓದಲಾದ (1)ರ ಹಂಚಿಕೆ ಅದೇಶದ ಇತರ ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಜೆ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ. ಆರ್. 1700 ಇಂದನ ಇಲಾಖೆ

ಸಹಕಾರ ಸಚಿವಾಲಯ

ವಿಷಯ : ರಾಯಚೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ. ಇದರ ಆಡಳಿತ ಸಮಿತಿ ಚುನಾವಣೆಯನ್ನು ಮುಂದೂಡುವ ಬಗ್ಗೆ.

ಓದಲಾಗಿದೆ :
1) ಸರ್ಕಾರದ ಆದೇಶ ಸಂಖ್ಯೆ : ಸಿಒ 46 ಸಿಎಲ್ಎಂ 2010 ದಿನಾಂಕ : 10-03-2010.
2) ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ : ಸಿಆರ್‌ಡಿ. 16. ಕೆಎಂಸಿ-1/2008-09 ದಿನಾಂಕ : 21-06-2010.
3) ನಬಾರ್ಡ್‌ರವರ ಪತ್ರ ಸಂ. ಎನ್‌ಬಿ.ಕೆ.ಎ.ಐಡಿಡಿ 929 ಎಸ್.ಟಿ.82/2010-11 ದಿನಾಂಕ : 23-06-2010.

ಪ್ರಸ್ತಾವನೆ :

ರಾಯಚೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ. ಇದರ ಆಡಳಿತ ಸಮಿತಿಗೆ ದಿನಾಂಕ 10-04-2010ರೊಳಗೆ ನಡೆಸಬೇಕಾಗಿದ್ದ ಚುನಾವಣೆಯನ್ನು ದಿನಾಂಕ : 31-07-2010ರೊಳಗೆ ನಡೆಸಲು ಮೇಲೆ ಓದಲಾದ (1)ರ ಆದೇಶದಲ್ಲಿ ಅನುಮತಿ ನೀಡಲಾಗಿತ್ತು.

ಸರ್ಕಾರವು ದಿನಾಂಕ : 1-03-2010ರ ಆದೇಶದಲ್ಲಿ, ರಾಯಚೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಆಡಳಿತ ಸಮಿತಿಗೆ ನಡೆಯಬೇಕಾಗಿರುವ ಚುನಾವಣೆಯನ್ನು ದಿನಾಂಕ : 31-07-2010ರವರೆಗೆ ಮುಂದೂಡಿರುತ್ತದೆಂದೂ, ಪ್ರಸ್ತುತ ಅವಧಿಯಲ್ಲಿ ರಾಯಚೂರು ಡಿಸಿಸಿ ಬ್ಯಾಂಕಿನ ವಿಶೇಷ ಲೆಕ್ಕಪರಿಶೋಧನೆ ಪೂರ್ಣಗೊಂಡಿದ್ದು, ಇದರ ಅಂತಿಮ ಪರಿಶೀಲನೆಯನ್ನು ನಬಾರ್ಡ್ ಮಾಡಿದ್ದು, ನಬಾರ್ಡ್‌ನ ತಾಂತ್ರಿಕ ಒಪ್ಪಿಗೆಗಾಗಿ ಆರ್‌ಬಿಐಗೆ ಪ್ರಸ್ತಾವನೆ ಸಲ್ಲಿಸುವ ಹಂತದಲ್ಲಿರುವುದು ತಿಳಿದು ಬಂದಿರುತ್ತದೆಂದೂ, ಆರ್‌ಬಿಐನ ಅನುಮತಿ ಪಡೆದು ವಿಭಜನೆ ಮಾಡಬೇಕಾದರೆ ಸದ್ಯದ ಆಡಳಿತ ಮಂಡಳಿಯ ವಿಸ್ತೃತ ಅವಧಿ ದಿನಾಂಕ : 31-07-2010ರೊಳಗಾಗಿ ಪೂರ್ಣಗೊಳಿಸುವುದು ಅಸಾಧ್ಯವಾಗಿರುತ್ತದೆಂದೂ, ಈ ವಿಷಯವಾಗಿ ರಾಯಚೂರು ಡಿಸಿಸಿ ಬ್ಯಾಂಕಿನ ಆಡಳಿತ ಸಮಿತಿಯು ದಿನಾಂಕ 29-05-2010ರಂದು ಸಭೆ ಸೇರಿ, ರಾಯಚೂರು ಡಿಸಿಸಿ ಬ್ಯಾಂಕಿನ ವಿಭಜನೆಗೆ ಅನುಕೂಲತೆ ಕಲ್ಪಿಸಿಕೊಡುವ ದೃಷ್ಟಿಯಿಂದ ಆಡಳಿತ ಮಂಡಳಿ ಚುನಾವಣೆಯನ್ನು ನಡೆಸಲು ಸರ್ಕಾರವು ನಿಗದಿಪಡಿಸಿರುವ ಅವದಿಯನ್ನು ದಿನಾಂಕ 31-07-2010ರ ಬದಲಾಗಿ ದಿನಾಂಕ 31-10-2010ರವರೆಗೆ ವಿಸ್ತರಿಸಲು ಸರ್ಕಾರವನ್ನು ಕೋರುವ ಬಗ್ಗೆ ತೀರ್ಮಾನ ತೆಗೆದುಕೊಂಡಿರುತ್ತದೆಂದು ಸಹಕಾರ ಸಂಘಗಳ ನಿಬಂಧಕರು ಮೇಲೆ ಓದಲಾದ (2) ರ ಪತ್ರದಲ್ಲಿ ತಿಳಿಸುತ್ತಾ, ಆರ್‌ಬಿಐ/ನಬಾರ್ಡ್ ರವರ ಅನುಮತಿ ಪಡೆದು, ರಾಯಚೂರು ಡಿಸಿಸಿ ಬ್ಯಾಂಕಿನ

ಆಡಳಿತ ಮಂಡಳಿ ಚುನಾವಣೆಯನ್ನು ದಿನಾಂಕ 31–10–2010ರವರೆಗೆ ವಿಸ್ತರಿಸಬೇಕೆಂದು ಪ್ರಸ್ತಾವನೆಯನ್ನು ಶಿಫಾರಸು ಮಾಡಿರುತ್ತಾರೆ.

ರಾಯಚೂರು ಡಿಸಿಸಿ ಬ್ಯಾಂಕಿನ ಆಡಳಿತ ಸಮಿತಿ ಚುನಾವಣೆಯನ್ನು ದಿನಾಂಕ : 31–10–2010ರೊಳಗೆ ಜರುಗಿಸುವ ಅವಧಿ ವಿಸ್ತರಣೆಗೆ ನಬಾರ್ಡ್ ತನ್ನ ನಿರಾಕ್ಷೇಪಣೆಯನ್ನು (NOC) ಮೇಲೆ ಓದಲಾದ (3)ರ ಪತ್ರದಲ್ಲಿ ನೀಡಿರುತ್ತದೆ.

ಮೇಲ್ಕಂಡ ಪ್ರಸ್ತಾವವನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಸಿಒ 46 ಸಿಎಲ್ಎಂ 2010, ಬೆಂಗಳೂರು, ದಿನಾಂಕ : 28ನೇ ಜೂನ್, 2010

ಮೇಲಿನ ಪರಿಸ್ಥಿತಿಯಲ್ಲಿ **ರಾಯಚೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ. ರಾಯಚೂರು** ಇದಕ್ಕೆ ಅನ್ವಯವಾಗುವಂತೆ ಕರ್ನಾಟಕ ಸರ್ಕಾರವು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 39ಎ(4) ಮತ್ತು 121ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸದರಿ ಅಧಿನಿಯಮದ ಪ್ರಕರಣ 28ಎ(4), 28ಎ(5), 28ಬಿ(2), 29 ಎಫ್ (4) ಮತ್ತು 39ಎ(2) ಅನ್ನು ಮಾರ್ಪಾಟು ಮಾಡಿ ಸದರಿ ಬ್ಯಾಂಕಿನ ಆಡಳಿತ ಸಮಿತಿಗೆ ಚುನಾವಣೆಯನ್ನು ದಿನಾಂಕ : 31–10–2010 ರೊಳಗೆ ನಡೆಸುವಂತೆ ಆದೇಶಿಸುತ್ತದೆ.

ಸೂಚನೆ : ಪ್ರಕರಣ 28ಎ(4), 28ಎ(5), 28ಬಿ(2), 29ಎಫ್(4) ಮತ್ತು 39ಎ(2)ಕ್ಕೆ ಮಾಡಿದ ಈ ಮಾರ್ಪಾಡು ದಿನಾಂಕ : 31–10–2010ರವರೆಗೆ ಜಾರಿಯಲ್ಲಿರತಕ್ಕದ್ದು ಈ ಅವಧಿಯು ಮುಗಿದ ನಂತರ ಈ ಆದೇಶದ ಮಾರ್ಪಾಡಿಗೆ ಮೊದಲು ಜಾರಿಯಲ್ಲಿದ್ದಂತೆ ಸದರಿ ಪ್ರಕರಣಗಳ ಉಪಬಂಧಗಳು ಪುನಃ ಜಾರಿಗೆ ಬರತಕ್ಕದ್ದು. ಈ ಆದೇಶದ ಮೂಲಕ ಮಾರ್ಪಾಡು ಮಾಡಿದಂತೆ ಸದರಿ ಪ್ರಕರಣದ ಹಿಂದಿನ ಕಾರ್ಯಾಚರಣೆ ಮೇಲೆ ಯಾವುದೇ ಪರಿಣಾಮ ಉಂಟುಮಾಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಆರ್.ಎಸ್. ನೂಲಿ

ವಿಶೇಷ ಕರ್ತವ್ಯಾಧಿಕಾರಿ ಹಾಗೂ

ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,

ಸಹಕಾರ ಇಲಾಖೆ

ಪಿ.ಆರ್. 1701

ಇಂಧನ ಸಚಿವಾಲಯ

ವಿಷಯ : ಮೆ: ಇಸ್ರಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 57 ಎನ್‌ಸಿಇ 2004 ದಿನಾಂಕ : 8–03–2004
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ : 17–04–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 140 ಎನ್‌ಸಿಇ 2010 ದಿನಾಂಕ : 26–04–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ: ಇಸ್ರಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಶ್ರೀ ರಾಮದೇವರಕಟ್ಟೆ ಬಲದಂಡೆ ಕಾಲುವೆಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನಲೆಯಲ್ಲಿ ಮೆ. ಇಸ್ರಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ: ಇಸ್ರಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಹಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟೀಸು “No such firm, not known, no such addressee, returned” ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ. ಇಸ್ರಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 6 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಆದೇಶ ಸಂಖ್ಯೆ : ಇಎನ್ 140 ಎನ್‌ಸಿಇ 2010 ಬೆಂಗಳೂರು, ದಿನಾಂಕ : 23ನೇ ಜೂನ್, 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಅದೇಶ ಸಂಖ್ಯೆ : ಇಂಇ 57 ಎನ್‌ಸಿಇ 2004 ದಿನಾಂಕ : 8–03–2004ರಲ್ಲಿ ಮೆ. ಇಸ್ರಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಶ್ರೀ ರಾಮದೇವರಕಟ್ಟೆ ಬಲದಂಡೆ ಕಾಲುವೆಗೆ ಅಡ್ಡಲಾಗಿ ಹಂಚಿಕೆಯಾಗಿದ್ದ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಅದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜಿ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 1702

ಇಂಧನ ಸಚಿವಾಲಯ

ವಿಷಯ : ಮೆ: ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 105 ಎನ್‌ಸಿಇ 2004 ದಿನಾಂಕ : 13–05–2004
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ : 17–04–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 178 ಎನ್‌ಸಿಇ 2010 ದಿನಾಂಕ : 26–04–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ. ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಚಿಕ್ಕಮಗಳೂರು ತಾಲ್ಲೂಕಿನ ಹರಸನಗಿರಿ ಗ್ರಾಮದ ಬಳಿ ಭದ್ರಾ ನದಿಗೆ (by utilising total water flowing in Bhadra river with about 2 km intake and 2 km of tailrace canal) ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನಲೆಯಲ್ಲಿ ಮೆ: ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ: ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟೀಸು "Refused, Returned to sender" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ: ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 6 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಆದೇಶ ಸಂಖ್ಯೆ : ಇಎನ್ 178 ಎನ್‌ಸಿಇ 2010 ಬೆಂಗಳೂರು, ದಿನಾಂಕ : 23ನೇ ಜೂನ್, 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಅದೇಶ ಸಂಖ್ಯೆ : ಇಎನ್ 105 ಎನ್‌ಸಿಇ 2004 ದಿನಾಂಕ : 13–05–2004ರಲ್ಲಿ ಮೆ: ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ

ಚಿಕ್ಕಮಗಳೂರು ತಾಲ್ಲೂಕಿನ ಹರಸನಗಿರಿ ಗ್ರಾಮದ ಬಳಿ ಭದ್ರಾ ನದಿಗೆ (by utilising total water flowing in Bhadra river with about 2 km intake and 2 km of tailrace canal) ಅಡ್ಡಲಾಗಿ ಹಂಚಿಕೆಯಾಗಿದ್ದ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಅದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜಿ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 1703

ಇಂಧನ ಸಚಿವಾಲಯ

ವಿಷಯ : ಮೆ: ಶ್ರೀ ನಿರ್ಮಲ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 4.5 ಮೆಗಾ ವ್ಯಾಟ್ ಸಾಮರ್ಥ್ಯದ ಸಿರಗುಪ್ಪ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 29 ಎನ್‌ಸಿಇ 2002 ದಿನಾಂಕ : 13–06–2002
2. ತಿದ್ದುಪಡಿ ಆದೇಶ ಸಂಖ್ಯೆ : ಇಂಇ 88 ಎನ್‌ಸಿಇ 2005 ದಿನಾಂಕ : 28–03–2005
3. ಸರ್ಕಾರಿ ಆದೇಶ ಸಂಖ್ಯೆ : ಇಂಇ 107 ಎನ್‌ಸಿಇ 2005 ದಿನಾಂಕ : 15–04–2005
4. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ : 17–04–2010.
5. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 149 ಎನ್‌ಸಿಇ 2010 ದಿನಾಂಕ : 26–04–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ. ಎಸ್.ಎಲ್.ಎಸ್. ಪವರ್ ಇಂಡಸ್ಟ್ರೀಸ್ ಲಿಮಿಟೆಡ್ ಇವರಿಗೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ಗ್ರಾಮದಲ್ಲಿ ವಿಜಯನಗರ ಅಣೆಕಟ್ಟಿನ ಕೆಳ ತೊರೆಯಲ್ಲಿ 1.5 ಮೆಗಾ ವ್ಯಾಟ್ ಸಾಮರ್ಥ್ಯದ ಸಿರುಗುಪ್ಪ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ತಿದ್ದುಪಡಿ ಅದೇಶದಲ್ಲಿ ಕಂಪನಿಯ ಹೆಸರನ್ನು ಮೆ: ಎಸ್.ಎಲ್.ಎಸ್. ಪವರ್ ಇಂಡಸ್ಟ್ರೀಸ್ ಲಿಮಿಟೆಡ್‌ನಿಂದ ಮೆ. ಶ್ರೀ ನಿರ್ಮಲ ಪವರ್ ಪ್ರೈವೇಟ್ ಲಿಮಿಟೆಡ್ ಎಂದು ಬದಲಾಯಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ಹಂಚಿಕೆಯಾಗಿರುವ ಯೋಜನೆಯ ಸಾಮರ್ಥ್ಯವನ್ನು 1.5 ಮೆಗಾ ವ್ಯಾಟ್‌ನಿಂದ 4.5 ಮೆಗಾ ವ್ಯಾಟ್‌ಗೆ ಹೆಚ್ಚಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನಲೆಯಲ್ಲಿ ಮೆ: ಶ್ರೀ ನಿರ್ಮಲ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ: ಶ್ರೀ ನಿರ್ಮಲ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟೀಸು "Left, R/sender" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ: ಶ್ರೀ ನಿರ್ಮಲ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 5 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಆದೇಶ ಸಂಖ್ಯೆ : ಇಎನ್ 149 ಎನ್‌ಸಿಇ 2010 ಬೆಂಗಳೂರು, ದಿನಾಂಕ : 23ನೇ ಜೂನ್, 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಅದೇಶ ಸಂಖ್ಯೆ : ಇಂಇ 29 ಎನ್‌ಸಿಇ 2002 ದಿನಾಂಕ : 13–06–2002 ತಿದ್ದುಪಡಿ ಆದೇಶ ಸಂಖ್ಯೆ : ಇಂಇ 88 ಎನ್‌ಸಿಇ 2005 ದಿನಾಂಕ : 28–03–2005 ಮತ್ತು ಸರ್ಕಾರಿ ಆದೇಶ ಸಂಖ್ಯೆ : ಇಂಇ 107 ಎನ್‌ಸಿಇ 2005 ದಿನಾಂಕ : 15–04–2005ರಲ್ಲಿ ಮೆ: ಶ್ರೀ ನಿರ್ಮಲ ಪವರ್

ಪ್ರೈವೇಟ್ ಲಿಮಿಟೆಡ್ ಇವರಿಗೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ಗ್ರಾಮದಲ್ಲಿ ವಿಜಯನಗರ ಅಣೆಕಟ್ಟಿನ ಕೆಳ ತೊರೆಯಲ್ಲಿ 1.5 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಅದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜಿ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 1704

ಇಂಧನ ಸಚಿವಾಲಯ

ವಿಷಯ : ಮೆ. ವೆನ್ನಾಯಿ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 3.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 288 ಎನ್‌ಸಿಇ 2004 ದಿನಾಂಕ : 20–12–2004
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ : 17–04–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 188 ಎನ್‌ಸಿಇ 2010 ದಿನಾಂಕ : 26–04–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ: ವೆನ್ನಾಯಿ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲ್ಲೂಕಿನ ನನ್ನೀರು ಹಳ್ಳಕ್ಕೆ (streamlet to river Sharavathi) ಅಡ್ಡಲಾಗಿ 3.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನಲೆಯಲ್ಲಿ ಮೆ: ವೆನ್ನಾಯಿ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ: ವೆನ್ನಾಯಿ ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟೀಸು "Door lock, intimation delivered, not claimed" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ: ವೆನ್ನಾಯಿ ಪವರ್ ಪ್ರಾಜೆಕ್ಟ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 6 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಆದೇಶ ಸಂಖ್ಯೆ : ಇಎನ್ 188 ಎನ್‌ಸಿಇ 2010 ಬೆಂಗಳೂರು, ದಿನಾಂಕ : 23ನೇ ಜೂನ್, 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಅದೇಶ ಸಂಖ್ಯೆ ಇಎನ್ 288 ಎನ್‌ಸಿಇ 2004 ದಿನಾಂಕ : 20–12–2004ರಲ್ಲಿ ಮೆ: ವೆನ್ನಾಯಿ ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲ್ಲೂಕಿನ ನನ್ನೀರು ಹಳ್ಳಕ್ಕೆ (streamlet to river Sharavathi) ಅಡ್ಡಲಾಗಿ ಹಂಚಿಕೆಯಾಗಿದ್ದ 3.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಅದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಜಿ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಪಿ.ಆರ್. 1705

ಶಿಕ್ಷಣ ಸಚಿವಾಲಯ

ವಿಷಯ : ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರಂಥಾಲಯಗಳಿಗಾಗಿ ಖರೀದಿಸುವ ಪುಸ್ತಕಗಳ ಬೆಲೆ ಪರಿಷ್ಕರಣೆ ಬಗ್ಗೆ.

ಓದಲಾಗಿದೆ : 1. ದಿನಾಂಕ : 7–2–2005 ರ ಸರ್ಕಾರದ ಆದೇಶ ಸಂಖ್ಯೆ : ಇಡಿ 1 ಎಲ್‌ಬಿಪಿ 2004,

2. ದಿನಾಂಕ : 27–11–2006ರ ಸರ್ಕಾರದ ಆದೇಶ ಸಂಖ್ಯೆ : ಇಡಿ 170 ಎಲ್‌ಐಬಿ 2006.
3. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಇವರ ಏಕ ಕಡತ ಸಂಖ್ಯೆ : ಸಾಗ್ರಂಇ : ನಿಕ : ಪುಬೆನಿ.16/2009–10, ದಿನಾಂಕ 6–8–2009.
4. ದಿನಾಂಕ : 9–11–2009 ರಂದು ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಸರ್ಕಾರದ ದಿನಾಂಕ : 7–2–2005ರ ಆದೇಶದನ್ವಯ, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರಂಥಾಲಯಗಳಿಗಾಗಿ ಪುಸ್ತಕ ಆಯ್ಕೆ ಮತ್ತು ಖರೀದಿಗೆ ಸಂಬಂಧಿಸಿದ ವ್ಯಾಪಕವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಮೇಲೆ (2)ರಲ್ಲಿ ಓದಲಾದ ದಿನಾಂಕ : 27–11–2006ರ ಆದೇಶದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಖರೀದಿಸುವ ಪುಸ್ತಕಗಳಿಗೆ ಬೆಲೆ ನಿಗದಿಪಡಿಸಿ ಆದೇಶಿಸಲಾಗಿದೆ. ಸದರಿ ಬೆಲೆಯನ್ನು ನಿಗಧಿಪಡಿಸಿ ಈಗಾಗಲೇ 3 ವರ್ಷಗಳು ಕಳೆದಿದ್ದು, ಈ ಸಮಯದಲ್ಲಿ ಮಾರುಕಟ್ಟೆಯಲ್ಲಿ ಕಾಗದದ ಬೆಲೆ, ಡಿಟಿಪಿ ವೆಚ್ಚ, ವಿದ್ಯುತ್‌ದರ, ಬಾಡಿಗೆ ಸಾಗಣಿಕೆ ವೆಚ್ಚಗಳು ಹೆಚ್ಚಾಗಿರುವುದರಿಂದ ಸದ್ಯದಲ್ಲಿ ಚಾಲ್ತಿಯಲ್ಲಿರುವ ದರಗಳನ್ನು ಪರಿಶೀಲಿಸುವ ಕುರಿತು ಸಂಘ ಸಂಸ್ಥೆಗಳಿಂದ ಲೇಖಕ ಪ್ರಕಾಶಕರಿಂದ ಮನವಿಗಳು ಬಂದಿದ್ದು, ಲೇಖಕ ಪ್ರಕಾಶಕರು, ಸಂಘಸಂಸ್ಥೆಗಳು ಪರಿಷ್ಕರಿಸಲು ಸೂಚಿಸಿದ ದರಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿ ಸಭೆಯಲ್ಲಿ ಚರ್ಚಿಸಿ ಅನುಮೋದನೆ ನೀಡಲಾಗಿದೆ ಎಂದು ತಿಳಿಸುತ್ತಾ, ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಪುಸ್ತಕಗಳಿಗೆ ಬೆಲೆಯನ್ನು ಪರಿಷ್ಕರಿಸಿ ನಿಗದಿಪಡಿಸಿರುವ ಬಗ್ಗೆ ಮೇಲೆ (3) ರಲ್ಲಿ ಓದಲಾದ ಏಕ ಕಡತದನ್ವಯ ಗ್ರಂಥಾಲಯ ಇಲಾಖೆಯ ನಿರ್ದೇಶಕರು ಕೋರಿರುವರು. ಈ ಸಂಬಂಧವಾಗಿ ಮೇಲೆ (4)ರಲ್ಲಿ ಓದಲಾದ ದಿನಾಂಕ 9–11–2009ರ ಸಭೆಯಲ್ಲಿ ಚರ್ಚಿಸಿ ಹಾಗೂ ಪರಿಷ್ಕೃತ ಬೆಲೆಯ ಕುರಿತು ಸರ್ಕಾರಿ ಮುದ್ರಣ ಇಲಾಖೆಯ ಅಭಿಪ್ರಾಯವನ್ನು ಪಡೆದು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಡಿ 283 ಎಲ್‌ಐಬಿ 2009, ಬೆಂಗಳೂರು, ದಿನಾಂಕ : 14–6–2010

ಮೇಲೆ (2)ರಲ್ಲಿ ಓದಲಾದ ದಿನಾಂಕ : 27–11–2006ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ದರಗಳನ್ನು ಪರಿಷ್ಕರಿಸಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಈ ಆದೇಶದ ದಿನಾಂಕದಿಂದ ಮುಂದಕ್ಕೆ ಆಯ್ಕೆ ಮಾಡಿ, ಖರೀದಿಸುವ ಪುಸ್ತಕಗಳಿಗೆ, ಈ ಕೆಳಕಂಡ ಬೆಲೆಗಳನ್ನು ನಿಗದಿಪಡಿಸಿ ಆದೇಶಿಸಿದೆ.

ಕ್ರ.ಸಂ.	ಪುಸ್ತಕದ ಅಳತೆ	ಕಾಗದದ ಗುಣಮಟ್ಟ	ಒಂದು ಪುಟಕ್ಕೆ ನಿಗದಿಪಡಿಸಿದ ಬೆಲೆ
1	1/8 ಕ್ರೌನ್	ಸಾದಾ (ಬಿಳಿಹಾಳೆ) ಕಾಗದ	0.30 ಪೈಸೆ
2	1/8 ಕ್ರೌನ್	ಉತ್ತಮ (ಮ್ಯಾಪ್ಲಿತೋ) ಕಾಗದ	0.40 ಪೈಸೆ
3	1/8 ಡೆಮ್ಮಿ	ಸಾದಾ (ಬಿಳಿಹಾಳೆ) ಕಾಗದ	0.40 ಪೈಸೆ
4	1/8 ಡೆಮ್ಮಿ	ಉತ್ತಮ (ಮ್ಯಾಪ್ಲಿತೋ) ಕಾಗದ	0.50 ಪೈಸೆ
5	1/4 ಕ್ರೌನ್	ಉತ್ತಮ (ಮ್ಯಾಪ್ಲಿತೋ) ಕಾಗದ	0.80 ಪೈಸೆ
6	1/4 ಡೆಮ್ಮಿ	ಸಾದಾ (ಬಿಳಿಹಾಳೆ) ಕಾಗದ	0.80 ಪೈಸೆ
7	1/4 ಡೆಮ್ಮಿ	ಉತ್ತಮ (ಮ್ಯಾಪ್ಲಿತೋ) ಕಾಗದ	ರೂ. 1.00
1	Crown 1/8	Art Paper 90 gsm Black & White Printing (ಪ್ರತಿ ಪುಟಕ್ಕೆ)	ರೂ. 0.70
2	Crown 1/4	Art Paper 90 gsm Black & White Printing (ಪ್ರತಿ ಪುಟಕ್ಕೆ)	ರೂ. 1.20
3	Crown 1/8	Art Paper 90 gsm Four Colour Printing (ಪ್ರತಿ ಪುಟಕ್ಕೆ)	ರೂ. 1.40
4	Crown 1/4	Art Paper 90 gsm Four Colour Printing (ಪ್ರತಿ ಪುಟಕ್ಕೆ)	ರೂ. 2.50
5	Demy 1/8	Art Paper 90 gsm Black & White Printing (ಪ್ರತಿ ಪುಟಕ್ಕೆ)	ರೂ. 0.80
6	Demy 1/4	Art Paper 90 gsm Black & White Printing (ಪ್ರತಿ ಪುಟಕ್ಕೆ)	ರೂ. 1.40
7	Demy 1/8	Art Paper 90 gsm Four Colour Printing (ಪ್ರತಿ ಪುಟಕ್ಕೆ)	ರೂ. 1.80
8	Demy 1/4	Art Paper 90 gsm Four Colour Printing (ಪ್ರತಿ ಪುಟಕ್ಕೆ)	ರೂ. 2.75

9. Case Binding Crown & Demy 1/8 — Rs. 20-00
Crown & Demy ¼ — Rs. 25-00

ಇನ್ನುಳಿದ ಇತರೆ ನಿಬಂಧನೆಗಳು ಆದೇಶ ಸಂಖ್ಯೆ : ಇಡಿ 170 ಎಲ್‌ಐಬಿ 2006, ದಿನಾಂಕ : 27–11–2006 ರಲ್ಲಿರುವಂತೆ ಮುಂದುವರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಎಂ.ಎಸ್. ಸೋಮಶೇಖರ್)

ಪಿ.ಆರ್. 1681 ಸರ್ಕಾರದ ಅಧೀನ ಕಾರ್ಯದರ್ಶಿ

ಶಿಕ್ಷಣ ಇಲಾಖೆ

ಇಂಧನ ಸಚಿವಾಲಯ

ವಿಷಯ : ಮೆ॥ ಸಾಯಿತೇಜ ಎನರ್ಜಿಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 377 ಎನ್‌ಸಿಇ 2004 ದಿನಾಂಕ : 21–12–2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010, ದಿನಾಂಕ : 17–4–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 197 ಎನ್‌ಸಿಇ 2010, ದಿನಾಂಕ : 26–4–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1)ರ ಆದೇಶದಲ್ಲಿ ಮೆ : ಸಾಯಿತೇಜ ಎನರ್ಜಿಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಯಾದಗೀರ್ ತಾಲ್ಲೂಕಿನ ಹಿರಯನೂರು ಗ್ರಾಮದ ಬಳಿ ಭೀಮಾ ನದಿಗೆ ಅಡ್ಡಲಾಗಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ಸಾಯಿತೇಜ ಎನರ್ಜಿಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಅಭಿವೃದ್ಧಿದಾರ 2 ವಿಳಾಸಗಳಿಗೂ ಕಳುಹಿಸಿದ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸುಗಳಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ಸಾಯಿತೇಜ ಎನರ್ಜಿಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಸದರಿ ಕಾರಣ ಕೇಳುವ ನೋಟೀಸುಗಳು "Not claimed, Returned to the sender" and "No such addressee in this number, hence returned to sender" ಎಂದು ಹಿಂದಕ್ಕೆ ಬಂದಿರುತ್ತವೆ.

ಮೆ॥ ಸಾಯಿತೇಜ ಎನರ್ಜಿಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 6 ವರ್ಷ ಕಳೆದರೂ ಯೋನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಅದೇಶ ಸಂಖ್ಯೆ : ಇಎನ್ 197 ಎನ್‌ಸಿಇ 2010, ಬೆಂಗಳೂರು, ದಿನಾಂಕ : 23–06–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಂಇ 377 ಎನ್‌ಸಿಇ 2004, ದಿನಾಂಕ 21–12–2004 ರಲ್ಲಿ ಮೆ॥ ಸಾಯಿತೇಜ ಎನರ್ಜಿಸ್ ಪ್ರೈವೇಟ್ ಲಿಮಿಟೆಡ್ ಗುಲ್ಬರ್ಗಾ ಜಿಲ್ಲೆಯ ಯಾದಗೀರ್ ತಾಲ್ಲೂಕಿನ ಹಿರಯನೂರು ಗ್ರಾಮದ ಬಳಿ ಭೀಮಾ ನದಿಗೆ ಅಡ್ಡಲಾಗಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಸ್. ಜೆ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1706 ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : ಮೆ॥ ರೆಫೀಡಿಂ ಪವರ್ ಸಪ್ಲೈಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 28 ಎನ್‌ಸಿಇ 96(18), ದಿನಾಂಕ : 24–7–1996.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010, ದಿನಾಂಕ : 17–4–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 160 ಎನ್‌ಸಿಇ 2010, ದಿನಾಂಕ : 26–4–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1)ರ ಆದೇಶದಲ್ಲಿ ಮೆ : ರೆಫೀಡಿಂ ಪವರ್ ಸಪ್ಲೈಸ್ ಇವರಿಗೆ ಕೊಡಗು ಜಿಲ್ಲೆಯ ಕುತುಪುಜದಲ್ಲಿ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ರೆಫೀಡಿಂ ಪವರ್ ಸಪ್ಲೈಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ರೆಫೀಡಿಂ ಪವರ್ ಸಪ್ಲೈಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಕಾರಣ ಕೇಳುವ ನೋಟಿಸನ್ನು ಸ್ವೀಕರಿಸಿರುವುದಕ್ಕೆ ಸ್ವೀಕೃತಿ ಬಂದಿರುವುದಿಲ್ಲ. ಅಭಿವೃದ್ಧಿದಾರರಿಂದ ಉತ್ತರವೂ ಸಹ ಬಂದಿರುವುದಿಲ್ಲ. ಆದುದರಿಂದ ಮೆ॥ ರೆಫೀಡಿಂ ಪವರ್ ಸಪ್ಲೈಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯು ಅಸ್ತಿತ್ವದಲ್ಲಿ ಇಲ್ಲವೆಂದು ಭಾವಿಸಿ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದು ಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಅದೇಶ ಸಂಖ್ಯೆ : ಇಎನ್ 160 ಎನ್‌ಸಿಇ 2010, ಬೆಂಗಳೂರು, ದಿನಾಂಕ : 23–06–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಂಇ 28 ಎನ್‌ಸಿಇ 96(18), ದಿನಾಂಕ 24–7–1996 ರಲ್ಲಿ ಮೆ॥ ರೆಫೀಡಿಂ ಪವರ್ ಸಪ್ಲೈಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕೊಡಗು ಜಿಲ್ಲೆಯ ಕುತುಪುಜದಲ್ಲಿ ಹಂಚಿಕೆಯಾಗಿದ್ದ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಸ್. ಜೆ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1707 ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : ಮೆ॥ ಶಿವ ಹೈಡ್ರೊ ಪ್ರಾಜೆಕ್ಟ್ಸ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 1.1 ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 436 ಎನ್‌ಸಿಇ 2004, ದಿನಾಂಕ : 6–1–2005.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010, ದಿನಾಂಕ : 17–4–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 194 ಎನ್‌ಸಿಇ 2010, ದಿನಾಂಕ : 26–4–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1)ರ ಆದೇಶದಲ್ಲಿ ಮೆ : ಶಿವ ಹೈಡ್ರೊ ಪ್ರಾಜೆಕ್ಟ್ಸ್ ಲಿಮಿಟೆಡ್ ಇವರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕನಕಪುರ ತಾಲ್ಲೂಕಿನ ಹಾರೋಬೆಲೆ ಗ್ರಾಮದ ಬಳಿ ಅರ್ಕಾವತಿ ನದಿಗೆ ಕಟ್ಟುತ್ತಿರುವ ಬ್ಯಾರೇಜಿನ ಎಡ ದಂಡೆ ಹಾಗೂ ಬಲ ದಂಡೆ ಕಾಲುವೆಯಲ್ಲಿ 0.5 ವ್ಯಾಟ್ ಮತ್ತು 0.6 ಮೆಗಾ ವ್ಯಾಟ್ ಒಟ್ಟು 1.1 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ಶಿವ ಹೈಡ್ರೊ ಪ್ರಾಜೆಕ್ಟ್ಸ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ಶಿವ ಹೈಡ್ರೊ ಪ್ರಾಜೆಕ್ಟ್ಸ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಉತ್ತರ ನೀಡುವಂತೆ ತಿಳಿಸಲಾಗಿತ್ತು. ಆದರೆ ಕಾರಣ ಕೇಳುವ ನೋಟಿಸು "No such firm in 15th B Cross. Hence return to sender" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ : ಶಿವ ಹೈಡ್ರೊ ಪ್ರಾಜೆಕ್ಟ್ಸ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 5 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಅದೇಶ ಸಂಖ್ಯೆ : ಇಎನ್ 194 ಎನ್‌ಸಿಇ 2010, ಬೆಂಗಳೂರು, ದಿನಾಂಕ : 23–06–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಂಇ 436 ಎನ್‌ಸಿಇ 2004, ದಿನಾಂಕ 6–1–2005 ರಲ್ಲಿ ಮೆ : ಶಿವ ಹೈಡ್ರೊ ಪ್ರಾಜೆಕ್ಟ್ಸ್ ಲಿಮಿಟೆಡ್ ಇವರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕನಕಪುರ ತಾಲ್ಲೂಕಿನ ಹಾರೋಬೆಲೆ ಗ್ರಾಮದ ಬಳಿ ಅರ್ಕಾವತಿ ನದಿಗೆ ಕಟ್ಟುತ್ತಿರುವ ಬ್ಯಾರೇಜಿನ ಎಡ ದಂಡೆ ಹಾಗೂ ಬಲ ದಂಡೆ ಕಾಲುವೆಯಲ್ಲಿ 0.5 ವ್ಯಾಟ್ ಮತ್ತು 0.6 ಮೆಗಾ ವ್ಯಾಟ್ ಒಟ್ಟು ಹಂಚಿಕೆಯಾಗಿದ್ದ 1.1 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಸ್. ಜೆ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1708 ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : ಮೆ॥ ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 104 ಎನ್‌ಸಿಇ 2004, ದಿನಾಂಕ : 13–5–2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010, ದಿನಾಂಕ : 17–4–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 176 ಎನ್‌ಸಿಇ 2010, ದಿನಾಂಕ : 26–4–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1)ರ ಆದೇಶದಲ್ಲಿ ಮೆ : ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಚಿಕ್ಕಮಗಳೂರು ತಾಲ್ಲೂಕಿನ ಕುದರಬ್ಬಿ ಗ್ರಾಮದ ಬಳಿ ಭದ್ರಾ ನದಿಗೆ (by utilising total water flowing in Bhadra river with about 2 km intake and 2 km of tailrace canal) ಅಡ್ಡಲಾಗಿ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಸದರಿ ಕಾರಣ ಕೇಳುವ ನೋಟಿಸು "Refused, Returned to sender" ಎಂದು ಹಿಂದಕ್ಕೆ ಬಂದಿರುತ್ತದೆ.

ಯೋಜನೆಯು ಹಂಚಿಕೆಯಾಗಿ 6 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಅದೇಶ ಸಂಖ್ಯೆ : ಇಎನ್ 176 ಎನ್‌ಸಿಇ 2010, ಬೆಂಗಳೂರು, ದಿನಾಂಕ : 23–06–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಎನ್ 104 ಎನ್‌ಸಿಇ 2004, ದಿನಾಂಕ 13–5–2004 ರಲ್ಲಿ ಮೆ॥ ಶ್ರೀ ಐಶ್ವರ್ಯ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಚಿಕ್ಕಮಗಳೂರು ತಾಲ್ಲೂಕಿನ ಕುದರಬ್ಬಿ ಗ್ರಾಮದ ಬಳಿ ಭದ್ರಾ ನದಿಗೆ (by utilising total water flowing in bhadra river with about 2 km intake and 2 km of tailrace canal) ಅಡ್ಡಲಾಗಿ ಹಂಚಿಕೆಯಾಗಿದ್ದ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಪಿ.ಆರ್. 1709

ಇಂಧನ ಸಚಿವಾಲಯ

ವಿಷಯ : ಮೆ॥ ವಿಕ್ರಾಂತ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 49 ಎನ್‌ಸಿಇ 2004, ದಿನಾಂಕ : 13–2–2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010, ದಿನಾಂಕ : 17–4–2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 146 ಎನ್‌ಸಿಇ 2010, ದಿನಾಂಕ : 26–4–2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1)ರ ಆದೇಶದಲ್ಲಿ ಮೆ : ವಿಕ್ರಾಂತ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಪಾತಿಕುಮಾರಿ ಗ್ರಾಮದ ಬಳಿ ಮಾರಿಗುಂಡಿ ಹೊಳೆಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ವಿಕ್ರಾಂತ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ವಿಕ್ರಾಂತ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು. ಆದರೆ, ಸದರಿ ಕಾರಣ ಕೇಳುವ ನೋಟಿಸು "Addressee left, R/S" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ॥ ವಿಕ್ರಾಂತ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 5 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರಿ ಅದೇಶ ಸಂಖ್ಯೆ : ಇಎನ್ 146 ಎನ್‌ಸಿಇ 2010, ಬೆಂಗಳೂರು, ದಿನಾಂಕ : 23–06–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಂಇ 49 ಎನ್‌ಸಿಇ 2004, ದಿನಾಂಕ 13–2–2004 ರಲ್ಲಿ ಮೆ : ವಿಕ್ರಾಂತ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಪಾತಿಕುಮಾರಿ ಗ್ರಾಮದ ಬಳಿ ಮಾರಿಗುಂಡಿ ಹೊಳೆಗೆ ಅಡ್ಡಲಾಗಿ ಹಂಚಿಕೆಯಾಗಿದ್ದ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಪಿ.ಆರ್. 1710

ಇಂಧನ ಸಚಿವಾಲಯ

ವಿಷಯ : ಮೆ॥ ಆದರ್ಶ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದು ಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಂಇ 396 ಎನ್‌ಸಿಇ 2004, ದಿನಾಂಕ : 21-12-2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010, ದಿನಾಂಕ : 17-4-2010.
3. ಕಾರಣ ಕೇಳುವ ನೋಟೀಸು ಸಂಖ್ಯೆ : ಇಎನ್ 198 ಎನ್‌ಸಿಇ 2010, ದಿನಾಂಕ : 6-5-2010.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ : (1)ರ ಆದೇಶದಲ್ಲಿ ಮೆ॥ ಆದರ್ಶ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಶಹಪುರ ತಾಲ್ಲೂಕಿನ ಎನ್.ಎಲ್.ಬಿ.ಸಿ.ಯ ಶಹಪುರ ಬ್ರಾಂಚ್ ಕೆನಾಲ್‌ಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ತೊಕಾಪುರ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ॥ ಆದರ್ಶ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ॥ ಆದರ್ಶ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಉತ್ತರ ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟಿಸು "No such addresee" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ॥ ಆದರ್ಶ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 5 1/2 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :-

ಸರ್ಕಾರಿ ಅದೇಶ ಸಂಖ್ಯೆ : ಇಎನ್ 198 ಎನ್‌ಸಿಇ 2010, ಬೆಂಗಳೂರು, ದಿನಾಂಕ : 23-06-2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಂಇ 396 ಎನ್‌ಸಿಇ 2004, ದಿನಾಂಕ 21-12-2004 ರಲ್ಲಿ ಮೆ॥ ಆದರ್ಶ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಶಹಪುರ ತಾಲ್ಲೂಕಿನ ಎನ್.ಎಲ್.ಬಿ.ಸಿ.ಯ ಶಹಪುರ ಬ್ರಾಂಚ್ ಕೆನಾಲ್‌ಗೆ ಅಡ್ಡಲಾಗಿ ಹಂಚಿಕೆಯಾಗಿದ್ದ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಸ್. ಜೆ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1711 ಇಂಧನ ಇಲಾಖೆ

ಇಂಧನ ಸಚಿವಾಲಯ

ವಿಷಯ : ಮೆ॥ ಎಸ್.ಎನ್.ಎಸ್. ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 3.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 106 ಎನ್‌ಸಿಇ 2004, ದಿನಾಂಕ: 17.05.2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 186 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಮೆ|| ಎಸ್.ಎನ್.ಎಸ್. ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಶಿರಂಗಹಳ್ಳಿ ಗ್ರಾಮದ ಹಾದಗಲ್ ಹೊಳೆಗೆ ಅಡ್ಡಲಾಗಿ 3.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ಎಸ್.ಎನ್.ಎಸ್. ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ಎಸ್.ಎನ್.ಎಸ್. ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಕಾರಣ ಕೇಳುವ ನೋಟೀಸನ್ನು ಅಭಿವೃದ್ಧಿದಾರರು ಸ್ವೀಕರಿಸಿದ್ದು ಉತ್ತರವನ್ನು ನೀಡಿರುವುದಿಲ್ಲ. ಅಭಿವೃದ್ದಿದಾರರು ಈ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡದಿದ್ದುದರಿಂದ ಹಾಗೂ ಯೋಜನೆಯು ಹಂಚಿಕೆಯಾಗಿ 6 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲದಿರುವುದರಿಂದ, ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರದ ಆದೇಶ ಸಂಖ್ಯೆ: ಇಎನ್ 186 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಂಇ 106 ಎನ್‌ಸಿಇ 2004, ದಿನಾಂಕ: 17.05.2004ರಲ್ಲಿ ಮೆ|| ಎಸ್.ಎನ್.ಎಸ್. ಪವರ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಶಿರಂಗಹಳ್ಳಿ ಗ್ರಾಮದ ಹಾದಗಲ್ ಹೊಳೆಗೆ ಅಡ್ಡಲಾಗಿ ಹಂಚಿಕೆ ಮಾಡಲಾಗಿದ್ದ 3.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1712

ಎಸ್.ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ|| ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 9.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 269 ಎನ್‌ಸಿಇ 2003 ದಿನಾಂಕ:31.12.2003.
2. ಸರ್ಕಾರಿ ಆದೇಶ ಸಂಖ್ಯೆ: ಇಂಇ 244 ಎನ್‌ಸಿಇ 2003 ದಿನಾಂಕ:10.02.2004.
3. ಸರ್ಕಾರಿ ಆದೇಶ ಸಂಖ್ಯೆ: ಇಂಇ 103 ಎನ್‌ಸಿಇ 2006 ದಿನಾಂಕ:02.03.2006.
4. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.4.2010
5. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 157 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆಃಃ ದೇವರ್ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ಹುಲಿಕಲ್ ಹೊಳೆಗೆ ಅಡ್ಡಲಾಗಿ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಹುಲಿಕಲ್ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಮೆಃಃ ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಮಾವಿನಕಾನ ಗ್ರಾಮದ 3.ಕಿ.ಮೀ. ಬಳಿ ಕುಂಚಿಕಲ್ ಫಾಲ್ಸ್ ಹತ್ತಿರ

ವರಾಹಿ ನದಿಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕುಂಚಿಕಲ್ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ಮೆ|| ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಹಂಚಿಕೆ ಮಾಡಿರುವ 2 ಮೆಗಾ ವ್ಯಾಟ್ ಸಾಮರ್ಥ್ಯದ ಕುಂಚಿಕಲ್ ಕಿರುಜಲ ವಿದ್ಯುತ್ ಯೋಜನೆ ಹಾಗೂ ಮೆ. ದೇವರ್ ಪವರ್ ಪ್ರೈ. ಲಿ., ಕಂಪನಿಗೆ ಹಂಚಿಕೆ ಮಾಡಿರುವ 4 ಮೆಗಾ ವ್ಯಾಟ್ ಸಾಮರ್ಥ್ಯದ ಹುಲಿಕಲ್ ಕಿರುಜಲ ವಿದ್ಯುತ್ ಯೋಜನೆಗಳನ್ನು ವಿಲೀನಗೊಳಿಸಿ ಒಟ್ಟು 6 ಮೆಗಾ ವ್ಯಾಟ್ (2ಮೆ.ವ್ಯಾ ಮತ್ತು 4.ಮೆ.ವ್ಯಾ= 6ಮೆ.ವ್ಯಾ) ಸಾಮರ್ಥ್ಯದ ಒಂದೇ ಯೋಜನೆಯಾಗಿ ವರಾಹಿ ಕಿರುಜಲ ವಿದ್ಯುತ್ ಯೋಜನೆ ಎಂಬ ಹೆಸರಿನಲ್ಲಿ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕ್, ಹೊಸಂಗಡಿ ಗ್ರಾಮದ ಸಮೀಪದಲ್ಲಿ ಯೋಜನೆಯನ್ನು ಮೆ:: ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈ, ಲಿ., ರವರಿಗೆ ಅನುಷ್ಠಾನಗೊಳಿಸಲು ಅನುಮತಿ ನೀಡಲಾಗಿತ್ತು ಹಾಗೂ ವಿಲೀನಗೊಂಡಿರುವ ಈ ಯೋಜನೆಯ ಸಾಮರ್ಥ್ಯವನ್ನು 6 ಮೆಗಾ ವ್ಯಾಟ್‌ನಿಂದ 9 ಮೆಗಾ ವ್ಯಾಟ್‌ಗೆ ಹೆಚ್ಚಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆಃಃ ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಉತ್ತರ ನೀಡುವಂತೆ ತಿಳಿಸಲಾಗಿತ್ತು. ಆದರೆ, ಕಾರಣ ಕೇಳುವ ನೋಟೀಸು "Insufficient Address, returned to sender" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ|| ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಯೋಜನೆಯು ಹಂಚಿಕೆಯಾಗಿ 7 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡಿರುವುದಿಲ್ಲ. ಆದ್ದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ:–

ಸರ್ಕಾರದ ಆದೇಶ ಸಂಖ್ಯೆ: ಇಎನ್ 157 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಂಇ 269 ಎನ್‌ಸಿಇ 2003 ದಿನಾಂಕ: 31.12.2003, ಸರ್ಕಾರಿ ಆದೇಶ ಸಂಖ್ಯೆ: ಇಂಇ 244 ಎನ್‌ಸಿಇ 2003 ದಿನಾಂಕ: 10.02.2004 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಇಂಇ 103 ಎನ್‌ಸಿಇ 2006 ದಿನಾಂಕ: 2.03.2006ರಲ್ಲಿ ಮೆ|| ಸೌತ್ ಕೆನರಾ ಎಲೆಕ್ಟ್ರಿಕ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಹೊಸಂಗಡಿ ಗ್ರಾಮದ ಸಮೀಪದಲ್ಲಿ ಅನುಮತಿ ನೀಡಲಾಗಿದ್ದ 9.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಜಿ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಇಂಧನ ಇಲಾಖೆ.

ಪಿ.ಆರ್ ನಂ 1713

ಇಂಧನ ಸಚಿವಾಲಯ

ವಿಷಯ : ಮೆ|| ಸಿದ್ದಲಿಂಗೇಶ್ವರ ಹೈಡಲ್ ಪವರ್ ಇವರಿಗೆ ಹಂಚಿಕೆ ಮಾಡಲಾಗಿರುವ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರಿ ಆದೇಶ ಸಂಖ್ಯೆ: ಇಂಇ 236 ಎನ್‌ಸಿಇ 2004 ದಿನಾಂಕ: 13.09.2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.4.2010
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 205 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ|| ಸಿದ್ದಲಿಂಗೇಶ್ವರ ಹೈಡಲ್ ಪವರ್ ಇವರಿಗೆ ಬೆಳಗಾಂ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಹೊಸಯೆಡೂರು ಗ್ರಾಮದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ಯಾರೇಜಿಗೆ ಹೊಂದಿಕೊಂಡಂತೆ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ಸಿದ್ದಲಿಂಗೇಶ್ವರ ಹೈಡಲ್ ಪವರ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ಸಿದ್ದಲಿಂಗೇಶ್ವರ ಹೈಡಲ್ ಪವರ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಕಾರಣ ಕೇಳುವ ನೋಟೀಸನ್ನು ಮೆ|| ಸಿದ್ದಲಿಂಗೇಶ್ವರ ಹೈಡಲ್ ಪವರ್ ಇವರು ಸ್ವೀಕರಿಸಿದ್ದು ಉತ್ತರವನ್ನು ನೀಡಿರುವುದಿಲ್ಲ. ಈ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡದಿದ್ದುದರಿಂದ ಹಾಗೂ ಯೋಜನೆಯು ಹಂಚಿಕೆಯಾಗಿ 6 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲದಿರುವುದರಿಂದ, ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ:–

ಸರ್ಕಾರದ ಆದೇಶ ಸಂಖ್ಯೆ: ಇಎನ್ 205 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಇ 236 ಎನ್‌ಸಿಇ 2004, ದಿನಾಂಕ: 13.09.2004ರಲ್ಲಿ ಮೆ|| ಸಿದ್ದಲಿಂಗೇಶ್ವರ ಹೈಡಲ್ ಪವರ್ ಇವರಿಗೆ ಬೆಳಗಾಂ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಹೊಸಯೆಡೂರು ಗ್ರಾಮದಲ್ಲಿ ಕೃಷ್ಣಾ ನದಿಗೆ ಅಡ್ಡಲಾಗಿ ಬ್ಯಾರೇಜಿಗೆ ಹೊಂದಿಕೊಂಡಂತೆ ಹಂಚಿಕೆ ಮಾಡಲಾಗಿದ್ದ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎಸ್.ಜಿ. ಸಂಪತ್ ಕುಮಾರ್

ಸರ್ಕಾರದ ಅಧೀನ ಕಾರ್ಯದರ್ಶಿ

ಇಂಧನ ಇಲಾಖೆ.

ಪಿ.ಆರ್ ನಂ 1714

ಇಂಧನ ಸಚಿವಾಲಯ

ವಿಷಯ : ಮೆ|| ಐ.ಎಂ. ಸುರೇಂದ್ರ ಇವರಿಗೆ ಹಂಚಿಕೆ ಮಾಡಲಾಗಿರುವ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಡಿಇ 11 ಎನ್‌ಸಿಇ 2004, ದಿನಾಂಕ: 21.07.2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010.
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 137 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ|| ಐ.ಎಂ. ಸುರೇಂದ್ರ ಇವರಿಗೆ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ನಾಪೋಕ್ಲು ಗ್ರಾಮದ ಕೋಲೋಪಟ್ಟಿ ಹೊಳೆಗೆ ಅಡ್ಡಲಾಗಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ಐ.ಎಂ. ಸುರೇಂದ್ರ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ಐ.ಎಂ. ಸುರೇಂದ್ರ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಕಾರಣ ಕೇಳುವ ನೋಟೀಸನ್ನು ಅಭಿವೃದ್ಧಿದಾರರು ಸ್ವೀಕರಿಸಿದ್ದು ಉತ್ತರವನ್ನು ನೀಡಿರುವುದಿಲ್ಲ. ಅಭಿವೃದ್ಧಿದಾರರು ಈ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡದಿದ್ದುದರಿಂದ ಹಾಗೂ ಯೋಜನೆಯು ಹಂಚಿಕೆಯಾಗಿ 6 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲದಿರುವುದರಿಂದ, ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :-

ಸರ್ಕಾರದ ಆದೇಶ ಸಂಖ್ಯೆ: ಇಎನ್ 137 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23-06-2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಡಿಇ 11 ಎನ್‌ಸಿಇ 2004, ದಿನಾಂಕ: 21.07.2004ರಲ್ಲಿ ಮೆ|| ಐ.ಎಂ. ಸುರೇಂದ್ರ ಇವರಿಗೆ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ನಾಪೋಕ್ಲು ಗ್ರಾಮದ ಕೋಲೋಪಟ್ಟಿ ಹೊಳೆಗೆ ಅಡ್ಡಲಾಗಿ ಹಂಚಿಕೆ ಮಾಡಲಾಗಿದ್ದ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1715

ಎಸ್.ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ|| ರಾಜಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 308 ಎನ್‌ಸಿಇ 2002 ದಿನಾಂಕ: 25.01.2003.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010.
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 203 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ|| ರಾಜಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಶೋರಾಪುರ ತಾಲ್ಲೂಕಿನ ಚೆನ್ನೂರು ಗ್ರಾಮದಬಳಿ ದೇವಪುರ ನಳಕ್ಕೆ ಅಡ್ಡಲಾಗಿ 1.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ರಾಜಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ರಾಜಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಕಾರಣ ಕೇಳುವ ನೋಟೀಸನ್ನು ಮೆ|| ರಾಜಿ ಪವರ್ ಪ್ರೈವೇಟ್ ಲಿಮಿಟೆಡ್ ಇವರು ಸ್ವೀಕರಿಸಿದ್ದು ಉತ್ತರವನ್ನು ನೀಡಿರುವುದಿಲ್ಲ ಮತ್ತು ಈ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡದಿದ್ದುದರಿಂದ ಹಾಗೂ ಯೋಜನೆಯು ಹಂಚಿಕೆಯಾಗಿ 7 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲದಿರುವುದರಿಂದ, ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :-

ಸರ್ಕಾರದ ಆದೇಶ ಸಂಖ್ಯೆ: ಇಎನ್ 203 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23-06-2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಂಇ 308 ಎನ್‌ಸಿಇ 2002 ದಿನಾಂಕ: 25.01.2003ರಲ್ಲಿ ಮೆ|| ರಾಜಿ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಶೋರಾಪುರ ತಾಲ್ಲೂಕಿನ ಚೆನ್ನೂರು ಗ್ರಾಮದ ಬಳಿ ದೇವಪುರ ನಳಕ್ಕೆ ಅಡ್ಡಲಾಗಿ ಹಂಚಿಕೆ ಮಾಡಲಾಗಿದ್ದ 1.00 ಮೆಗಾ ವ್ಯಾಟ್ ಸಾಮರ್ಥ್ಯದ

ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1716

ಎಸ್.ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 20 ಎನ್‌ಸಿಇ 2004 ದಿನಾಂಕ: 13.02.2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 177 ಎನ್‌ಸಿಇ 2010 ದಿನಾಂಕ: 26.04.2010.
4. ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರ ಪತ್ರ ದಿನಾಂಕ: 03.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಕಬ್ಬಿನಾಲೆ ಗ್ರಾಮದ ಕಬ್ಬಿನಾಲೆ ಹೊಳೆಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಪತ್ರದಲ್ಲಿ ಅಭಿವೃದ್ಧಿದಾರರು ಕಾರಣ ಕೇಳುವ ನೋಟೀಸಿಗೆ ನೀಡಿರುವ ಉತ್ತರದಲ್ಲಿ ಯೋಜನೆಯ ಪ್ರದೇಶವು ಆನೆಗಳು ಹಾಗೂ ನಕ್ಸಲರ ಹಾವಳಿಯಿಂದ ಕೂಡಿರುವ ಪ್ರದೇಶವಾಗಿದ್ದು, ಸರ್ವೆ ಕಾರ್ಯ ನಡೆಸಲು ವಿಳಂಬವಾಗಿದೆ. ಈಗ ಸರ್ವೆ ಕಾರ್ಯ ಮುಗಿದಿದೆ. ಪವರ್ ಇವ್ಯಾಕ್ಯುಯೇಷನ್ ಮತ್ತು ಜಮೀನು ಹಂಚಿಕೆಗಾಗಿ ಅರ್ಜಿ ಸಲ್ಲಿಸಿದ್ದು, ಯೋಜನೆಯ ಸಾಮರ್ಥ್ಯವನ್ನು 9.00 ಮೆ.ವ್ಯಾ.ಗೆ ಹೆಚ್ಚಿಸಿದ್ದು ದಿನಾಂಕ : 07.03.2009ರಂದು ನಿಗದಿತ ಶುಲ್ಕವನ್ನು ಪಾವತಿಸಲಾಗಿದೆ. ಎಂದು ತಿಳಿಸಿರುತ್ತಾರೆ. ಆದರೆ ಯಾವುದೇ ಪೂರಕ ದಾಖಲಾತಿಗಳನ್ನು ನೀಡಿರುವುದಿಲ್ಲ.

ಯೋಜನೆಯ ಹಂಚಿಕೆಯು 2004ರಲ್ಲಿಯೇ ಆಗಿದ್ದು 6 ವರ್ಷಗಳಾದರೂ ಯೋಜನೆಯ ಅನುಷ್ಠಾದ ನಿಟ್ಟಿನಲ್ಲಿ ಯಾವುದೇ ಗಣನೀಯವಾದ ಪ್ರಗತಿಯನ್ನು ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರು ಸಾಧಿಸಿರುವುದು ಕಂಡು ಬರುವುದಿಲ್ಲ. ಆದ್ದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ:–

ಸರ್ಕಾರದ ಆದೇಶ ಸಂಖ್ಯೆ: ಇಎನ್ 177 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಂಇ 20 ಎನ್‌ಸಿಇ 2004 ದಿನಾಂಕ: 13.02.2004ರಲ್ಲಿ ಮೆ|| ವಕ್ಕಲ್ ಪವರ್ ಕಾರ್ಪೊರೇಷನ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಕಬ್ಬಿನಾಲೆ ಗ್ರಾಮದ ಕಬ್ಬಿನಾಲೆ ಹೊಳೆಗೆ ಅಡ್ಡಲಾಗಿ ಹಂಚಿಕೆ ಮಾಡಲಾಗಿದ್ದ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆಯ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1717

ಎಸ್.ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ|| ಶರಣ್ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 290 ಎನ್‌ಸಿಇ 2004 ದಿನಾಂಕ: 09.09.2004.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 202 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ|| ಶರಣ್ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಕಗ್ನಾ ನದಿಗೆ ಕಟ್ಟುತ್ತಿರುವ ಬ್ಯಾರೇಜಿಗೆ ಅಡ್ಡಲಾಗಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ಶರಣ್ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ಶರಣ್ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಕಾರಣ ಕೇಳುವ ನೋಟೀಸನ್ನು ಅಭಿವೃದ್ಧಿದಾರರು ಸ್ವೀಕರಿಸಿದ್ದು ಉತ್ತರವನ್ನು ನೀಡಿರುವುದಿಲ್ಲ. ಅಭಿವೃದ್ಧಿದಾರರು ಈ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡದಿದ್ದುದರಿಂದ ಹಾಗೂ ಯೋಜನೆಯು ಹಂಚಿಕೆಯಾಗಿ 6 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲದಿರುವುದರಿಂದ, ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರದ ಆದೇಶ ಸಂಖ್ಯೆ: ಇಎನ್ 141 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಂಇ 290 ಎನ್‌ಸಿಇ 2004 ದಿನಾಂಕ: 09.09.2004ರಲ್ಲಿ ಮೆ|| ಶರಣ್ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಗುಲ್ಬರ್ಗಾ ಜಿಲ್ಲೆಯ ಅಫ್ಜಲ್ ಪುರ ತಾಲ್ಲೂಕಿನ ಭೀಮಾ ನದಿಗೆ ಅಡ್ಡಲಾಗಿ ಹಂಚಿಕೆ ಮಾಡಲಾಗಿದ್ದ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1718

ಎಸ್.ಜಿ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ|| ನೆರಿಯಾ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಹಂಚಿಕೆ ಮಾಡಲಾಗಿರುವ 4.5 ಮೆಗಾ ವ್ಯಾಟ್ ಸಾಮರ್ಥ್ಯದ ಕಿರು ಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 230 ಎನ್‌ಸಿಇ 2002, ದಿನಾಂಕ: 10.10.2002. ಮತ್ತು ಇಎನ್ 161 ಎನ್‌ಸಿಇ 2006, ದಿನಾಂಕ : 21–04–2006.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010.
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 173 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶಗಳಲ್ಲಿ ಮೆ|| ನೆರಿಯಾ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಅಟ್ಟೂರು ಗ್ರಾಮದ ಬಳಿ ಇಳಿಮಲ್ಲೈ ತೊರೆಗೆ ಅಡ್ಡಲಾಗಿ 4.5 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ನೆರಿಯಾ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ನೆರಿಯಾ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ನೋಟೀಸನ್ನು ಸ್ವೀಕರಿಸಿದ 15 ದಿನಗಳೊಳಗಾಗಿ ಸಮಜಾಯಿಷಿಯನ್ನು ನೀಡುವಂತೆ ತಿಳಿಸಲಾಗಿತ್ತು.

ಕಾರಣ ಕೇಳುವ ನೋಟೀಸನ್ನು ಅಭಿವೃದ್ಧಿದಾರರು ಸ್ವೀಕರಿಸಿದ್ದು ಉತ್ತರವನ್ನು ನೀಡಿರುವುದಿಲ್ಲ. ಅಭಿವೃದ್ಧಿದಾರರು ಈ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನ ಮಾಡದಿದ್ದುದರಿಂದ ಹಾಗೂ ಯೋಜನೆಯು ಹಂಚಿಕೆಯಾಗಿ 8 ವರ್ಷಗಳು ಕಳೆದರೂ ಯೋಜನೆಯ ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸಿಲ್ಲದಿರುವುದರಿಂದ, ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರದ ಆದೇಶ ಸಂಖ್ಯೆ: ಇಎನ್ 173 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಂಇ 230 ಎನ್‌ಸಿಇ 2002, ದಿನಾಂಕ: 10.10.2002ರಲ್ಲಿ ಮತ್ತು ಇಎನ್ 161 ಎನ್‌ಸಿಇ 2006, ದಿನಾಂಕ : 21–04–2006 ಮೆ|| ನೆರಿಯಾ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ದಕ್ಷಿಣ ಕನ್ನಡ ಬೆಳ್ತಂಗಡಿ ತಾಲ್ಲೂಕಿನ ಅಟ್ಟೂರು ಗ್ರಾಮದ ಬಳಿ ಇಳಿಮಲ್ಲೈ ತೊರೆಗೆ ಅಡ್ಡಲಾಗಿ ಹಂಚಿಕೆ ಮಾಡಲಾಗಿದ್ದ 4.5 ಮೆಗಾ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1719

ಎಸ್.ಜೆ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇಂಧನ ಸಚಿವಾಲಯ

ವಿಷಯ : ಮೆ|| ಮೇಗಿಬೈಲು ಎಂಟರ್‌ಪ್ರೈಸಸ್ ಇವರಿಗೆ ಹಂಚಿಕೆ ಮಾಡಲಾಗಿರುವ 400 ಕಿಲೋ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಂಇ 46 ಎನ್‌ಸಿಇ 2005 ದಿನಾಂಕ: 22.03.2005.
2. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/06/ಶೋಕಾಸ್ ನೋಟೀಸ್/2010 ದಿನಾಂಕ: 17.04.2010.
3. ಕಾರಣ ಕೇಳುವ ನೋಟೀಸು ಸಂಖ್ಯೆ: ಇಎನ್ 195 ಎನ್‌ಸಿಇ 2010 ದಿನಾಂಕ: 26.04.2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ೫೫ ಮೇಗಿಬೈಲು ಎಂಟರ್‌ಪ್ರೈಸಸ್ ಇವರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರಾಮನಗರ ತಾಲ್ಲೂಕಿನ ಬೈರಮಂಗಳ ಗ್ರಾಮದ ಬೈರಮಂಗಲ ರಿಸರ್‌ವಿಯರ್‌ನ ಕೆಳತೊರೆಯಲ್ಲಿ 400 ಕಿಲೋ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಅಭಿವೃದ್ಧಿದಾರರ ಅನುಷ್ಠಾನದ ಅವಧಿಯು ಸರ್ಕಾರದ ಆದೇಶದಂತೆ ಪೂರ್ಣಗೊಂಡಿದ್ದು, ಅನುಷ್ಠಾನದ ನಿಟ್ಟಿನಲ್ಲಿ ಯಾವುದೇ ಪ್ರಗತಿಯನ್ನು ಸಾಧಿಸದೇ ಇರುವುದರಿಂದ ಹಾಗೂ ಕಾಲಾವಕಾಶ ವಿಸ್ತರಣೆಯನ್ನು ಮಾಡಿಕೊಳ್ಳದೇ ಇರುವ ಹಿನ್ನೆಲೆಯಲ್ಲಿ ಮೆ|| ಮೇಗಿಬೈಲು ಎಂಟರ್‌ಪ್ರೈಸಸ್ ಇವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಕಾರಣ ಕೇಳುವ ನೋಟೀಸಿನಲ್ಲಿ ಯೋಜನೆಯ ಹಂಚಿಕೆ ಆದೇಶವನ್ನು ಏಕೆ ರದ್ದುಪಡಿಸಬಾರದೆಂದು ಮೆ|| ಮೇಗಿಬೈಲು ಎಂಟರ್‌ಪ್ರೈಸಸ್ ಇವರಿಗೆ ನೋಟೀಸನ್ನು ಕಳುಹಿಸಿ 15 ದಿನಗಳೊಳಗಾಗಿ ಉತ್ತರ

ನೀಡುವಂತೆ ತಿಳಿಸಲಾಗಿತ್ತು. ಆದರೆ ಸದರಿ ಕಾರಣ ಕೇಳುವ ನೋಟೀಸು "No such firm is present in this address not Know hence R/S" ಎಂದು ಹಿಂದಕ್ಕೆ ಬಂದಿರುತ್ತದೆ.

ಮೆ|| ಮೇಗಿಬೈಲು ಎಂಟರ್‌ಪ್ರೈಸಸ್ ಇವರಿಗೆ ಯೋಜನೆಯು ಹಂಚಿಕೆಯಾಗಿ 5 ವರ್ಷ ಕಳೆದರೂ ಯೋಜನೆ ಅನುಷ್ಠಾನ ಮಾಡದಿಲ್ಲದಿರುವುದರಿಂದ ಈಗಾಗಲೇ ನೀಡಲಾಗಿದ್ದ ಹಂಚಿಕೆ ಆದೇಶವನ್ನು ರದ್ದುಪಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ :–

ಸರ್ಕಾರದ ಆದೇಶ ಸಂಖ್ಯೆ: ಇಎನ್ 195 ಎನ್‌ಸಿಇ 2010, ಬೆಂಗಳೂರು, ದಿನಾಂಕ: 23–06–2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಇಇ 45 ಎನ್‌ಸಿಇ 2005, ದಿನಾಂಕ: 22.03.2005ರಲ್ಲಿ ಮೆ|| ಮೇಗಿಬೈಲು ಎಂಟರ್‌ಪ್ರೈಸಸ್ ಇವರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ (ಪ್ರಸ್ತುತ ರಾಮನಗರ ಜಿಲ್ಲೆ) ರಾಮನಗರ ತಾಲ್ಲೂಕಿನ ಬೈರಮಂಗಲ ಗ್ರಾಮದ ಬೈರಮಂಗಲ ರಿಸರ್‌ವಿಯರ್‌ನ ಕೆಳತೊರೆಯಲ್ಲಿ ಹಂಚಿಕೆಯಾಗಿದ್ದ 400 ಕಿಲೋ ವ್ಯಾಟ್ ಸಾಮರ್ಥ್ಯದ ಕಿರುಜಲ ವಿದ್ಯುತ್ ಯೋಜನೆಯ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್ ನಂ 1720

ಎಸ್.ಜಿ. ಸಂಪತ್ ಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಕರ್ನಾಟಕ ರಾಜ್ಯದಲ್ಲಿರುವ ಎಲ್ಲಾ 11 ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಭಾಷೆಯ ಅಭಿವೃದ್ಧಿಗಾಗಿ ಆಯಾ ವಿಶ್ವವಿದ್ಯಾಲಯಗಳಿಂದ ಪಡೆದ ಕ್ರಿಯಾ ಯೋಜನೆಗಳ ಪ್ರಕಾರ ಶಿಕ್ಷಣ ಇಲಾಖೆಯ ಮೂಲಕ ಕ್ರಮ ಜರುಗಿಸಲು ತಲಾ ಒಂದು ವಿಶ್ವವಿದ್ಯಾನಿಲಯಕ್ಕೆ ರೂ. 2.00 ಕೋಟಿಯಂತೆ ಒಟ್ಟು ರೂ. 22.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : ದಿನಾಂಕ : 15–06–2010ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯ ಸಂಖ್ಯೆ : ಸಿ 267/2010.

ಪ್ರಸ್ತಾವನೆ :

ಕನ್ನಡ ಸರ್ವಾಂಗೀಣ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ರೂ. 25.00 ಕೋಟಿಗಳ ವಿಶೇಷ ಅನುದಾನ ನೀಡಲಿದೆ ಎಂದು ಮಾನ್ಯ ಮುಖ್ಯಮಂತ್ರಿಯವರು ದಿನಾಂಕ : 01–11–2008ರಂದು ನಡೆದ ಕನ್ನಡ ರಾಜ್ಯೋತ್ಸವ ದಿನದಂದು ಪ್ರಕಟಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ರೂ. 25.00 ಕೋಟಿಗಳ ವೆಚ್ಚದಲ್ಲಿ ಈ ಕೆಳಕಂಡ ಹೊಸ ಯೋಜನೆಗಳನ್ನು ಕೈಗೊಳ್ಳಲು ಉದ್ದೇಶಿಸಿ ಸಚಿವ ಸಂಪುಟದ ಅನುಮೋದನೆಯನ್ನು ಕೋರಲಾಗಿತ್ತು.

1. ಕನ್ನಡ ತಂತ್ರಾಂಶ ಅಭಿವೃದ್ಧಿಗೆ ತಜ್ಞರ ಸಮಿತಿ ರಚಿಸಿದ್ದು ಅದಕ್ಕೆ ನೀಡಲಾಗುವ ಅನುದಾನವನ್ನು ರೂ. 1.00 ಕೋಟಿಯಿಂದ ರೂ. 2.00 ಕೋಟಿಗಳಿಗೆ ಹೆಚ್ಚಿಸಿ ಅನುದಾನ ಬಿಡುಗಡೆ ಮಾಡುವುದು.
2. ಕನ್ನಡ ಮಾಧ್ಯಮದಲ್ಲಿ ಐ.ಎ.ಎಸ್. ಐ.ಪಿ.ಎಸ್. ಹಾಗೂ ಭಾರತೀಯ ವಿದೇಶಿ ಸೇವೆಗಳ ಹುದ್ದೆಗಳಿಗೆ ಕನ್ನಡದಲ್ಲಿ ಆಯ್ಕೆ ಪರೀಕ್ಷೆ ಬರೆದು ಉತ್ತೀರ್ಣರಾಗಿ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ರೂ. 1.00ಲಕ್ಷ ಹಾಗೂ ಇತರೆ ಕೇಂದ್ರಾಡಳಿತ ಸೇವೆಗಳಿಗೆ ಕನ್ನಡದಲ್ಲಿ ಆಯ್ಕೆ ಪರೀಕ್ಷೆ ಬರೆದು ಉತ್ತೀರ್ಣರಾಗುವ ಅಭ್ಯರ್ಥಿಗಳಿಗೆ ರೂ. 50,000/– ಬಹುಮಾನ ನೀಡುವುದಕ್ಕಾಗಿ ರೂ. 1.00 ಕೋಟಿ ಅನುದಾನವನ್ನು ಬಿಡುಗಡೆ ಮಾಡುವುದು.
3. ಕರ್ನಾಟಕ ರಾಜ್ಯದಲ್ಲಿರುವ ಎಲ್ಲಾ 11 ವಿಶ್ವವಿದ್ಯಾನಿಲಯಗಳಲ್ಲಿ (ಅನುಬಂಧದಲ್ಲಿರುವ) ಕನ್ನಡ ಭಾಷೆಯ ಅಭಿವೃದ್ಧಿಗಾಗಿ ಆಯಾ ವಿಶ್ವವಿದ್ಯಾನಿಲಯಗಳಿಂದ ಪಡೆದ ಕ್ರಿಯಾ ಯೋಜನೆಗಳ ಪ್ರಕಾರ ಶಿಕ್ಷಣ ಇಲಾಖೆಯ ಮೂಲಕ ಕ್ರಮ ಜರುಗಿಸಲು ತಲಾ ಒಂದು ವಿಶ್ವವಿದ್ಯಾನಿಲಯಕ್ಕೆ ರೂ. 2.00 ಕೋಟಿಯಂತೆ ಒಟ್ಟು ರೂ. 22.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವುದು.

ಮೇಲೆ ಓದಲಾದ ದಿನಾಂಕ : 15–06–2010ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮೇಲ್ಕಾಣಿಸಿದ 3 ಹೊಸ ಯೋಜನೆಗಳನ್ನು ಕೈಗೊಳ್ಳಲು ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ.

ಕರ್ನಾಟಕ ರಾಜ್ಯದಲ್ಲಿರುವ ಎಲ್ಲಾ 11 ವಿಶ್ವವಿದ್ಯಾನಿಲಯಗಳಲ್ಲಿ (ಅನುಬಂಧದಲ್ಲಿರುವ) ಕನ್ನಡ ಭಾಷೆಯ ಅಭಿವೃದ್ಧಿಗಾಗಿ ಆಯಾ ವಿಶ್ವವಿದ್ಯಾನಿಲಯಗಳಿಂದ ಪಡೆದ ಕ್ರಿಯಾ ಯೋಜನೆಗಳ ಪ್ರಕಾರ ಶಿಕ್ಷಣ ಇಲಾಖೆಯ ಮೂಲಕ ಕ್ರಮ

ಜರುಗಿಸಲು ತಲಾ ಒಂದು ವಿಶ್ವವಿದ್ಯಾಲಯಕ್ಕೆ ರೂ. 2.00 ಕೋಟಿಯಂತೆ ಒಟ್ಟು ರೂ. 22.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 131(3)ಕಸನಿ 2008, ಬೆಂಗಳೂರು, ದಿನಾಂಕ : 1ನೇ ಜುಲೈ, 2010

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಅನುಬಂಧದಲ್ಲಿ ನಮೂದಿಸಿದ ಕರ್ನಾಟಕ ರಾಜ್ಯದಲ್ಲಿರುವ 11 ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಭಾಷೆಯ ಅಭಿವೃದ್ಧಿಗಾಗಿ ಆಯಾ ವಿಶ್ವವಿದ್ಯಾಲಯಗಳಿಂದ ಪಡೆದ ಕ್ರಿಯಾ ಯೋಜನೆಗಳ ಪ್ರಕಾರ ಶಿಕ್ಷಣ ಇಲಾಖೆಯ ಮೂಲಕ ಕ್ರಮ ಜರುಗಿಸಲು ತಲಾ ಒಂದು ವಿಶ್ವವಿದ್ಯಾಲಯಕ್ಕೆ ರೂ. 2.00 ಕೋಟಿಯಂತೆ ಒಟ್ಟು ರೂ. 22.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಕೆ. ಭರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ರಾಜ್ಯದ ವಿವಿಧ 11 ವಿಶ್ವವಿದ್ಯಾಲಯಗಳು ಕನ್ನಢ ಭಾಷೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಸಲ್ಲಿಸಿರುವ ಕ್ರಿಯಾ ಯೋಜನೆಗಳ ವಿವರಗಳು

1. ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು

➢ ಕರ್ನಾಟಕ ಅರಸು ಮನೆತನದ ಶಾಸನ ಸಂಪುಟಗಳು ಪ್ರಾಚೀನ ಕನ್ನಡ ಹಸ್ತಪ್ರತಿಗಳ ಸಂರಕ್ಷಣೆ, ದಾಖಲೀಕರಣ ಮತ್ತು ಗಣಕೀಕರಣ ➢ ಕನ್ನಡ ವಿಶ್ವಕೋಶಗಳಲ್ಲಿ ಪ್ರಕಟವಾದ ಲೇಖನಗಳ ವಿಷಯವಾರು ಗ್ರಂಥಗಳ ಪ್ರಕಟಣೆ ➢ ಕನ್ನಡ ವಿಷಯ ವಿಶ್ವಕೋಶ ಕರ್ನಾಟಕ ಸಂಪುಟದ ಅನುವಾದ ➢ ಸಾಹಿತ್ಯ ಚಿಂತನೆಗಳ ಪಾರಿಭಾಷಿಕ ಪದ ವಿವರಣಾ ಕೋಶ ➢ ಕನ್ನಡದಲ್ಲಿ ಅನ್ಯಭಾಷಿಕ ಪದಗಳ ನಿಷ್ಪತ್ತಿಯ ಕೋಶ	ರೂ. 200.00 ಲಕ್ಷಗಳು

2. ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು

➢ ಪರಿಸರ ಭಾಷೆಗಳ ಅಧ್ಯಯನ ➢ ದಕ್ಷಿಣ ಕನ್ನಡ, ಉಡುಪಿ ಮತ್ತು ಕೊಡಗು ಜಿಲ್ಲೆಗಳ ಗೆಜೆಟಿಯರ್ ರಚಿಸುವುದು ➢ ದಕ್ಷಿಣ ಕನ್ನಡ, ಉಡುಪಿ ಮತ್ತು ಕೊಡಗು ಜಿಲ್ಲೆಗಳ ಆರಾಧನೆಗಳು ➢ ವಿಚಾರ ಸಂಕೀರಣ ಮತ್ತು ಪ್ರಕಟಣೆಗಳು ➢ ಕಂಪ್ಯೂಟರ್ ಮತ್ತು ಸಿಡಿ ಲೈಬ್ರರಿ	ರೂ. 200.00 ಲಕ್ಷಗಳು

3. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು

➢ ಕನ್ನಡದಲ್ಲಿ ಆನ್‌ಲೈನ್ ಶಿಕ್ಷಣ ➢ ಕನ್ನಡದಲ್ಲಿ ದೃಶ್ಯ ಶ್ರವ್ಯ ಸಾಮಗ್ರಿಗಳ ನಿರ್ಮಾಣ ➢ ಜನಪ್ರಿಯ ಕರ್ನಾಟಕ ಮಾಲೆ ಮೈಸೂರು ದರ್ಶನ ವಿಶ್ವಕೋಶ ➢ ಕನ್ನಡ ನಾಡು ನುಡಿ ಚಿಂತನೆ–ಶತಮಾನೋತ್ಸವ ಸಾಹಿತಿಗಳ ಸಾಧನೆ ➢ ಶಿಕ್ಷಣ ಶಾಸ್ತ್ರ ವಿಷಯ ವಿಶ್ವಕೋಶ ➢ ವಿಶೇಷ ಬಿ.ಎಡ್./ಸಾಮಾನ್ಯ ಬಿ.ಎಡ್. ವಿದ್ಯಾರ್ಥಿಗಳಿಗೆ ದೂರ ಶಿಕ್ಷಣ ಕ್ರಮದ ಪಠ್ಯಗಳನ್ನು ಸಿ.ಡಿ ಮುಖಾಂತರ ಒದಗಿಸುವುದು. ➢ ಉರ್ದು ಭಾಷಿಕ ವಿದ್ಯಾರ್ಥಿಗಳ ಕನ್ನಡ ಕಲಿಕೆ	ರೂ. 200.00 ಲಕ್ಷಗಳು

4. ಕನ್ನಡ ವಿಶ್ವವಿದ್ಯಾನಿಲಯ, ಹಂಪಿ ➢ ಕನ್ನಡ ಭಾಷಾ ಬಳಕೆ – ಸಮಸ್ಯೆ ಮತ್ತು ಸಾಧ್ಯತೆ ➢ ಕನ್ನಡದಲ್ಲಿ ನಾಮ ಫಲಕಗಳ ಅಧಿಕೃತ ರೂಪ ➢ ಕನ್ನಡ ದೇಸಿ ಪರಂಪರೆ (ಪ್ರಾಚೀನ–ಮಧ್ಯಕಾಲೀನ–ಸಮಕಾಲಿನ)	ರೂ. 200.00 ಲಕ್ಷಗಳು
5. ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ➢ ತುಮಕೂರು ಜಿಲ್ಲಾ ಪರಂಪರೆ ಮತ್ತು ಐತಿಹಾಸಿಕ ಸಮೀಕ್ಷೆ ಅಧ್ಯಯನ ➢ ಜಿಲ್ಲೆಯ ಕನ್ನಡ ಭಾಷೆ ಮಧ್ಯಕಾಲೀನ ಸಾಹಿತ್ಯ ಸಂಸ್ಕೃತಿ ಮತ್ತು ಶಾಸನಗಳ ಸಾಂಸ್ಕೃತಿಕ ಅಧ್ಯಯನ ➢ ಜಿಲ್ಲೆಯ ಸ್ಥಳ ನಾಮಗಳು ಮತ್ತು ಗಡಿನಾಡ ಭಾಷೆಯನ್ನು ಕುರಿತ ಅಧ್ಯಯನ ➢ ಚರಿತ್ರೆಯ ಸಂಪುಟಗಳು ಮತ್ತು ವಿವಿಧ ಜ್ಞಾನ ಶಿಸ್ತುಗಳ ಪಠ್ಯಗಳ ಕನ್ನಡ ಭಾಷಾಂತರ ➢ ಕನ್ನಡ ಆಕಾರ ಗ್ರಂಥಾಲಯ ಹಾಗೂ ಕಂಪ್ಯೂಟರ್ ಮಾಹಿತಿ ಕೇಂದ್ರ ➢ ಚಾರಿತ್ರಿಕ ಜಾನಪದ ಮತ್ತು ಹಸ್ತ ಪ್ರತಿಗಳ ವಸ್ತು ಸಂಗ್ರಹಾಲಯ ಸ್ಥಾಪನೆ ➢ ಗ್ರಾಮದೇವತೆಗಳ ಆಚರಣೆಗಳ, ಕಲೆಗಳ ಅಧ್ಯಯನ ಮತ್ತು ದಾಖಲಾತಿ ➢ ಜಿಲ್ಲೆಯ ಪಾಳೇಗಾರರ ಮನೆತನಗಳ ಹಾಗೂ ಶೂದ್ರ ನೆಲೆಗಟ್ಟುಗಳ ಅಧ್ಯಯನ ➢ ಧಾರ್ಮಿಕ – ಸಾಂಸ್ಕೃತಿಕ ಕೇಂದ್ರಗಳ ಸಮೀಕ್ಷೆ/ಸಾಂಸ್ಕೃತಿಕ ನಾಯಕರ ಕುರಿತು ಕೃತಿ ಪ್ರಕಟಣೆ ಅ) ವಿಸ್ತರಣಾ ಕಾರ್ಯಕ್ರಮಗಳು (ಎಕ್ಸ್ ಟೆಕ್ಷನ್ ಪ್ರೋಗ್ರಾಮ್ಸ್). ಆ) ವಾರ್ಷಿಕ ಪ್ರಶಸ್ತಿಗಳು ಇ) ಯೋಜನೆಗೆ ಮಾನವ ಸಂಪನ್ಮೂಲ ಈ) ಯೋಜನೆಗೆ ಭೌತಿಕ ಸಂಪನ್ಮೂಲ	ರೂ. 200.00 ಲಕ್ಷಗಳು
6. ಕುವೆಂಪು ವಿಶ್ವವಿದ್ಯಾನಿಲಯ, ಶಿವಮೊಗ್ಗ ➢ ಕುವೆಂಪು ಸಾಹಿತ್ಯ ಪದಕೋಶ (ಆರು ಸಂಪುಟಗಳ ಮುದ್ರಣ) ➢ ಬುಡಕಟ್ಟುಗಳ ದಾಖಲಾತಿ ಮತ್ತು ಅಧ್ಯಯನ (ಕುವೆಂಪು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಜಿಲ್ಲೆಗಳು ಸೇರಿ)	ರೂ. 200.00 ಲಕ್ಷಗಳು
7. ಗುಲಬರ್ಗಾ ವಿಶ್ವವಿದ್ಯಾನಿಲಯ, ಗುಲಬರ್ಗಾ ➢ ಹಸ್ತಪ್ರತಿ ಸಂಗ್ರಹಾಲಯ ➢ ಶರಣ ಸ್ಮಾರಕಗಳ ಕ್ಷೇತ್ರಕಾರ್ಯ ಯೋಜನೆ ➢ ಹೈದ್ರಾಬಾದ್ ಕರ್ನಾಟಕ ಸಾಹಿತ್ಯ ಚರಿತ್ರೆ ➢ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಭಕ್ತಿ ಸಾಹಿತ್ಯ ➢ ಹೈದ್ರಾಬಾದ್ ಕರ್ನಾಟಕದ ಸಾಂಸ್ಕೃತಿಕ ಕೋಶ ➢ ರಂಗಪರಿಕರ/ರಂಗೋತ್ಸವ	ರೂ. 200.00 ಲಕ್ಷಗಳು
8. ಮಹಿಳಾ ವಿಶ್ವವಿದ್ಯಾನಿಲಯ, ಬಿಜಾಪುರ ➢ ಆಧುನಿಕ ಮಹಿಳಾ ಸಾಹಿತ್ಯ ಚರಿತ್ರೆ ➢ ಮಹಿಳಾ ಸಂಸ್ಕೃತಿ ಕೋಶ ➢ ನಮ್ಮ ಮಹಿಳೆ ನಮ್ಮ ಹೆಮ್ಮೆ ➢ ಸಂಕೀರ್ಣ ಸಂಕಲನಗಳು (8 ಕೃತಿಗಳು) ➢ ಪುಸ್ತಕ ಖರೀದಿ	ರೂ. 200.00 ಲಕ್ಷಗಳು

- ಕಛೇರಿ ನಿರ್ವಹಣೆ (ಸಿಬ್ಬಂದಿ ಸಂಬಳ)
- ಸಾಧನ ಸಲಕರಣೆಗಳು
- ಸಭೆಗಳು ಮತ್ತು ತರಬೇತಿಗಳು
- ಸಾದಿಲ್ವಾರು
- ಮಹಿಳಾ ಸಂಸ್ಕೃತಿ ವಸ್ತು ಸಂಗ್ರಹಾಲಯ

9. ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು

- ಹಸ್ತಪ್ರತಿ ಮುದ್ರಣ, ಸಂರಕ್ಷಣೆ ಪ್ರದರ್ಶನ ಮತ್ತು ವಿಚಾರ ಗೋಷ್ಠಿ ಏರ್ಪಡಿಸಲು
- ಆಧುನಿಕ ಸಾಹಿತ್ಯ ಮತ್ತು ಸಂಸ್ಕೃತಿ ಅಧ್ಯಯನ ಪುಸ್ತಕ ಪ್ರಕಟಣೆ — ರೂ. 200.00 ಲಕ್ಷಗಳು
- ಬೆಂಗಳೂರು ಮತ್ತು ಕೋಲಾರ ಜಿಲ್ಲೆಯ ಜಾನಪದ ಆಚರಣೆಗಳ ದಾಖಲೀಕರಣ ಮತ್ತು ಪ್ರಕಟಣೆ
- ಸಮಗ್ರ ಕನ್ನಡ ಸಾಹಿತ್ಯ ಚರಿತ್ರೆಯ ಪರಿಷ್ಕೃತ ಮುದ್ರಣ ಪ್ರಕಟಣೆಗೆ ತಗಲುವ ವೆಚ್ಚ

10. ಕರ್ನಾಟಕ ವಿಶ್ವವಿದ್ಯಾನಿಲಯ, ಧಾರವಾಡ

- ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಪ್ರಕಟಣೆ — ರೂ. 200.00 ಲಕ್ಷಗಳು
- ಭಾಷಾ ವಿಜ್ಞಾನ ಮತ್ತು ಭಾಷಾಂತರ – ಧಾರವಾಡ ಜಿಲ್ಲೆ ಹಾಗೂ ಸಾಮಾಜಿಕ ಉಪಭಾಷೆಗಳ ಬಗ್ಗೆ ಪರಿವೀಕ್ಷಣೆ

11. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ, ಬೆಳಗಾಂ

- ಕನ್ನಡ ಭಾಷೆ ಹಾಗೂ ಸಾಹಿತ್ಯದ ಸೃಜನಾತ್ಮಕ ಪ್ರಚಾರೋಪನ್ಯಾಸಗಳನ್ನು ಏರ್ಪಡಿಸುವುದು
- ತಾಂತ್ರಿಕ ಮಹಾವಿದ್ಯಾಲಯಗಳ ಬೋಧಕ ಸಿಬ್ಬಂದಿಗಳಿಗೆ ಕಾರ್ಯಗಾರ ಹಮ್ಮಿಕೊಂಡು ಬೌದ್ಧಿಕ ಅರಿವನ್ನು ಹೆಚ್ಚಿಸುವುದು
- ಜನಪ್ರಿಯ ತಾಂತ್ರಿಕ ಶಿಕ್ಷಣ ಮಾಲೆ ಕಿರುಹೊತ್ತಿಗೆಗಳ ಪ್ರಕಟಣೆಗೆ
- ತಜ್ಞ ವಿಷಯದ ಬಗ್ಗೆ ಪರಿಣಿತರಿಂದ ತಾಂತ್ರಿಕ ಕೃತಿಗಳನ್ನು ಬರೆಸಿ ಪ್ರಕಟಿಸುವುದು
- ತಂತ್ರಜ್ಞಾನದ ತಾಂತ್ರಿಕ ಪದಕೋಶಗಳ ರಚನೆ (Technicial Glossary)
- ಕನ್ನಡ ಅಭಿವೃದ್ಧಗಾಗಿ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸಲಹಾ ಸಮಿತಿ ರಚಿಸುವುದು
- ವಿಶ್ವವಿದ್ಯಾನಿಲಯದಲ್ಲಿ ಪ್ರಸಾರಂಗವನ್ನು ಸ್ಥಾಪಿಸುವುದು
- ಜನಸಾಮಾನ್ಯರಿಗೆ ಉಪಯುಕ್ತವಾಗುವ ತಾಂತ್ರಿಕ ಪುಸ್ತಕಗಳನ್ನು ಕನ್ನಡ ಭಾಷೆಗೆ ಅನುವಾದಿಸಿ ಹೊರಡಿಸುವುದು
- ತಾಂತ್ರಿಕ ಬೋಧನೆಗಾಗಿ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಿ ಅಂತರ್ಜಾಲದ ಮೂಲಕ ತಲುಪುವಂತೆ ಅನುಷ್ಠಾನಗೊಳಿಸುವುದು
- ಕನ್ನಡ ಭಾಷಾ ತಂತ್ರಾಂಶ ಅಭಿವೃದ್ಧಿಪಡಿಸಿ ಅನುಷ್ಠಾನಗೊಳಿಸುವುದು — ರೂ. 200.00 ಲಕ್ಷಗಳು
- ಕನ್ನಡ ಭಾಷೆಯ ಪ್ರಯೋಗಾಲಯ ಸ್ಥಾಪನೆ
- ಕನ್ನಡಕ್ಕೆ ಸಂಬಂಧಿಸಿದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸುವುದು
- ಸ್ವಯಂ ತರಬೇತಿಗಾಗಿ ಬೇಕಾಗುವ (ಕನ್ನಡದಲ್ಲಿ) ಸಿ.ಡಿ ಮತ್ತು ಇತರೆ ಮಾದ್ಯಮಗಳಿಗೆ
- ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದೊಂದಿಗೆ ಸಂಯೋಜನೆ ಹೊಂದಿರುವ ತಾಂತ್ರಿಕ

ಮಹಾವಿದ್ಯಾಲಯದಲ್ಲಿ ಕನ್ನಡದ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಪ್ರೋತ್ಸಾಹ ಧನ ನೀಡುವುದು. ➢ ವಿಶ್ವವಿದ್ಯಾಲಯದ ಮಟ್ಟದಲ್ಲಿ ಕನ್ನಡ ಸಂಶೋಧನಾ ಅಧ್ಯಯನ ಪೀಠ ಸ್ಥಾಪನೆ ➢ ಸಂಪನ್ಮೂಲ ವ್ಯಕ್ತಿಗಳಿಂದ ಪ್ರೌಢಶಾಲೆಗಳಲ್ಲಿ ಶಿಬಿರಗಳನ್ನು ಏರ್ಪಡಿಸಿ ವಿದ್ಯಾರ್ಥಿಗಳಲ್ಲಿ ತಾಂತ್ರಿಕ ಅರಿವನ್ನು ಮೂಡಿಸುವುದು ➢ ತಾಂತ್ರಿಕ ಮಹಾ ವಿದ್ಯಾಲಯಗಳಲ್ಲಿ ಕನ್ನಡ ಮತ್ತು ಕನ್ನಡೇತರ ವಿದ್ಯಾರ್ಥಿಗಳಿಗೆ ನಾಡು, ನುಡಿಯ ಸೊಗಡುಗಳನ್ನೊಳಗೊಂಡಿರುವ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಂಡು ಆ ಮೂಲಕ ಪ್ರೋತ್ಸಾಹದಾಯಕ ಪ್ರಶಸ್ತಿಗಳನ್ನು ನೀಡುವ, ಭಾಷಾಭಿಮಾನ ಹೊರಹೊಮ್ಮುವಂತೆ ಮಾಡುವುದು.	
	ಒಟ್ಟು : ರೂ.22.00 ಕೋಟಿ

ಪಿ.ಆರ್. 1764

INFRASTRUCTURE DEVELOPMENT SECRETARIAT

SUBJECT :- Development of SH-132 on DBOT basis constitution of Tender Scrutiny Committee

REF :- 1. The Karnataka Transparency in Public Procurement Rules 2000
2. G.O.No. ID 115 ITS 2008 dt. 17-07-2009

PREAMBLE:

In the G.O. dt. 17-07-2009 read at Sl. No. (2) above, sanction has been accorded in principle to take up the development of part of State Highway-132 (Bellary – Moka road) PPP mode.

As per the said Government order, Karnataka State Highways improvement Project (KSHIP) has been nominated as the nodal agency to undertake the procurement activities has been made vide publicity for development of the said road at Bellary through the National/ Local dailies indicating the schedule of bidding as hereunder :

i. Bid due date – 26-06-2010 by 1600 hour IST
ii. Technical Bid opening date – 30-06-2010 by 1100 hours IST

In terms of Karnataka Transpurency in Public Procurement Rules 2000, the tender accepting authority is required to appoint the "Tender Scrutiny Committee" for undertaking task of tender opening and tender evaluation. Accordingly, it is proposed to constitute a Tender Scrutiny Committee as required under the KTPP Act. Hence this order.

GOVERNMENT ORDER NO. IDD 115 ITS 2008 BANGALORE, DATED : 25-06-2010

In the circumstances, explained in the preamble, a Tender Scrutiny Committee (TSC) is constituted to undertake the scrutiny of tenders with the following members :

i. Shri K.L. Lokanatha - Director PPP cell vikasa Soudha Bangalore
ii. Shri K.S. Krishna Reddy – Chief Project Officer PIU KSHIP Bangalore
iii. Shri S. Kinni – Executive Engineer PIU KSHIP Bangalore
iv. Shri B.S. Ingalalli Executive Engineer PWP IWT division Bellary
v. Shri Rabindra Sahu – PPP Expert PPP cell

2. The Tender Scrutiny Committee shall carry out scrutiny of the tenders strictly in accordance with evaluation criteria indicated in RFQ document and in accordance with the provisions contained in the KTPP Act and rules.

3. The Tender scrutiny committee will seal and witness all the bids received in physical mode and open the same publicly on the due dates.

4. The Tender Scrutiny Committee shall ensure the confidentiality of the process of tender evaluation.

By Order and in the name of the Governor of Karnataka
R. Shivalingaiah
Under Secretary to Govt, PPP Cell,
Infrastructure Development Department.

P.R. 1765

ಕಂದಾಯ ಸಚಿವಾಲಯ

ತಿದ್ದುಪಡಿ

ಸಂಖ್ಯೆ : ಕಂಇ 47 ಆರ್.ಇ.ಹೆಚ್. 2009, ಬೆಂಗಳೂರು, ದಿನಾಂಕ : 17–06–2010

ವಿಷಯ : ಶಿವಮೊಗ್ಗ ಜಿಲ್ಲೆಯಲ್ಲಿನ ತುಂಗಾ ಮೇಲ್ದಂಡೆ ಯೋಜನೆ ಮತ್ತು ದಂಡಾವತಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಸಲಹಾ ಸಮಿತಿಯನ್ನು ಪುನರ್ ರಚನೆ ಮಾಡುವ ಬಗ್ಗೆ

ಓದಲಾಗಿದೆ : 1. ಸರ್ಕಾರಿ ಆದೇಶದ ಸಂಖ್ಯೆ : ಕಂಇ 47 ಆರ್.ಇ.ಹೆಚ್. 2009 ದಿನಾಂಕ : 28–02–2009

ಮೇಲೆ ಓದಲಾದ ದಿನಾಂಕ : 28–02–2009ರ ಸರ್ಕಾರಿ ಆದೇಶದಲ್ಲಿ ಆದೇಶ ಭಾಗದ ಕ್ರಮಸಂಖ್ಯೆ : 4 ಮತ್ತು ಕ್ರಮ ಸಂಖ್ಯೆ : 5ರಲ್ಲಿನ ಸದಸ್ಯರುಗಳ ಬದಲಿಗೆ ಈ ಕೆಳಕಂಡವರನ್ನು ಅಧಿಕಾರೇತರ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ಕ್ರಮಸಂಖ್ಯೆ 4 : ಶ್ರೀ ಬಿ.ವೈ. ರಾಘವೇಂದ್ರ ಲೋಕಸಭಾ ಸದಸ್ಯರು, ಶಿವಮೊಗ್ಗ ಲೋಕಸಭಾ ಕ್ಷೇತ್ರ

ಕ್ರಮಸಂಖ್ಯೆ 5 : ಶ್ರೀ ಡಿ.ವಿ. ಸದಾನಂದಗೌಡ, ಲೋಕಸಭಾ ಸದಸ್ಯರು, ಚಿಕ್ಕಮಗಳೂರು–ಉಡುಪಿ, ಲೋಕಸಭಾ ಕ್ಷೇತ್ರ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವೆಂಕಟೇಶ ಮೂರ್ತಿ
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂಸ್ವಾ–2 ಮತ್ತು ಪುನರ್ವಸತಿ)

ಪಿ.ಆರ್. 1766

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ಸೇರ್ಪಡೆ (Addendum)

ಸಂಖ್ಯೆ : ಸಿಆಸುಇ 452 ಎಸ್ಇಎನ್ 2006, ಬೆಂಗಳೂರು, ದಿನಾಂಕ : 3–7–2010

ಉಲ್ಲೇಖ : ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 452 ಎಸ್ಇಎನ್ 2006 ದಿನಾಂಕ : 4ನೇ ಜುಲೈ 2007

ಮಾನ್ಯ ಲೋಕಾಯುಕ್ತರ ಕಛೇರಿಯಿಂದ ದಿನಾಂಕ : 28–11–2006ರ ಎರಡು ಪತ್ರಗಳಲ್ಲಿ ಲೋಕಾಯುಕ್ತ ಕಾಯಿದೆ ಕಲಂ 12(3)ರಡಿ ಅಂದಿನ ಸರ್ಕಾರಿ ಮುದ್ರಣಾಲಯದ ನಿರ್ದೇಶಕರಾಗಿದ್ದ ಶ್ರೀ ಹೆಚ್. ಗಂಗಯ್ಯ ಅವರ ವಿರುದ್ಧ ಮಾಡಲಾದ ದೂರುಗಳ ಬಗ್ಗೆ ತನಿಖಾ ವರದಿಗಳು ಸ್ವೀಕೃತವಾಗಿದ್ದು, ಈ ಎರಡೂ ಪತ್ರಗಳಲ್ಲಿನ ವರದಿಯು ಪ್ರತ್ಯೇಕ ಪ್ರಕರಣಗಳಿಗೆ ಸಂಬಂಧಪಟ್ಟದ್ದಾಗಿರುತ್ತವೆ.

ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ಪ್ರಮಾಧವಶಾತ್ ಕಣ್ತಪ್ಪಿನಿಂದ ಒಂದು ಪ್ರಕರಣವನ್ನು ಮಾತ್ರ ಅಂದರೆ No. Compt./Lok/BCD-149/99-2000/ARE-5 ಪ್ರಕರಣವನ್ನು ಮಾತ್ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು, 1957ರ ನಿಯಮ 14–ಎರ ಅನ್ವಯ ಮುಂದಿನ ವಿಚಾರಣೆಗೆ ಮಾನ್ಯ ಲೋಕಾಯುಕ್ತರಿಗೆ ವಹಿಸಲಾಗಿತ್ತು. ಆದ್ದರಿಂದ ಈ ಸೇರ್ಪಡೆ ಆದೇಶವನ್ನು ಹೊರಡಿಸಲಾಗಿದೆ.

ಉಲ್ಲೇಖಿತ ಸರ್ಕಾರಿ ಆದೇಶದ ಓದಲಾಗಿದೆ ಅಂಕಣದಲ್ಲಿ ಈ ಕೆಳಕಂಡ ಉಲ್ಲೇಖವನ್ನು ಸಹ ಸೇರ್ಪಡಿಸಿ ಓದಿ ಕೊಳ್ಳುವುದು.

No. Compt./Lok/BCD-127/97-98/ARE-5

ದಿನಾಂಕ : 28–11–2006

ಅದೇ ರೀತಿ ಉಲ್ಲೇಖಿತ ಆದೇಶದ ಪ್ರಸ್ತಾವನೆಯ 1ನೇ ಕಂಡಿಕೆಯ ಕೆಳಗೆ ಈ ಕೆಳಕಂಡ ಕಂಡಿಕೆಯನ್ನು ಸೇರ್ಪಡಿಸಿ ಓದಿಕೊಳ್ಳುವುದು.

ಶ್ರೀ ಮಲ್ಲಿಕಾರ್ಜುನಯ್ಯ ಎಂಬುವರು ಲೋಕಾಯುಕ್ತರಿಗೆ ನೀಡಿದ ದೂರಿನಲ್ಲಿ ಶ್ರೀ ಹೆಚ್. ಗಂಗಯ್ಯ, ಅಂದಿನ ನಿರ್ದೇಶಕರು, ಮುದ್ರಣ, ಲೇಖನ ಸಾಮಾಗ್ರಿ ಮತ್ತು ಪ್ರಕಟಣೆಗಳ ಇಲಾಖೆ ಇವರು ಅನಾವಶ್ಯಕವಾಗಿ ರೂ. 50,000/–ಗಳ

ಮೊತ್ತದ ಎ.ಸಿ. ಬಿಲ್ ಡ್ರಾ ಮಾಡಿರುವ ದುರ್ನಡತೆ ಕುರಿತಂತೆ ಮಾನ್ಯ ಲೋಕಾಯುಕ್ತರ ಕಛೇರಿಯ ಪತ್ರ ಸಂಖ್ಯೆ : **No. Compt./Lok/BCD-127/97-98/ARE-5** ದಿನಾಂಕ : 28–11–2006ರಲ್ಲಿ ಕರ್ನಾಟಕ ಲೋಕಾಯುಕ್ತ ಕಲಂ 12(3)ರಡಿಯಲ್ಲಿ ತನಿಖಾ ವರದಿಯನ್ನು ಸಲ್ಲಿಸಿ ಮುಂದಿನ ಕ್ರಮ ಕೈಗೊಂಡು ಸರ್ಕಾರದ ನಿರ್ಣಯವನ್ನು ತಿಳಿಸುವಂತೆ ಕೋರಿದ್ದಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ. ವಾಸುದೇವ ಮೂರ್ತಿ

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1767

ಸಿ.ಆ.ಸು. ಇಲಾಖೆ (ಸೇವೆಗಳು–3)

ENERGY SECRETARIAT

ADDENDUM

NO. EN 67 PSR 2009, BANGALORE, DATED : 31-03-2010

In Government Order No. EN 67 PSR 2009 dated : 01-03-2010, after para-2 of the order portion, the following shall be included as para-3.

"The Principal Accountant General (A&E) is requested to carryout the book adjustments in the books of State for the year 2009-10 by debit to 4801-01-190-0-01-211- Investment in Power Utility, per contra credit to 6801-00-800-1-01-294."

In view of the above, the exisisting para-3 of the Order portion in G.O. No. EN 67 PSR 2009 dated 01-03-2010 shall be read as para-4.

Consequent to the above, the Addendum bearing No. EN 67 PSR 2009 dated : 31-03-2010 and Corrigendum bearing No. EN 67 PSR 2009 dated 17-06-2010 are withdrawn.

By Order and in the name of the Governor of Karnataka

S.J. Sampath Kumar

P.R. 1768

Under Secretary to Govt.

Energy Department.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ತಿದ್ದೋಲೆ

ಸಂಖ್ಯೆ : ಸಿಆಸುಇ 29 ಸೇ ಉನ್ಯಾ 2010 ಬೆಂಗಳೂರು, ದಿನಾಂಕ : 30–06–2010

ವಿಷಯ : ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರ ಗೃಹ ಕಛೇರಿಗಳಿಗೆ ಯು.ಪಿ.ಎಸ್.ಗಳನ್ನು ಖರೀದಿಸುವ ಬಗ್ಗೆ.

*****

ಸರ್ಕಾರದ ಆದೇಶ ಸಂ : ಸಿಆಸುಇ 29 ಸೇಉನ್ಯಾ 2010, ದಿನಾಂಕ : 02–06–2010ರ ಆದೇಶದ ಭಾಗದಲ್ಲಿರುವ ಕಂಡಿಕೆ 2ರಲ್ಲಿ ನಮೂದಿಸಿರುವ ಲೆಕ್ಕ ಶೀರ್ಷಿಕೆ "2014–00–102–0–08–180" ಅನ್ನು "2014–00–102–0–02–180" ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ. ವಾಸುದೇವ ಮೂರ್ತಿ

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1769

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವೆಗಳು–3)

ENERGY SECRETARIAT

CORRIGENDUM

NO. EN 126 PPC 2008, BANGALORE, DATED : 26-06-2010

In the Order portion of the Government Order No : EN 126 PPC 2008 dated : 16-06-2010, THE Head of Account appearing in the Order portion as" 4801-01-190-0-09-211" **shall be read as "4801-01-190-0-09-211 (Plan)"**

By Order and in the name of the Governor of Karnataka

S.J. Sampath Kumar

Under Secretary to Govt

Energy Department.

P.R. 1770

ಉನ್ನತ ಶಿಕ್ಷಣ ಸಚಿವಾಲಯ

ವಿಷಯ : ರಾಜ್ಯದಲ್ಲಿನ ಶಿಕ್ಷಕರ ತರಬೇತಿ ಮಹಾವಿದ್ಯಾಲಯಗಳ ಸ್ಥಿತಿಗತಿಗಳ ಅಧ್ಯಯನ ವರದಿ ಸಲ್ಲಿಸುವ ಬಗ್ಗೆ ರಚಿಸಿರುವ ಸಮಿತಿಗೆ ಸಹ ಸದಸ್ಯರನ್ನು ನೇಮಿಸುವ ಕುರಿತು.

ಓದಲಾಗಿದೆ : 1. ಸರ್ಕಾರಿ ಆದೇಶದ ಸಂಖ್ಯೆ : ಇಡಿ 80 ಯುಎನ್ಇ 2009, ದಿನಾಂಕ : 17–08–2009.

2. ಬಿ.ಇಡಿ. ಕಾಲೇಜುಗಳ ಅಧ್ಯಯನ ಸಮಿತಿ ಅಧ್ಯಕ್ಷರ ದಿನಾಂಕ : 09–10–2009ರ ಪತ್ರ.

ಪ್ರಸ್ತಾವನೆ :

ಮೇಲೆ ಓದಲಾದ (1) ರ ಸರ್ಕಾರಿ ಆದೇಶದಲ್ಲಿ ಸರ್ಕಾರಿ ಮತ್ತು ಖಾಸಗಿ ಶಿಕ್ಷಣ ಮಹಾವಿದ್ಯಾಲಯಗಳ ಸ್ಥಿತಿಗಳು, ಮೂಲಸೌಕರ್ಯಗಳ ಬಗ್ಗೆ ಅಧ್ಯಯನ ನಡೆಸಿ, ಸರ್ಕಾರಕ್ಕೆ ವರದಿ ಸಲ್ಲಿಸಲು ಪ್ರೊ. ಸಜ್ಜನಶೆಟ್ಟಿ, ಕರ್ನಾಟಕ ಕಾಲೇಜು, ಬೀದರ್ ಇವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಬಿ.ಇಡಿ ಕಾಲೇಜುಗಳ ಅಧ್ಯಯನ ಸಮಿತಿಯ ಅಧ್ಯಕ್ಷರು ಈ ಕೆಳಕಂಡ ನಾಲ್ವರು ತಜ್ಞರನ್ನು ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ರಚಿಸಲಾದ ಸಮಿತಿಗೆ ಸಹ ಸದಸ್ಯರನ್ನಾಗಿ ನೇಮಿಸುವಂತೆ ಕೋರಿದ್ದಾರೆ. ಈ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಅದರಂತೆ ಈ ಕೆಳಕಂಡ ಅದೇಶ.

ಕ್ರ.ಸಂ.	ಹೆಸರು ಮತ್ತು ವಿಳಾಸ
1)	ಡಾ :: ರಾಜೀವ ಲೋಚನ್, ತತ್ವಶಾಸ್ತ್ರ ವಿಭಾಗದ ಮುಖ್ಯಸ್ಥರು, ಎಂ.ಎಂ. ಪ್ರಥಮ ದರ್ಜೆ ಮಹಾವಿದ್ಯಾಲಯ, ಚಿತ್ರದುರ್ಗ–577 501.
2)	ಡಾ:: ವಿಶ್ವನಾಥ್, ವಿ. ಮಲಗಿ ಪ್ರಾಂಶುಪಾಲರು, ಬಿ.ಇಡಿ ವಿಭಾಗ, ಶಿಕ್ಷಣ ಮಹಾವಿದ್ಯಾಲಯ, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಾಪುರ – 586 101.
3)	ಡಾ :: ಕೆ.ಎನ್. ಬ ಬೆಳಕೇರಿ, ಪ್ರಾಂಶುಪಾಲರು, ಕಾಳಮ್ಮ ಕಾಲೋನಿ, ಹೆಗ್ಡೆ –581 330, ಕಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
4)	ಪ್ರೊ. ಬಸವರಾಜ ಹಳೆಮನಿ, ಕೆ.ಎಲ್.ಇ. ಶಿಕ್ಷಣ ಮಹಾವಿದ್ಯಾಲಯ, ವಿಜಯನಗರ, ಉನಕಲ್ ಕ್ರಾಸ್, ಹುಬ್ಬಳ್ಳಿ – 580–031.

ಸರ್ಕಾರಿ ಆದೇಶ ಸಂಖ್ಯೆ : ಇಡಿ 194 ಯುಎನ್ಇ 2009 ಬೆಂಗಳೂರು, ದಿನಾಂಕ : 31ನೇ ಮೇ, 2010

ಮೇಲ್ಕಂಡ ಸಂದರ್ಭದಲ್ಲಿ, ರಾಜ್ಯದಲ್ಲಿನ ಶಿಕ್ಷಣ ಮಹಾವಿದ್ಯಾಲಯಗಳ ಸ್ಥಿತಿಗತಿಗಳು ಮತ್ತು ಮೂಲ ಸೌಕರ್ಯಗಳ ಅಧ್ಯಯನ ನಡೆಸಿ, ವರದಿ ಸಲ್ಲಿಸಲು ರಚಿಸಲಾಗಿರುವ ಸಮಿತಿಗೆ ಈ ಕೆಳಕಂಡವರನ್ನು ಸಹ ಸದಸ್ಯರನ್ನಾಗಿ ನೇಮಿಸಲಾಗಿದೆ.

ಕ್ರ.ಸಂ.	ಹೆಸರು ಮತ್ತು ವಿಳಾಸ
1)	ಡಾ :: ರಾಜೀವ ಲೋಚನ್, ತತ್ವಶಾಸ್ತ್ರ ವಿಭಾಗದ ಮುಖ್ಯಸ್ಥರು, ಎಂ.ಎಂ. ಪ್ರಥಮ ದರ್ಜೆ ಮಹಾವಿದ್ಯಾಲಯ, ಚಿತ್ರದುರ್ಗ–577 501.
2)	ಡಾ:: ವಿಶ್ವನಾಥ್, ವಿ. ಮಲಗಿ ಪ್ರಾಂಶುಪಾಲರು, ಬಿ.ಇಡಿ ವಿಭಾಗ, ಶಿಕ್ಷಣ ಮಹಾವಿದ್ಯಾಲಯ, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಾಪುರ – 586 101.
3)	ಡಾ :: ಕೆ.ಎನ್. ಬ ಬೆಳಕೇರಿ, ಪ್ರಾಂಶುಪಾಲರು, ಕಾಳಮ್ಮ ಕಾಲೋನಿ, ಹೆಗ್ಡೆ –581 330, ಕಮಟಾ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
4)	ಪ್ರೊ. ಬಸವರಾಜ ಹಳೆಮನಿ, ಕೆ.ಎಲ್.ಇ. ಶಿಕ್ಷಣ ಮಹಾವಿದ್ಯಾಲಯ, ವಿಜಯನಗರ, ಉನಕಲ್ ಕ್ರಾಸ್, ಹುಬ್ಬಳ್ಳಿ – 580–031.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಯು. ಬಿ. ಉಳವಿ

ಸರ್ಕಾರದ ಅಧೀನ ಕಾರ್ಯದರ್ಶಿ,

ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು).

ಪಿ.ಆರ್. 1748